ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 133 ಸಂಚಿಕೆ- 133 | PAGE-8 ಪುಟ-8 | ಶುಕ್ರವಾರ 04.07.2025 | RS.2/- ಬೆಲೆ 2/-

## ಮಹಿಳೆಯರನ್ನು ನಿಂದಿಸುವುದೇ ಬಿಜೆಪಿಗರ ಕೆಲಸ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.3: ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಕುರಿತು ಅವಹೇಳನಕಾರಿ ಹೇಳಿಕೆ ಆರೋಪ ಹೊತ್ತಿರುವ ಬಿಜೆಪಿಯ ವಿಧಾನ ಪರಿಷತ್ ಸದಸ್ಯ ರವಿಕುಮಾರ್ ವಿರುದ್ಧ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕಿಡಿಕಾರಿದ್ದಾರೆ.

ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕರ್ನಾಟಕದ ಬಿಜೆಪಿ ನಾಯಕರಿಂದ ಮಹಿಳೆಯರ ನಿಂದನೆ ನಿರಂತರವಾಗಿ ನಡೆ-ಯುತ್ತಿದೆ. ಓರ್ವ ಹಿರಿಯ ಮಹಿಳಾ ಐಎಎಸ್ ಅಧಿಕಾರಿ ಬಗ್ಗೆ ಕೆಟ್ಟದಾಗಿ ಮಾತನಾಡಿರುವ ರೀತಿ ಬಿಜೆಪಿ ಎಂಎಲ್‌ಸಿ ಅವರ ಮನಸ್ಥಿತಿ ಎಂಥಹದ್ದು ಎಂದು ತೋರಿಸುತ್ತದೆ. ರವಿಕುಮಾರ್ ಅವರು ಸಮಸ್ತ ಮಹಿಳಾ ಕುಲಕ್ಕೆ ಮಾಡಿರುವ ಅವಮಾನ ಇದಾಗಿದೆ. ರವಿಕುಮಾರ್ ಅವರ ಹೇಳಿಕೆಯನ್ನು ಕೇಂದ್ರ ಬಿಜೆಪಿ



ನಾಯಕರು ಸಮರ್ಥಿಸಿಕೊಳ್ಳುವರೇ ಎಂದು ಪ್ರಶ್ನಿಸಿದ್ದಾರೆ. ಕಳೆದ ಬೆಳಗಾವಿ ಅಧಿವೇಶನದ ವೇಳೆಯಲ್ಲಿ ಸಿಟಿ ರವಿ ಅವರು ನನ್ನ ಬಗ್ಗೆ ಕೆಟ್ಟದಾಗಿ ಮಾತನಾಡಿದಾಗ ಆ ಪಕ್ಷದ ನಾಯಕರು ಒಂದೂ ಮಾತನಾಡಲಿಲ್ಲ. ಇಂತಹ ನಾಯಕರ ಹೇಳಿಕೆಗಳಿಗೆ ಕೇಂದ್ರದ ನಾಯಕರು ಪರೋಕ್ಷ ಬೆಂಬಲ ನೀಡಿದಂತಿದೆ. ಇದು ಬಿಜೆಪಿ ನಾಯಕರು ಮಹಿಳೆಯರಿಗೆ ಕೊಡುವ ಗೌರವ ಎಂತಹದ್ದು ಎಂಬುದನ್ನು ತೋರಿಸುತ್ತದೆ. ಜವಾಬ್ದಾರಿಯುತ ಸ್ಥಾನದಲ್ಲಿದ್ದುಕೊಂಡು ಇಂತಹ ಅವಹೇಳನಕಾರಿ ಪದಗಳನ್ನು ಬಳಸುವ ಬಿಜೆಪಿ ನಾಯಕರಿಗೆ ಬುದ್ಧಿ ಭ್ರಮಣೆಯಾಗಿದೆ ಅನಿಸುತ್ತದೆ. ಇನ್ನು ಮುಂದಾದರೂ ಇಂತಹ ಹೇಳಿಕೆಗಳನ್ನು ನೀಡದೇ ಜವಾಬ್ದಾರಿಯಿಂದ ವರ್ತಿಸಲಿ ಎಂದು ಹೇಳಿದ್ದಾರೆ.

### ಕ್ಷಮೆಯಾಚನೆಗೆ ಪಟ್ಟು

ಸಾರ್ವಜನಿಕವಾಗಿ ಮಹಿಳಾ ಅಧಿಕಾರಿ ಬಗ್ಗೆ ಕೆಟ್ಟದಾಗಿ ಮಾತನಾಡಿರುವ ರವಿಕುಮಾರ್ ಅವರು ಕೂಡಲೇ ಕ್ಷಮೆಯಾಚಿಸಬೇಕು. ತಮ್ಮ ತಪ್ಪನ್ನು ಅರಿವು ಮಾಡಿಕೊಂಡು ಕ್ಷಮೆ ಕೇಳಲಿ, ಇಲ್ಲವಾದರೆ ರವಿಕುಮಾರ್ ಅವರು ಸಾರ್ವಜನಿಕರ ಪ್ರತಿಭಟನೆಯನ್ನು ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

## ಬಾವಿಗೆ ವಾಹನ ಬಿದ್ದು ಇಬ್ಬರು ಸಾವು; ಸುದ್ದಿ ಕೇಳಿ ಜೀವ ಬಿಟ್ಟ ತಾಯಿ







ಮಲ್ಲಮ್ಮ ನುಡಿ ವಾರ್ತೆ ಬೀದರ. ಜು. 03: ತಾಲೂಕಿನ ಘೋಡಂಪಳ್ಳಿ ಗ್ರಾಮದ ಬಳಿ ಬುಧವಾರ (ಜು.02) ರಾತ್ರಿ 10ರ ಸುಮಾರಿಗೆ ಗೂಡ್ಸ್ ವಾಹನವೊಂದು ರಸ್ತೆ ಪಕ್ಕದ ಬಾವಿಗೆ ಉರುಳಿ, ಅದರಲ್ಲಿದ್ದ ಇಬ್ಬರು ಸಾವನಪ್ಪಿದರು. ಮತ್ತೊಂದೆಡೆ ಮಗನ ಸಾವಿನ ಸುದ್ದಿ ತಿಳಿದು ತಾಯಿ ಸಹ ಹೃದಯಾಘಾತದಿಂದ ಸಾವನಪ್ಪಿರುವ ಮನಕಲಕುವ ಘಟನೆ ನಡೆದಿದೆ. ಗೂಡ್ಸ್ ವಾಹನ ಬಾವಿಗೆ ಬಿದ್ದು ಮಗ ಲಕ್ಷ್ಮಿಕಾಂತ್ ಜೋಶಿ ಅಲಿಯಾಸ್ ಕಾಂತರಾಜು (45) ಸಾವನಪ್ಪಿದ್ದಾರೆ, ಸುದ್ದಿ ಕೇಳಿ ಆಘಾತಗೊಂಡ ತಾಯಿ ಶಾರದಾಬಾಯಿ (86) ಹೃದಯಾಘಾತದಿಂದ ಕುಸಿದು ಬಿದ್ದು ಸಾವನ್ನಪ್ಪಿದ್ದಾರೆ. ಒಂದೇ ದಿನ ತಾಯಿ- ಮಗನ ಸಾವು ಘಟನೆಯಿಂದ ಘೋಡಂಪಳ್ಳಿ ಗ್ರಾಮದಲ್ಲಿ ಶೋಕದಛಾಯೆ ಆವರಿಸಿದ್ದು, ಕುಟುಂಬಸ್ಥರ ಆಕ್ರಂದನ ಮನಕಲಕುವಂತಿದೆ. ಅಪಘಾತದಲ್ಲಿ ಘೋಡಂಪಳ್ಳಿ ಗ್ರಾಮದ ರವಿ ಪಾಗದೊಡ್ಡಿ (18) ಸಹ ಸಾವನಪ್ಪಿದ್ದಾರೆ. ಘೋಡಂಪಳ್ಳಿಯ ಅರ್ಜುನ್, ಪ್ರಜ್ವಲ್, ಪವನ್ ಮತ್ತು ಸಂಗಮೇಶ್ ಗೆ ಗಂಭೀರವಾದ ಗಾಯಗಳಾಗಿವೆ. ಗಾಯಾಳುಗಳಿಗೆ ಬೀದರ್‌ನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಅತಿ ವೇಗದ ಚಾಲನೆ ಅಪಘಾತಕ್ಕೆ ಕಾರಣ ಎನ್ನಲಾಗಿದೆ ಘಟನೆ ಕುರಿತಂತೆ ಗಾಂಧೀಗಂಜ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರವಿಕುಮಾರ್ ವಿರುದ್ಧ ಕೇಸ್ ದಾಖಲು

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.3: ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿದ್ದಕ್ಕೆ ಬಿಜೆಪಿ ಪರಿಷತ್ ಸದಸ್ಯ ರವಿಕುಮಾರ್ ವಿರುದ್ಧ ವಿಧಾನಸೌದ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಜೆಪಿನಗರದ ನಿವಾಸಿಯಾಗಿರುವ ನಂದಾದೀಪಾ ಮಹಿಳಾ ಸಂಘದ ಅಧ್ಯಕ್ಷೆ ನಾಗರತ್ನ ಅವರು ನೀಡಿದ ದೂರಿನ ಹಿನ್ನೆಲೆಯಲ್ಲಿ ಬಿಎನ್‌ಎಸ್ ಸೆಕ್ಷನ್ 351(3) (ಅನೈತಿಕತೆಯ ಆರೋಪ), 75(3) (ಅಶ್ಲೀಲಹೇಳಿಕೆ), 79(ಮಹಿಳೆಯ ಮಾನಕ್ಕೆಕುಂದು ತರುವಉದ್ದೇಶದಿಂದ ಪ್ರಯೋಗಿಸಲಾದ ಪದ) ಅಡಿ ಪ್ರಕರಣ ದಾಖಲಾಗಿದೆ.



ದೂರಿನಲ್ಲಿ: ನಾನು ನಂದಾದೀಪಾ ಮಹಿಳಾಸಂಘದ ಅಧ್ಯಕ್ಷಿಯಾಗಿರುತ್ತೇನೆ. ಜುಲೈ 1 ರಂದು ಬಿಜೆಪಿ ನಾಯಕರು ಮಹಾತ್ಮ ಗಾಂಧಿ ಪ್ರತಿಮೆಬಳಿ ಪ್ರತಿಭಟನೆ ನಡೆಸಿ ಮಾತನಾಡುತ್ತಿದ್ದರು. ಈ ಸಂದರ್ಭದಲ್ಲಿ ರವಿಕುಮಾರ್ ಅವರು ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಶ್ರೀಮತಿ, ಶಾಲಿನಿ ರಜನೀಶ್ ಅವರನ್ನು ಅಸಭ್ಯ ರೀತಿಯಲ್ಲಿ "ಅವರು ರಾತ್ರಿ ಸರ್ಕಾರಕ್ಕೆ ಹಗಲು ಸಿಎಂಗೆ ಕೆಲಸ ಮಾಡುತ್ತಾರೆಂದು" ಸಾರ್ವಜನಿಕವಾಗಿ ಹೇಳಿಕೆ ನೀಡಿದ್ದು ಟಿವಿಯಲ್ಲಿ ಪ್ರಸಾರವಾಗಿತ್ತು. ಟಿವಿಯಲ್ಲಿ ಬಂದ ಸುದ್ದಿ ನೋಡಿ ನನಗೆ ನೋವುಂಟಾಗಿದ್ದು, ಅವರ ಹೇಳಿಕೆಯು ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿ ಹುದ್ದೆಗೆ ಆಗೌರವ ತೋರಿದಂತಾಗಿದೆ. ಶಾಲಿನಿ ರಜನೀಶ್ ಅವರ ಗೌರವಕ್ಕೆ ಕುಂದುಂಟು ಮಾಡಿ ಇಡಿ ಮಹಿಳಾ ಕುಲಕ್ಕೆ ಆಗೌರವ ತೋರಿರುತ್ತಾರೆ. ಇವರ ಮಾತು ಲೈಂಗಿಕ ಅರ್ಥ ಬರುವಂತಹ ಹೇಳಿಕೆಯಾಗಿದ್ದು ಮುಖ್ಯ ಕಾರ್ಯದರ್ಶಿರವರ ಖ್ಯಾತಿಗೆ ಹಾನಿ ಉಂಟು ಮಾಡಿದೆ. ರವಿಕುಮಾರ್ ಹೇಳಿಕೆಯಿಂದ ಮಹಿಳೆ ಹಾಗೂ ಮಹಿಳಾ ಸಮಾಜಕ್ಕೂ ಆಗೌರವ ಉಂಟಾಗಿದ್ದು, ಅವರ ವಿರುದ್ಧ ಕಾನೂನು ರೀತಿ ಕ್ರಮ ಜರುಗಿಸಬೇಕೆಂದು ಮನವಿ ಮಾಡುತ್ತಿದ್ದೇನೆ.

## ಕಾಂಗ್ರೆಸ್‌ನಲ್ಲಿ ರಾಜಕೀಯ ಬೆಳವಣಿಗೆಯಾಗ್ತಿದೆ: ನಿಖಿಲ್ ಕುಮಾರಸ್ವಾಮಿ

ಮಲ್ಲಮ್ಮನುಡಿವಾರ್ತೆ ಬೀದರ್:ಜು.3: ಸೆಪ್ಟೆಂಬರ್ ಕ್ರಾಂತಿ ಆಗುತ್ತಾ ಗೊತ್ತಿಲ್ಲ, ಆದರೆ ಕಾಂಗ್ರೆಸ್‌ನಲ್ಲಿ ರಾಜಕೀಯ ಬೆಳವಣಿಗೆ ಆಗುತ್ತಿದೆ ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದರು.

ಜಿಲ್ಲೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಅದೇನೋ ಸೆಪ್ಟೆಂಬರ್‌ಗೆ ಕ್ರಾಂತಿ ಆಗುತ್ತೆ, ಕ್ರಾಂತಿಯಾಗುತ್ತದೆ ಎನ್ನುತ್ತಿದ್ದಾರೆ. ಆದರೆ ಆ ಕ್ರಾಂತಿಯಾಗುತ್ತದೋ ಇಲ್ವೋ ಗೊತ್ತಿಲ್ಲ. ಆದರೆ ಕಾಂಗ್ರೆಸ್‌ನಲ್ಲಿ ರಾಜಕೀಯ ಬೆಳವಣಿಗಳು ಆಗುತ್ತಿವೆ. ಕಾದು ನೋಡೋಣ ಎಂದರು.



ಸಿದ್ದರಾಮಯ್ಯನವರು ಐದು ವರ್ಷ ನಾನೇ ಸಿಎಂ ಎಂದು ಹೇಳುತ್ತಿದ್ದಾರೆ. ಆದರೆ ಒಂದಂತು ಸತ್ಯ ಕಾಂಗ್ರೆಸ್‌ನಲ್ಲಿ ಹಲವು ಗುಂಪುಗಳಿದ್ದು, ಕೆಲವು ಗುಂಪುಗಳು ಸೈಲೆಂಟಾಗಿ ಕೆಲಸ ಮಾಡುತ್ತಿವೆ. ಕೆಲವು ಗುಂಪುಗಳು ನೇರವಾಗಿಯೇ ಗುಂಪುಗಾರಿಕೆ ಮಾಡುತ್ತಿದ್ದು, ಈ ಬಗ್ಗೆ ಯತೀಂದ್ರ ಸಿದ್ದರಾಮಯ್ಯ ಹೇಳಿಕೆ ನೀಡಿದ್ದಾರೆ. ಈ ಸರ್ಕಾರದ ಮೇಲೆ ರಾಜ್ಯದ ಜನರು ವಿಶ್ವಾಸ ಕಳೆದುಕೊಂಡು ಬಹಳ ದಿನವಾಗಿದ್ದು, ಸರ್ಕಾರ ಕಾಲಹರಣ ಮಾಡುತ್ತಿದೆ ಎಂದರು. ಸರ್ಕಾರದ ಆರ್ಥಿಕ ಸ್ಥಿತಿ ತೆರೆದ ಪುಸ್ತಕದ ರೀತಿಯಾಗಿದೆ. ನಿಮ್ಮ ಪಕ್ಷದ ಶಾಸಕರೇ ಅನುದಾನ ಸಿಗುತ್ತಿಲ್ಲ ಎಂದು ಅಸಮಾಧಾನ ಹೊರಹಾಕಿದ್ದಾರೆ. ಶಾಸಕರು ಅಸಹಾಯಕತೆಯಿಂದ ಹೇಳಿಕೆ ನೀಡುತ್ತಿದ್ದು, ಕ್ಷೇತ್ರದ ಅಭಿವೃದ್ಧಿಗೆ ಒಂದು ನಯಾಪೈಸೆಯನ್ನು ನೀಡಿಲ್ಲ ಎಂದು ಕಿಡಿಕಾರಿದರು.

## ನಿರುದ್ಯೋಗ ನಿವಾರಣೆಗೆ ವಿಶೇಷ ಆರ್ಥಿಕ ವಲಯ ಘೋಷಣೆಗೆ ನಾಗಮಾರಪಳ್ಳಿ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ ಬೀದರ್, ಜು.3: ಗಂಭೀರವಾಗಿ ಕಾಡುತ್ತಿರುವ ನಿರುದ್ಯೋಗ ಸಮಸ್ಯೆ ನಿವಾರಣೆಗೆ ಜಿಲ್ಲೆಯನ್ನು ವಿಶೇಷ ಆರ್ಥಿಕ ವಲಯವನ್ನಾಗಿ ಘೋಷಿಸಬೇಕು ಎಂದು ಜೆಡಿಎಸ್ ನಾಯಕ ಸೂರ್ಯಕಾಂತ ನಾಗಮಾರಪಳ್ಳಿ ಅವರು ಒತ್ತಾಯಿಸಿದರು. ನಗರದ ಲಾವಣ್ಯ ಕಲ್ಯಾಣ ಮಂಟಪದಲ್ಲಿ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ಗುರುವಾರ ಜರುಗಿದ ಕಾರ್ಯಕರ್ತರ ಸಮಾವೇಶ ಮತ್ತು ಸದಸ್ಯತ್ವನೋಂದಣಿ ಅಭಿಯಾನದಲ್ಲಿ ಮಾತನಾಡಿದ ಅವರು, ಬೃಹತ್




ಕೈಗಾರಿಕೆ ಸ್ಥಾಪನೆಯಿಂದಷ್ಟೇ ಜಿಲ್ಲೆಯ ಅಭಿವೃದ್ದಿಯ ವೇಗ ಹೆಚ್ಚಬಹುದು ಎಂದು ಹೇಳಿದರು. ಮಾಜಿ ಮುಖ್ಯಮಂತ್ರಿಗಳೂ ಆಗಿರುವ ಎಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರದಲ್ಲಿ ಸಚಿವರಾಗಿರುವುದರಿಂದ ಜಿಲ್ಲೆಯ ಜನರ ನಿರೀಕ್ಷೆ ಹೆಚ್ಚಿದೆ. ಕುಮಾರಸ್ವಾಮಿ ಅವರು 2006 ರಲ್ಲಿ ಮುಖ್ಯಮಂತ್ರಿ ಆಗಿದ್ದಾಗ ಬೀದರ್ ಜಿಲ್ಲೆಯಲ್ಲಿ ಸಿದ್ಧ ಉಡುಪು ತಯ್ಯಾರಿಕಾ ಘಟಕ ಸ್ಥಾಪಿಸುವ ಭರವಸೆ ನೀಡಿದ್ದರು. ಈ ಕುರಿತು ಬಜೆಟ್‌ನಲ್ಲೂ ಘೋಷಣೆ ಮಾಡಲಾಗಿತ್ತು. ಆದರೆ, ಅದು

(2ನೇ ಪುಟ ನೋಡಿ)

## ಎಂಎಲ್‌ಸಿ ರವಿಕುಮಾರ್ ಮೇಲೆ ನಿಯಮಾವಳಿಗಳ ಪ್ರಕಾರ ಕ್ರಮ : ಹೊರಟ್ಟಿ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.3: ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಬಗ್ಗೆ ಅವಹೇಳನಕಾರಿ ಮಾತಾಡಿರೋ ಬಿಜೆಪಿ ಎಂಎಲ್‌ಸಿ ರವಿಕುಮಾರ್ ವಿರುದ್ಧ ಕ್ರಮಕ್ಕೆ ಪ್ರದೇಶ ಕಾಂಗ್ರೆಸ್ ಕಮಿಟಿಯಿಂದ ದೂರು ಬಂದಿದೆ ಅಂತ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್‌ನಿಂದ ನನಗೆ ದೂರು ಕೊಟ್ಟಿದ್ದಾರೆ. ರವಿಕುಮಾರ್ ಅವರು ಸಿಎಸ್‌ಗೆ ಅಸಂಬದ್ಧ ಪದ ಬಳಕೆ ಮಾಡಿದ್ದಾರೆ. ಅವರ ಮೇಲೆ ಕ್ರಮಕ್ಕೆ ಮನವಿ ಮಾಡಿದ್ದಾರೆ. ಎಂಎಲ್‌ಸಿ ಸ್ಥಾನದಿಂದ ಅಮಾನತು ಮಾಡಬೇಕು ಅಂತ ಕೇಳಿದ್ದಾರೆ. ರವಿಕುಮಾರ್‌ಗೆ



ನಾನು ಪತ್ರ ಬರೆದಿದ್ದೇನೆ. ಹೀಗೆ ದೂರು ಬಂದಿದೆ. ನಿಮ್ಮ ಅಭಿಪ್ರಾಯ ಕೊಡಿ ಅಂತ ಕೇಳಿದ್ದೀನಿ. ಅವರು ಅಭಿಪ್ರಾಯ ಕೊಟ್ಟ ಮೇಲೆ ಮುಂದಿನ ತೀರ್ಮಾನ ಮಾಡ್ತೀನಿ ಎಂದಿದ್ದಾರೆ.

ರವಿಕುಮಾರ್ ಅವರ ಸದಸ್ಯತ್ವ ರದ್ದು ಮಾಡೋ ಅಧಿಕಾರ ನನಗೆ ಇಲ್ಲ. ಕಾನೂನು ತಜ್ಞರ ಅಭಿಪ್ರಾಯ ಪಡೆದು ಮುಂದಿನ ತೀರ್ಮಾನ ಮಾಡ್ತೀವಿ. ವಿಧಾನ ಪರಿಷತ್ ನಿಯಮದ ಪ್ರಕಾರ ಮುಂದಿನ ಕ್ರಮ ತೆಗೆದುಕೊಳ್ತೀವಿ. ರವಿಕುಮಾರ್ ಅಭಿಪ್ರಾಯ ಪಡೆಯದೇ ನಾನೇನು ಕ್ರಮ ತೆಗೆದುಕೊಳ್ಳಲು ಆಗಲ್ಲ ಅಂತ ಸ್ಪಷ್ಟಪಡಿಸಿದ್ದಾರೆ. ಇದು ವಿಧಾನಸೌಧದ ಪರಿಮಿತಿಯಲ್ಲಿ ನಡೆದಿದೆ. ಅದಕ್ಕೆ ನಾನು ರವಿಕುಮಾರ್‌ಗೆ ಪತ್ರ ಬರೆದಿದ್ದೇನೆ. ಪತ್ರಕ್ಕೆ ಅವರ ಅಭಿಪ್ರಾಯ ಬರಲಿ, ರಾಜ್ಯಸಭೆ ಸೆಕ್ರೆಟರಿ ಜನರಲ್ ಅವರ ಅಭಿಪ್ರಾಯ ಪಡೆಯುತ್ತೇನೆ. ಪೊಲೀಸ್ ಕೇಸ್ ಬಗ್ಗೆ ನನಗೆ ಗೊತ್ತಿಲ್ಲ. ಶಾಸಕರನ್ನ ಅರೆಸ್ಟ್ ಮಾಡಿದ್ರೆ ನಮಗೆ ಮಾಹಿತಿ ಕೊಡಬೇಕು ಅಷ್ಟೆ. ನಾವು ರವಿಕುಮಾರ್ ಅಭಿಪ್ರಾಯ ಪಡೆದು ನಿಯಮದ ಪ್ರಕಾರ ಕ್ರಮ ತೆಗೆದುಕೊಳ್ತೀನಿ ಅಂತ ತಿಳಿಸಿದ್ದಾರೆ.

## ವಾರದವರೆಗೆ ರಾಜ್ಯಾದ್ಯಂತ ಬಿರುಗಾಳಿ ಸಹಿತ ಭಾರಿ ಮಳೆ; ಕಟ್ಟೆಚ್ಚರ ವಹಿಸಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.3: ಮುಂದಿನ ಏಳು ದಿನ ರಾಜ್ಯಾದ್ಯಂತ ವ್ಯಾಪಕ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಹಲವು ಜಿಲ್ಲೆಗಳಲ್ಲಿ ಅತ್ಯಂತ ಹೆಚ್ಚಿನ, ಕೆಲವು ಕಡೆಗಳಲ್ಲಿ ಧಾರಾ-ಕಾರ ಮಳೆಯನ್ನು ನಿರೀಕ್ಷಿಸಲಾಗಿದೆ. ಮಧ್ಯ ಮತ್ತು ಪೂರ್ವ ಭಾರತದ ಮೂಲಕ ಸಾಗುವ ಮುಂಗಾರು ಮಾರುತದಿಂದ ಮಹಾರಾಷ್ಟ್ರ-ಕರ್ನಾಟಕ ಕರಾವಳಿಯುದ್ದಕ್ಕೂ ಭಾರಿ ಮಳೆಯಾಗಲಿದೆ ಎಂದು



ಮಾಹಿತಿ ನೀಡಿದೆ.


ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಉಡುಪಿಯ ಕರಾವಳಿ ಜಿಲ್ಲೆಗಳಲ್ಲಿ ಗಂಟೆಗೆ 30–40 ಕಿಮೀ ವೇಗದ ಬಿರುಗಾಳಿಯೊಂದಿಗೆ ಭಾರಿ ಮಳೆಯಾಗಲಿದೆ. ಕರಾವಳಿಯಲ್ಲಿ ಮುಂದಿನ ಎರಡು ದಿನ ಇದೇ ಪರಿಸ್ಥಿತಿ ಮುಂದುವರೆಯುವ ನಿರೀಕ್ಷೆಯಿದೆ. ನಂತರ ಕ್ರಮೇಣ ತೀವ್ರತೆಯು ಕಡಿಮೆಯಾಗಲಿದೆ. ಆದಾಗ್ಯೂ ಹಗುರ, ಸಾಧಾರಣ ಮಳೆ ಮುಂದುವರಿಯುವ ಸಾಧ್ಯತೆಯಿದೆ

(2ನೇ ಪುಟ ನೋಡಿ)

## ಕಲಬುರಗಿ: ಡೆಂಗ್ಯೂ ಮತ್ತು ಚಿಕೂನ್ ಗುನ್ಯಾ ಪತ್ತೆ: ಸಾರ್ವಜನಿಕರು ಮುನ್ನೆಚ್ಚರಿಕೆವಹಿಸಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.03: ರಾಜ್ಯದಲ್ಲಿ ಈಗಾಗಲೇ ಡೆಂಗ್ಯೂ ಪ್ರಕರಣಗಳು ವ್ಯಾಪಕವಾಗಿ ಕಾಣಿಸಿಕೊಳ್ಳುತ್ತಿದ್ದು, ಅದೇ ರೀತಿ ಕಲಬುರಗಿ ನಗರದಲ್ಲಿಯೂ ಸಹ ಪ್ರಕರಣಗಳು ಅಲ್ಲಲ್ಲಿ ಕಾಣಿಸಿಕೊಳ್ಳುತ್ತಿದೆ. ಈ ನಿಟ್ಟಿನಲ್ಲಿ ಈಗಾಗಲೇ ನಗರದ ವಿವಿಧ ಬಡಾವಣೆಗಳಲ್ಲಿರುವ ಆಸ್ಪತ್ರೆಗಳಲ್ಲಿ 2025ರ ಜನವರಿ ರಿಂದ ಇಲ್ಲಿಯವರೆಗೆ ದಾಖಾಲಾದ 3,250 ರೋಗಿಗಳ ರಕ್ತದ ಮಾದರಿಗಳನ್ನು ತೆಗೆದುಕೊಂಡು ಜಿಲ್ಲೆಯ ಪಿಎಚ್‌ಎಲ್ ಮತ್ತು ವಿಆರ್‌ಡಿಎಲ್ ಲ್ಯಾಬ್‌ಗಳಲ್ಲಿ ಪರೀಕ್ಷಿಸಲಾಗಿದೆ. ಅವುಗಳಲ್ಲಿ 122 ಖಚಿತ ಡೆಂಗ್ಯೂ ಪ್ರಕರಣಗಳು ಹಾಗೂ ಚಿಕೂನ್ ಗುನ್ಯಾ 724 ರಕ್ತದ ಮಾದರಿಗಳನ್ನು ಪರೀಕ್ಷಿಸಲಾಗಿ 21




ಖಚಿತ ಪ್ರಕರಣಗಳು ಪತ್ತೆಯಾಗಿವೆ

(2ನೇ ಪುಟ ನೋಡಿ)

**ಒಂದನೇ ಪುಟದಿಂದ**

## ಭಾರಿ ಮಳೆ; ಕಟ್ಟೆಚ್ಚರ ವಹಿಸಲು ಸೂಚನೆ

ಎನ್ನಲಾಗಿದೆ.ಬೆಳಗಾವಿ, ಧಾರವಾಡದಲ್ಲೂ ಭಾರಿ ಮಳೆ: ಉತ್ತರ ಒಳನಾಡಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಜುಲೈ 3 ಮತ್ತು 4 ರಂದು ಗಂಟೆಗೆ 40 ರಿಂದ 50 ಕಿಮೀ ವೇಗದ ಬಿರುಗಾಳಿಯೊಂದಿಗೆ ಭಾರಿ ಮಳೆಯಾಗುವ ಸಾಧ್ಯತೆಯಿದೆ. ಧಾರವಾಡದಲ್ಲೂ ಭಾರಿ ಮಳೆ ನಿರೀಕ್ಷೆಯಿದೆ. ಇನ್ನೂ ಬೀದರ್, ಬಾಗಲಕೋಟೆ, ಗದಗ, ಹಾವೇರಿ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ ಮತ್ತು ಯಾದಗಿರಿಯಲ್ಲಿ ಮುಂಗಾರು ಅವಧಿಯುದ್ದಕ್ಕೂ ಗಾಳಿ ಸಹಿತ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ.

ದಕ್ಷಿಣ ಒಳನಾಡಿನಲ್ಲೂ ಭಾರಿ ಮಳೆ ನಿರೀಕ್ಷೆ

ದಕ್ಷಿಣ ಒಳನಾಡಿನ ಚಿಕ್ಕಮಗಳೂರು, ಹಾಸನ, ಶಿವಮೊಗ್ಗ ಮತ್ತು ಕೊಡಗಿನಲ್ಲಿ ಇಂದು ಮತ್ತು ನಾಳೆ ಭಾರಿ ಮಳೆ ನಿರೀಕ್ಷಿಸಲಾಗಿದೆ. ಇತರ ಬಳ್ಳಾರಿ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಾಮರಾಜನಗರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು ಮತ್ತು ವಿಜಯನಗರ ಸೇರಿದಂತೆ ಇತರ ಜಿಲ್ಲೆಗಳಲ್ಲಿ ಚದುರಿದಂತೆ ಸಾಧಾರಣ ಮಳೆಯಾಗಲಿದೆ.

ಜುಲೈ 7 ರಿಂದ ರಾಜ್ಯಾದ್ಯಂತ ಮಳೆಯ ತೀವ್ರತೆ ಕಡಿಮೆಯಾಗುವ ನಿರೀಕ್ಷೆಯಿದೆ. ಆದಾಗ್ಯೂ, ಹಲವು ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆ ಜುಲೈ 9 ರವರೆಗೆ ಮುಂದುವರಿಯಬಹುದು ಎನ್ನಲಾಗಿದೆ.

ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮುಂದಿನ 48 ಗಂಟೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗಲಿದೆ. ಗಂಟೆಗೆ 40 ರಿಂದ 50 ಕಿಮೀ ವೇಗದಲ್ಲಿ ಗಾಳಿ ಬೀಸುವ ನಿರೀಕ್ಷೆಯಿದೆ, ಗರಿಷ್ಠ 27, ಕನಿಷ್ಠ 20 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗುವ ಸಾಧ್ಯತೆಯಿದೆ.

ಪ್ರವಾಹ, ಭೂಕುಸಿತದಂತಹ ಪ್ರದೇಶಗಳಲ್ಲಿರುವ ಜನರು ಕಟ್ಟೆಚ್ಚರ ವಹಿಸುವಂತೆ ಹವಾಮಾನ ಇಲಾಖೆ ಸೂಚಿಸಿದೆ. ಪರಿಸ್ಥಿತಿಯನ್ನು ಇಲಾಖೆ ಸೂಕ್ಷ್ಮವಾಗಿ ಪರಿಶೀಲಿಸುತ್ತಿದ್ದು,ನಿಯಮಿತವಾಗಿ ಸಲಹೆಗಳನ್ನು ನೀಡುತ್ತಿರುವುದಾಗಿ ಹವಾಮಾನ ಇಲಾಖೆ ಮುಖ್ಯಸ್ಥ ಎನ್ ಪುವಿಯರಸನ್ ತಿಳಿಸಿದ್ದಾರೆ.

## ಮುನ್ನೆಚ್ಚರಿಕೆವಹಿಸಲು ಡಿ.ಹೆಚ್.ಓ. ಸೂಚನೆ

ಎಂದು ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ. ಶರಣಬಸಪ್ಪಾ ಕ್ಯಾತನಾಳ ಅವರು ತಿಳಿಸಿದ್ದಾರೆ.

ಜನವರಿಯಿಂದ ಇಲ್ಲಿಯವರೆಗೆ ಯಾವುದೇ ಡೆಂಗ್ಯೂ ಖಚಿತ ಪ್ರಕರಣಗಳಲ್ಲಿ ಸಾವು ಸಂಭವಿಸಿರುವುದಿಲ್ಲ. ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಡೆಂಗ್ಯೂ ಕಡಿಮೆ ಪ್ರಕರಣಗಳು ಕಾಣಿಸಿಕೊಂಡಿದೆ. ನಗರ ಪ್ರದೇಶಗಳಲ್ಲಿ ನಿಯಮಿತವಾಗಿ ನಗರ ಆಶಾ ಕಾರ್ಯಕರ್ತೆಯರು ಡೆಂಗ್ಯೂ ಪ್ರಕರಣಗಳು ಕಾಣಿಸಿಕೊಂಡ ಪ್ರದೇಶದಲ್ಲಿ ಈಡೀಸ್ ಸೊಳ್ಳೆಗಳ ಲಾರ್ವಾ ಸಮೀಕ್ಷೆ ಹಾಗೂ ಅವುಗಳ ಮೇಲ್ವಿಚಾರಣೆ ಮಾಡಲಾಗುತ್ತಿದೆ. ಪ್ರತಿವಾರ ಜಿಲ್ಲೆಯ ನಗರ/ಪಟ್ಟಣ ಪ್ರದೇಶದಲ್ಲಿ ಪ್ರತಿ ಶುಕ್ರವಾರ ಗ್ರಾಮೀಣ ಪ್ರದೇಶದಿಂದ ಆರೋಗ್ಯ ಸಿಬ್ಬಂದಿಗಳನ್ನು ನಿಯೋಜಿಸಿ ಈಡೀಸ್ ಸೊಳ್ಳೆಗಳ ಲಾರ್ವಾ ಸಮೀಕ್ಷೆ, ನಿಯಂತ್ರಣ ಕ್ರಮಗಳ ಚಟುವಟಿಕೆಗಳು ಜರುಗಿಸಿ ಹಾಗೂ ಅವುಗಳ ಮೇಲ್ವಿಚಾರಣೆ ಮಾಡಲಾಗುತ್ತಿದೆ.

ಡೆಂಗ್ಯೂ ಸಂಭಂದಿತ ಆರೋಗ್ಯ ಶಿಕ್ಷಣವನ್ನು ಜಿಂಗಲ್ ಹಾಗೂ ಹಾಡುಗಳ ಮೂಲಕ ಮಹಾನಗರಪಾಲಿಕೆಯ ಕಸ ವಿಲೇವಾರಿ ಮಾಡುವ ವಾಹನದ ಮೂಲಕ ಪ್ರಸಾರ ಮಾಡಲಾಗುತ್ತಿದೆ. ಸೊಳ್ಳೆಗಳ ಸಾಂದ್ರತೆ ಹೆಚ್ಚು ಕಂಡು ಬಂದಲ್ಲಿ ಹಾಗೂ ಡೆಂಗ್ಯೂ ಪ್ರಕರಣಗಳು ಕಾಣಿಸಿಕೊಂಡ ಪ್ರದೇಶದಲ್ಲಿ ನಿಯಮಿತವಾಗಿ ಫಾಗಿಂಗ್ ಚಟುವಟಿಕೆಗಳನ್ನು ಮಾಡಲಾಗುತ್ತಿದೆ. ಖಾಸಗಿ ವೈದ್ಯರುಗಳಿಗೆ ಈಗಾಗಲೇ ಈ ರೋಗದ ಕುರಿತು ಮಾಹಿತಿಯನ್ನು ನೀಡಲಾಗಿದೆ.

ಜಿಲ್ಲಾ ಆಸ್ಪತ್ರೆಯಲ್ಲಿ ಪ್ರತ್ಯೇಕ ವಾರ್ಡು ಮೀಸಲು: ಜಿಲ್ಲಾ ಆಸ್ಪತ್ರೆಯಲ್ಲಿ ಡೆಂಗ್ಯೂ ರೋಗಿಗಳಿಗೆ ಪ್ರತ್ಯೇಕ ವಾರ್ಡನ್ನು ಮೀಸಲಿರಿಸಲಾಗಿದೆ. ಡೆಂಗ್ಯೂ ಪ್ರಕರಣಗಳನ್ನು ಖಚಿತ ಪಡಿಸಿಕೊಳ್ಳಲು ಜಿಲ್ಲಾ ಆಸ್ಪತ್ರೆಯಲ್ಲಿರುವ ಡಿಪಿಎಚ್‌ಎಲ್ ಮತ್ತು ವಿಆರ್‌ಡಿಎಲ್ ಲ್ಯಾಬ್‌ನಲ್ಲಿ ಉಚಿತವಾಗಿ ಟೆಸ್ಟ್ ಮಾಡಿಕೊಡಲಾಗುತ್ತದೆ.

ಪ್ಲೇಟ್ ಲೇಟ್‌ಗಳು ತುಂಬಾ ಗಂಭೀರ್ ಪರಿಸ್ಥಿತಿಯಲ್ಲಿ ಮಾತ್ರ ಬೇಕಾಗುತ್ತದೆ. 20000 ಪ್ಲೇಟ್ ಲೇಟ್‌ಗಳು ಇರುವವರೆಗೂ ಭಯಪಡುವ ಅಗತ್ಯ ಇಲ್ಲ. ಡೆಂಗ್ಯೂ ಜ್ವರ ಪ್ರಕರಣಗಳ ರೋಗಿಗಳಿಗೆ ಚಿಕಿತ್ಸೆಗಾಗಿ ಪ್ರಾಆಕೇ–2, ಸಆಕೇ–5 ಮತ್ತು ತಾಲ್ಲೂಕಾ ಆಸ್ಪತ್ರೆಗಳಲ್ಲಿ–10, ಜಿಲ್ಲಾ ಆಸ್ಪತ್ರೆ ಮತ್ತು ಇಎಸ್‌ಐ ಆಸ್ಪತ್ರೆಗಳಲ್ಲಿ ತಲಾ–20 ಹಾಸಿಗೆಗಳನ್ನು ಕಾಯ್ದಿರಿಸಲಾಗಿದೆ.

ಈ ಸಂಬಂಧವಾಗಿ ಜಿಲ್ಲೆಯ ಎಲ್ಲಾ ಖಾಸಗಿ ವೈದ್ಯರು ಸಂಶಯಾಸ್ಪದ ಡೆಂಗ್ಯೂ ಪ್ರಕರಣಗಳು ಕಂಡುಬಂದಲ್ಲಿ ಅವರನ್ನು ಡೆಂಗ್ಯೂ ಕಿಟ್‌ಗಳ ಮೂಲಕ ಪರೀಕ್ಷಿಸಿದರೂ ಅವರ ಇನ್ನೊಂದು ರಕ್ತದ ಮಾದರಿಯನ್ನು ಜಿಲ್ಲಾ ಆಸ್ಪತ್ರೆಯ ಡಿ.ಪಿ.ಎಚ್.ಎಲ್, ವಿಆರ್‌ಡಿಎಲ್ ಲ್ಯಾಬ್ ಅಥವಾ ಜಿಲ್ಲಾ ಸಮೀಕ್ಷಾ ಘಟಕದಲ್ಲಿರುವ ಅಧಿಕೃತ ಲ್ಯಾಬ್‌ಗಳಲ್ಲಿ ಅವುಗಳನ್ನು ಪರೀಕ್ಷಿಸಿ ಖಚಿತ ಪಡಿಸಿಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

ಈ ಒಂದು ಜ್ವರವು ಸಾಮಾನ್ಯ ಒಂದು ವೈರಸ್‌ನಿಂದ ಬರುವುದಾಗಿದ್ದು, ಇಂತಹ ಜ್ವರ ಪ್ರಕರಣಗಳಿಗೆ ಪ್ಯಾರಾಸಿಟಾಮೋಲ್ ಮಾತ್ರೆಗಳನ್ನು ನೀಡುವದರ ಮೂಲಕ ಶೇ. 90 ರೋಗಿಗಳು ಪ್ರಾಥಮಿಕ ಚಿಕಿತ್ಸೆದಿಂದಲೇ ಗುಣಮುಖ ಹೊಂದುತ್ತಾರೆ. ಆದರೆ ಪ್ರತಿಶತ 5 ರಿಂದ 10 ರಷ್ಟು ರೋಗಿಗಳು ಕೆಲವೊಂದು ಕ್ಲಿಷ್ಟಕರ ಸಂದರ್ಭಗಳಿಗೆ ಒಳಗಾದಂತಹ ಸಂದರ್ಭದಲ್ಲಿ ಜಿಲ್ಲಾ ಆಸ್ಪತ್ರೆಯಲ್ಲಿಯೇ ಇಂತಹ ರೋಗಿಗಳಿಗಾಗಿಯೇ ಒಂದು ವಿಶೇಷ ವಾರ್ಡನ್ನು ಕೂಡಾ ಮೀಸಲಿರಿಸಲಾಗಿದೆ.

ಈ ಒಂದು ಜ್ವರವೂ ಈಡೀಸ್ ಎಂಬ ಒಂದು ಜಾತಿಯ ಸೋಂಕಿತ ಸೊಳ್ಳೆ ಕಚ್ಚುವುದರಿಂದ ಬರುವುದರಿಂದ ಇದು ಸಾಮಾನ್ಯವಾಗಿ ಮನೆಯ ಹೊರಗಡೆ ಹಾಗೂ ಒಳಗಡೆ ಶೇಖರಿಸಿಟ್ಟ ಸ್ವಚ್ಛವಾದ ನೀರು ಹಾಗೂ ಮನೆಯ ಹೊರಗಡೆ ಬಿಸಾಕಿದ ಘನತಾಜ್ಯವಸ್ತುಗಳಾದ ತೆಂಗಿನ ಚಿಪ್ಪು, ಪ್ಲಾಸ್ಟಿಕ್ ಕಪ್ಪು ಹಾಗೂ ಇನ್ನಿತರ ಘನತ್ಯಾಜ್ಯ ವಸ್ತುಗಳಲ್ಲಿ ನಿಂತ ನೀರಿನಲ್ಲಿ ಮೊಟ್ಟೆ ಇಟ್ಟು ಸಂತತಿಯನ್ನು ಬೆಳೆಸುತ್ತವೆ. ಹೀಗಾಗಿ ಸಾರ್ವಜನಿಕರು ತಮ್ಮ ಮನೆಯಲ್ಲಿ ಹಾಗೂ ಮನೆಯ ಸುತ್ತ ಮುತ್ತಲಿರುವ ಶೇಖರಸಿಟ್ಟ ನೀರನ್ನು ವಾರದಲ್ಲಿ ಎರಡು ಬಾರಿ ಖಾಲಿ ಮಾಡಿ ತಿಕ್ಕಿ ತೊಳೆದು ಒಣಗಿಸಿ ನೀರಿನ ತೊಟ್ಟಿಗಳನ್ನು ಭದ್ರವಾಗಿ ಮುಚ್ಚಿಡುವುದರಿಂದ ಸೊಳ್ಳೆಯ ಸಂತತಿಯನ್ನು ಕಡಿಮೆ ಮಾಡಬಹುದಾಗಿದೆ. ಹಾಗೂ ಈ ಸೊಳ್ಳೆ ದಿನದ ಹೊತ್ತಿನಲ್ಲಿಯೇ ಕಚ್ಚುವುದುರಿಂದ ಮನೆಯಲ್ಲಿ ಮಕ್ಕಳು, ಹೆಣ್ಣು ಮಕ್ಕಳು ಹಾಗೂ ವಯಸ್ಸಾದ ಅಜ್ಜ ಅಜ್ಜಿಯಂದಿರು ದಿನ ಹೊತ್ತಿನಲ್ಲಿಯೂ ಮೈತುಂಬ ಬಟ್ಟೆಯನ್ನು ಹೊದ್ದಿಕೊಂಡು ಅಥವಾ ಸೊಳ್ಳೆ ಪರದೆಯನ್ನು ಕಟ್ಟಿಕೊಂಡು ಮಲಗಿಕೊಳ್ಳುವುದನ್ನು ರೂಡಿಸಿಕೊಂಡರೆ ಈ ರೋಗ ಹರಡದಂತೆ ತಡೆಯಬಹುದಾಗಿದೆ.

ಒಂದು ವೇಳೆ ಜ್ವರ ಮೈಕೈ ನೋವು, ಕಣ್ಣಿನ ಹಿಂಬಾಗದಲ್ಲಿ ನೋವು ಹಾಗೂ ಮೈಮೇಲೆ ರಕ್ತದ ಗಾದರಿಗಳು ಹಾಗೂ ಈ ಸಂಭಂದಿತವಾಗಿ ಯಾವುದೇ ತರನಾದಂತಹ ಜ್ವರ ಪ್ರಕರಣಗಳು ಕಾಣಿಸಿಕೊಂಡರೆ ತಮ್ಮ ಸಮೀಪದ ಸರಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆಯ ಸೌಲಭ್ಯ ಲಭ್ಯವಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಹೋಗಿ ಹಣವನ್ನು ವ್ಯಯಿಸಿಕೊಳ್ಳಬಾರದೆಂದು ಅವರು ತಿಳಿಸಿದ್ದಾರೆ.

## ವಲಯ ಘೋಷಣೆಗೆ ನಾಗಮಾರಪಳ್ಳಿ ಒತ್ತಾಯ

ಕಾರ್ಯಗತವಾಗಿರಲಿಲ್ಲ. ರಾಜ್ಯದ ಸರ್ವಾಂಗೀಣ ವಿಕಾಸಕ್ಕಾಗಿ ಸದಾ ಚಿಂತಿಸುವ ಕುಮಾರಸ್ವಾಮಿ ಅವರು ಈ ಬಾರಿ ಜಿಲ್ಲೆಗೆ ವಿಶೇಷ ಕೊಡುಗೆ ನೀಡುವ ಮೂಲಕ ಜಿಲ್ಲೆಯ

ದುಡಿಯುವ ಕೈಗಳಿಗೆ ಕೆಲಸ ನೀಡುವಂತಹ ಯೋಜನೆ ಕಾರ್ಯಗತಗೊಳಿಸುವ ವಿಶ್ವಾಸವಿದೆ ಎಂದು ಅವರು ತಿಳಿಸಿದರು.1982ರಲ್ಲಿಯೇ ಜಿಲ್ಲೆಯನ್ನು ಕೈಗಾರಿಕಾರಹಿತ ಜಿಲ್ಲೆಯನ್ನಾಗಿ ಘೋಷಿಸಲಾಗಿತ್ತು. ಬೀದರ್‌ನಲ್ಲಿ ಕೈಗಾರಿಕೆ ಸ್ಥಾಪನೆಗೆ ಉತ್ತೇಜನ ನೀಡುವ ಹಲವು ಯೋಜನೆ ಪ್ರಕಟಿಸಲಾಗಿತ್ತು. ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಿ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿತ್ತು. ಆದಾಗ್ಯೂ ದೊಡ್ಡ ಪ್ರಮಾಣದ ಕೈಗಾರಿಕೆಗಳು ಇಲ್ಲಿ ಸ್ಥಾಪನೆಯಾಗದಿದ್ದರಿಂದ ನಿರೀಕ್ಷಿತ ಪ್ರಮಾಣದಲ್ಲಿ ಉದ್ಯೋಗ ಸೃಷ್ಟಿಯಾಗಲಿಲ್ಲ. ಸ್ಥಾಪನೆಯಾದ ಕೈಗಾರಿಕಾ ಘಟಕಗಳ ಪೈಕಿ ಹೆಚ್ಚಿನವು ರೋಗಗ್ರಸ್ತವಾಗಿವೆ. ಹೀಗಾಗಿ ಕೈಗಾರಿಕೆಗಳ ಅಭಿವೃದ್ಧಿಯ ಕನಸು ಹಾಗೆಯೇ ಉಳಿದಿದೆ ಎಂದು ಅವರು ಹೇಳಿದರು.ಬೃಹತ್ ಕೈಗಾರಿಕೆ ಸ್ಥಾಪಿಸಲು ಬೇಕಾದ ಮೂಲ

ಸೌಕರ್ಯ, ಮಾನವ ಸಂಪನ್ಮೂಲ ಇವೆ. ರಸ್ತೆ, ರೈಲು ಮತ್ತು ವಿಮಾನ ಸೌಲಭ್ಯವೂ ಇದೆ. ಬೀದರ್ ಮತ್ತು ಹುಮನಾಬಾದ್‌ನಲ್ಲಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಲಾಗಿದೆ. ಬಂಡವಾಳ

ಹೂಡಿಕೆದಾರರಿಗೆ ಬೇಕಾದ ಎಲ್ಲ ಸವಲತ್ತುಗಳೂ ಜಿಲ್ಲೆಯಲ್ಲಿವೆ. ಇಲ್ಲಿರುವ ಸೌಲಭ್ಯಗಳನ್ನು ಜಿಲ್ಲೆಯ ಅಭಿವೃದ್ಧಿಗಾಗಿ ಬಳಸಿಕೊಳ್ಳಲು ದೊಡ್ಡ ಕೈಗಾರಿಕಾ ಘಟಕ ಸ್ಥಾಪಿಸಬೇಕಾದ ಅಗತ್ಯವಿದ್ದು, ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಈ ದಿಸೆಯಲ್ಲಿ ಅಗತ್ಯ ಕ್ರಮ ಕೈಗೊಳ್ಳುವ ವಿಶ್ವಾಸ ಇದೆ ಎಂದು ಅವರು ತಿಳಿಸಿದರು.

ಜಿಲ್ಲೆಯಲ್ಲಿ ಸೋಯಾಬಿನ್ ಅತ್ಯಧಿಕ ಪ್ರಮಾಣದಲ್ಲಿ ಬೆಳೆಯಲಾಗುತ್ತಿದೆ. ಸೋಯಾ ಆಧಾರಿತ ಕೈಗಾರಿಕಾ ಘಟಕ ಸ್ಥಾಪಿಸಿದ್ದಲ್ಲಿ ಜಿಲ್ಲೆಯ ನಿರುದ್ಯೋಗಿಗಳಿಗೆ ಅನುಕೂಲವಾಗುತ್ತದೆ. ಸೋಯಾ ಬೆಳೆಗಾರರಿಗೆ ಪ್ರೋತ್ಸಾಹದಾಯಕ ಬೆಲೆ ಸಿಕ್ಕಂತಾಗುತ್ತದೆ. ಈ ದಿಸೆಯಲ್ಲೂ ಅಗತ್ಯ ಯೋಜನೆ ರೂಪಿಸಬೇಕು ಎಂದು ಅವರು ಮನವಿ ಮಾಡಿದರು.

ಪ್ರತ್ಯಕ್ಷವಾಗಿ ಕನಿಷ್ಠ 10 ಸಾವಿರ, ಪರೋಕ್ಷವಾಗಿ ಒಂದು ಲಕ್ಷ ಜನರಿಗೆ ಉದ್ಯೋಗ ಒದಗಿಸುವಂತಹ ಬೃಹತ್ ಕೈಗಾರಿಕೆಯನ್ನು ಜಿಲ್ಲೆಯಲ್ಲಿ ಸ್ಥಾಪಿಸುವ ಮೂಲಕ ಜಿಲ್ಲೆಯ ಜನರ ಬದುಕನ್ನು ಉತ್ತಮಗೊಳಿಸಬೇಕು. ಕುಮಾರಸ್ವಾಮಿ ಅವರು ಹಿಂದೆ ಮುಖ್ಯಮಂತ್ರಿ ಆಗಿದ್ದಾಗ ರೈತರು ಸೇರಿದಂತೆ ಎಲ್ಲ ಜನರ ಅಭ್ಯುದಯಕ್ಕಾಗಿ ಹಲವು ಯೋಜನೆ ರೂಪಿಸಿದ್ದರು. ಈಗ ಕೇಂದ್ರದಲ್ಲಿ ಕೈಗಾರಿಕಾ ಸಚಿವರಾಗಿದ್ದರಿಂದ ಜಿಲ್ಲೆಯ ಜನರ ನಿರೀಕ್ಷೆ ಹೆಚ್ಚಿದೆ. ಜನ ಸದಾಕಾಲ ಸ್ಮರಿಸುವಂತಹ ದೊಡ್ಡ ಯೋಜನೆಯನ್ನು ಜಿಲ್ಲೆಗೆ ಕೊಡುಗೆಯಾಗಿ ನೀಡಬೇಕು ಎಂದು ಅವರು ಒತ್ತಾಯಿಸಿದರು.

ಸಂಪೂರ್ಣವಾಗಿ ಸರಕಾರದಿಂದ ಅಥವಾ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಕೈಗಾರಿಕೆ ಸ್ಥಾಪಿಸಬಹುದಾಗಿದೆ. ಹಿಂದುಳಿದ ಈ ಭಾಗದ ಬಗ್ಗೆ ಕುಮಾರಸ್ವಾಮಿ ಅವರಲ್ಲಿ ವಿಶೇಷ ಕಾಳಜಿ ಇದೆ.

ಈ ಜಿಲ್ಲೆಯು ಪ್ರಗತಿಪಥದಲ್ಲಿ ಮುನ್ನಡೆಯುವಂತಾಗಲು ಕುಮಾರಸ್ವಾಮಿಯವರು ಅವಕಾಶ ಮಾಡಿಕೊಡಬೇಕು. ಮುಖ್ಯಮಂತ್ರಿ ಆಗಿದ್ದಾಗ ಜಾರಿಗೊಳಿಸಿದ ಕಲ್ಯಾಣ ಕಾರ್ಯಕ್ರಮಗಳಿಂದಾಗಿ ಜನ

ಈಗಲೂ ಕುಮಾರಸ್ವಾಮಿ ಅವರನ್ನು ಸ್ಮರಿಸುತ್ತಾರೆ. ಕೇಂದ್ರ ಸಚಿವರಾಗಿಯೂ ಕುಮಾರಸ್ವಾಮಿಯವರು ಮಹತ್ವದ ಯೋಜನೆಗಳನ್ನು ಈ ಭಾಗಕ್ಕೆ ಕೊಡುಗೆಯಾಗಿ ನೀಡುವ ಮೂಲಕ ಈ ಭಾಗದ ಅಭಿವೃದ್ಧಿಗೆ ನೆರವಾಗಬೇಕುಎಂದು ಸೂರ್ಯಕಾಂತ್ ನಾಗಮಾರಪಳ್ಳಿ ಕೋರಿದರು. ಜನಪರ ಕಾಳಜಿ ಇರುವ ಕುಮಾರಸ್ವಾಮಿ ಅವರು ವಿಶೇಷ ವಿತ್ತ ವಲಯ ಘೋಷಣೆ ಸೇರಿದಂತೆ ಜಿಲ್ಲೆಯ ಕೈಗಾರಿಕಾ ಅಭಿವೃದ್ಧಿಗೆ ನೆರವಾಗುವ ಯೋಜನೆಗಳನ್ನು ತ್ವರಿತವಾಗಿ ಘೋಷಿಸುವ ವಿಶ್ವಾಸ ಇದೆ ಎಂದು ಅವರು ಹೇಳಿದರು.

# ಮನೆ ಮಠಗಳು ಸಂಸಾರವಲ್ಲ ಅವುಗಳ ಮೇಲಿನ ನನ್ನದೆಂಬ ಭಾವನೆಯೇ ಸಂಸಾರ: ಕಾಶಿ ಜಗದ್ಗುರುಗಳು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಜು.3:ಸಾಮಾನ್ಯವಾಗಿ ಮನೆ, ಮಠ, ಮಡದಿ, ಮಕ್ಕಳನ್ನೇ ಸಂಸಾರವೆಂದು ತಿಳಿದುಕೊಂಡಿರುತ್ತಾರೆ ಆದರೇ ಅವು ಯಾವವು ಸಂಸಾರವಲ್ಲ.ಸಂಸಾರವೆಂದರೆ ಅವುಗಳ ಮೇಲಿನ ನನ್ನದೆಂಬ ಭಾವನೆಯು ಎಂದು ಕಾಶಿ ಜ್ಞಾನ ಸಿಂಹಾಸನಾಧೀಶ್ವರ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯಮಹಾಸ್ವಾಮಿಗಳು ಹೇಳಿದರು.



ನಗರದ ಸೊಗಸನಕೇರಿಯ ಶ್ರೀ ಗುರುಶಾಂತಲಿಂಗೇಶ್ವರ ಕಲ್ಯಾಣ ಮಂಟಪದಲ್ಲಿ ಸಮಾರೋಪ ಸಮಾರಂಭದ ಆಶೀರ್ವಚನ ನೀಡಿದ ಅವರು, ಸಿದ್ಧಾಂತ ಶಿಖಾಮಣಿಯ ಸಂಸಾರ ಹೇಯ ಸ್ಥಲದ ಬಗ್ಗೆ ಆಶೀರ್ವಚನವನ್ನು ದಯಪಾಲಿಸುತ್ತಾ ಪರಮಾತ್ಮ ಮಾಡಿದ್ದು ಸೃಷ್ಠಿಯೊಳಗಿನ ಕಲ್ಲು ಮಣ್ಣುಗಳನ್ನು ತೆಗೆದು–ಕೊಂಡು ಮನುಷ್ಯನ ಮನೆ ಮಠಗಳನ್ನು ನಿರ್ಮಿಸುತ್ತಾನೇ. ಅಷ್ಟೇ ಅಲ್ಲ ಅವುಗಳು ನನ್ನವು ಎಂಬ ಪ್ರಬಲ ಭಾವನೆಯನ್ನು ಇಟ್ಟುಕೊಳ್ಳುತ್ತಾನೆ, ಯಾವ ವಸ್ತುವಿನ ಮೇಲೆ ನನ್ನದೆಂಬ ಭಾವನೆ ಇರುತ್ತದೆಯೋ ಅದುವೇ ನಮಗೆ ದುಃಖವನ್ನು ಕೊಡುತ್ತದೆ. ಆದ್ದರಿಂದ ವಿವೇಕಿಯಾದ ಮನುಷ್ಯನು ಸಂಸಾರದಲ್ಲಿ ಇದ್ದುಕೊಂಡ ಸಾಂಸಾರಿಕ ವಸ್ತುಗಳ ಮೇಲಿನ ನನ್ನದೆಂಬ ಭಾವನೆಯನ್ನು ಬಿಟ್ಟಿದ್ದೇ ಆದರೇ ಸಂಸಾರದಲ್ಲಿದ್ದೂ ಸಹ ಇಲ್ಲದಂತೆ ಇರುತ್ತಾನೆ ಎಂದರು.

ನೀರಿನಲ್ಲಿ ಇರುವ ಕಮಲವು ನೀರನ್ನು ಅಂಟಿಕೊಳ್ಳದೇ ವಿವೇಕಿಯು ಸಂಸಾರವನ್ನು ಅಂಟಿಕೊಳ್ಳದೇ ಅಂದರೇ ನನ್ನದೆಂಬ ಭಾವನೆಯನ್ನು ಇಟ್ಟುಕೊಳ್ಳದೇ ಇದೆಲ್ಲ ಈಶ್ವರನದು ಎಂಬ ಧೃಢವಾದ ಭಾವನೆ ಬಂದವನಾಗಿ ಬಾಳಬೇಕು. ಈ ಜಗತ್ತು ಬಿಟ್ಟು ಯಾರೂ ಎಲ್ಲಿಯೂ ಹೋಗಲಿಕ್ಕೆ ಆಗುವುದಿಲ್ಲ, ಆದರೇ ಜಗತ್ತಿನಲ್ಲಿಯೇ ಯಾವ ವಸ್ತುವಿನ ಮೇಲೆಯೂ ಅಭಿಮಾನ ಇಲ್ಲದಂತೆ ಬದುಕಿದರೆ ಅದುವೇ ಸಂಸಾರ ಹೇಯ ಸ್ಥಿತಿಯು ಎಂದು ಅವರು ಹೇಳಿದರು.

ಕಡಗಂಚಿಯ ಶ್ರೀ ವೀರಭದ್ರ ಶಿವಾಚಾರ್ಯರು ನೇತೃತ್ವ ವಹಿಸಿದ್ದರು, ಪಾಳಾದ ಡಾ. ಗುರುಮೂರ್ತಿ ಶಿವಾಚಾರ್ಯರು, ರಾಯಚೂರಿನ ಸೋಮವಾರಪೇಟೆಯ ಅಭಿನವ ರಾಚೋಟೇಶ್ವರ ಶಿವಾಚಾರ್ಯರು, ಗುರುಸಿದ್ಧ ಮಣಿಕಂಠ ಶಿವಾಚಾರ್ಯ ಬಾರ್ಷಿ, ಟೆಂಗಳಿ, ಕಿಣ್ಣಿಸುಲ್ತಾನ, ಸುಲೇಪೇಟ, ಕಡಗಂಚಿ, ಆಳಂದ, ಮುದ್ದುಡಗಾ ಶ್ರೀಗಳು ಉಪಸ್ಥಿತರಿದ್ದರು.

ಜಿಲ್ಲಾ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಅಧ್ಯಕ್ಷ ಶರಣುಕುಮಾರ್ ಮೋದಿ, ಮಹಿಳಾ ಘಟಕದ ಅಧ್ಯಕ್ಷೆ ಅನ್ನಪೂರ್ಣ ಮಲ್ಲಿನಾಥ ಸನ್‌ಶೆಟ್ಟಿ, ಅಖಿಲ ಭಾರತ ವೀರಶೈವ ಲಿಂಗಾಯತ ರಾಷ್ಟ್ರೀಯ ಮಹಿಳಾ ಘಟಕದ ಉಪಾಧ್ಯಕ್ಷೆ ಶ್ರೀಮತಿ ದಿವ್ಯಾ ಹಾಗರಗಿ, ಬಾಬುರಾವ್ ಅಗ್ರಿ, ಶಿವಾನಂದ್ ಮಠಪತಿ, ಈರಣ್ಣ ಧುತ್ತರಗಾಂವ್, ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಮಾಜಿ ನಿರ್ದೇಶಕ ಮಲ್ಲಿಕಾರ್ಜುನ್ ತಡಕಲ್, ಗಂಗಾಧರ ಅಗ್ಗಿಮಠ, ಭದ್ರಯ್ಯ ಸಾಲಿಮಠ, ಮಾಜಿ ಜೆಡಿಎ ಅಧ್ಯಕ್ಷ ಬಸವರಾಜ್ ತಡಕಲ್, ಚಂದ್ರಕಾಂತ್ ಭೂಸನೂರ್ ಮುಂತಾದವರು ಪಾಲ್ಗೊಂಡಿದ್ದರು.ಶ್ರೀ ಕಾಶಿ ಜಗದ್ಗುರುಮಹಾಸನ್ನಿಧಿಯವರನ್ನು ಸಾರೋಟಿನಲ್ಲಿ ಗಂಜ ಹನುಮಾನ ಮಂದಿರದಿಂದ ಮೆರವಣಿಗೆಯ ಮೂಲಕ ಕುಂಭ ಹೊತ್ತ ಮುತ್ತೈದೆ ಮಹಿಳೆಯರು, ಪುರವಂತರ ಮೇಳ, ಭಜನಾ ಸಂಘದವರು, ಡೊಳ್ಳು ಮತ್ತು ಬಾಜಾ ಭಜಂತ್ರಿಯೊಂದಿಗೆ ಚೌಕ ಮುಖಾಂತರ ಸಾಗಿ ಬಂದು ಶಹಾಬಜಾರ್ ಲಾಲ್ ಹನುಮಾನ್ ಮಂದಿರದಿಂದ ಶ್ರೀ ಗುರುಶಾಂತಲಿಂಗೇಶ್ವರ ಕಲ್ಯಾಣ ಮಂಟಪಕ್ಕೆ ಬರಮಾಡಿಕೊಳ್ಳಲಾಯಿತು. ನಂತರ ಜರುಗಿದ ಧರ್ಮ ಸಭೆಯಲ್ಲಿ ಸಿದ್ರಾಮಪ್ಪ ಆಲಗೂಡಕರ್ ಅವರು ಸ್ವಾಗತಿಸಿದರು. ಸಿದ್ದೇಶ್ವರ ಶಾಸ್ತ್ರಿಗಳಿಂದ ವೇದ ಘೋಷ ಜರುಗಿತು. ಗುರುಲಿಂಗಯ್ಯ ಹಾಗೂ ಮಹಾಂತಯ್ಯ ಸ್ವಾಮಿಗಳಿಂಗ ಸಂಗೀತ ಜರುಗಿತು ಯುವ ಸಾಹಿತಿ ಶಿವಯ್ಯ ಮಠಪತಿ ಅವರು ಕಾರ್ಯಕ್ರಮ ನಿರೂಪಿಸಿದರು.

# ಲಿಂಗಾಯತರನ್ನು ಬೇಡಜಂಗಮರೆಂದು ಪರಿಗಣಿಸುವುದು ಬೇಡ:ಮಹಾಂತೇಶ ಬಡದಾಳ

ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ:ಜು.3: ಪಟ್ಟಣದ ಪ್ರವಾಸಿಮಂದಿರದಲ್ಲಿ ಡಿಎಸ್‌ಎಸ್ ಜಿಲ್ಲಾ ಸಂಚಾಲಕ ಮಹಾಂತೇಶ ಬಡದಾಳ ಅವರ ನೇತೃತ್ವದಲ್ಲಿ ವೀರಶೈವ ಲಿಂಗಾಯತ ಜಂಗಮರು ಪರಿಶಿಷ್ಟ ಜಾತಿಯ ಬೇಡಜಂಗಮರೆಂದು ನಕಲಿ ದಾಖಲೆ ಮಾಡಿರುವ ಬಗ್ಗೆ ಸೂಕ್ತ ಕಾನೂನು ಕ್ರಮಕ್ಕಾಗಿ ಒತ್ತಾಯಿಸಿ ಜುಲೈ 18 ರಂದು ಕಲಬುರಗಿ ನಗರದ ಡಾ.ಬಾಬಾಸಾಹೇಬ್ ಅಂಬೇಡ್ಕರ್ ವೃತ್ತದಲ್ಲಿ ಜನಜಾಗೃತಿ ಮತ್ತು ದೂರು ಅಭಿಯಾನ ಹಾಗೂ ಬೃಹತ್ ಪ್ರತಿಭಟನಾ ಮೆರವಣಿಗೆ ಹಮ್ಮಿಕೊಂಡಿರುವುದರ ಕುರಿತು ಕರ ಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.





ನಂತರ ಮಾತನಾಡಿದ ಜಿಲ್ಲಾ ಸಂಚಾಲಕರಾದ ಮಹಾಂತೇಶ ಬಡದಾಳ ದಲಿತ ಸಮುದಾಯದ ಆರ್ಥಿಕ ಮತ್ತು ಸಾಮಾಜಿಕ ಶೈಕ್ಷಣಿಕ ಅಭಿವೃದ್ಧಿಗಾಗಿ ಪರಿಶಿಷ್ಟ ಜಾತಿಗೆ ಸೇರಿಸಲಾಗಿದ್ದು, ಇನ್ನೂ ಅಭಿವೃದ್ಧಿ ಹೊಂದುತ್ತಿರುವುದರ ಮಧ್ಯೆಯೇ ಮೇಲ್ವರ್ಗದವರ ಉಪಟಳ ಜೋರಾಗಿ ನಡೆಯುತ್ತಿದೆ.ನಕಲಿ ದಾಖಲೆ ಸೃಷ್ಟಿಸಿ ವೀರಶೈವ ಲಿಂಗಾಯತರು ಬೇಡ ಜಂಗಮರೆಂದು ಕಾನೂನಿಗೆ ವಿರುದ್ಧವಾಗಿ ನಡೆದುಕೊಳ್ಳುತ್ತಿದ್ದಾರೆ.ಬೇಡ ಜಂಗಮರು ಮೂಲತಃ ಆಂಧ್ರಪ್ರದೇಶದವರಾಗಿದ್ದು, ಅವರು ಮಾಂಸಹಾರಿಗಳಾಗಿದ್ದಾರೆ.ಬೇಡ ಜಂಗಮರು ವೀರಶೈವ ಜನಾಂಗದವರೇ ಅಲ್ಲ.ವೀರಶೈವ ಜಂಗಮರು ಇರುವಂತ ಮನೆತನಗಳ ಹೆಸರುಗಳಾದ ಹಿರೇಮಠ, ಚಿಕ್ಕಮಠ, ಗದ್ದಗಿಮಠ, ಸ್ಥಾವರವ ಂಠ, ಹೀಗೆ ಹತ್ತು ಹಲವುಗಳಿವೆ. ಆದರೆ ಇವುಗಳಾವವು ಬೇಡ ಜಂಗಮರಲ್ಲಿಲ್ಲ. ಈಗಿರುವ ವೀರಶೈವ ಲಿಂಗಾಯತ ಜನಾಂಗದವರು ನಕಲಿ ದಾಖಲೆ ಸೃಷ್ಟಿಸಿ ತಪ್ಪು ಮಾಹಿತಿ ಸಲ್ಲಿಸುತ್ತಿದ್ದಾರೆ.ಹಿಂತಹ ಕಾನೂನು ದ್ರೋಹದ ಕೆಲಸದ ಬಗ್ಗೆ ಅರಿವೇ ಇರುವುದಿಲ್ಲ. ಅದಕ್ಕಾಗಿಯೇ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಕ್ರಾಂತಿಕಾರಿ) ಬಣದಿಂದ ಕಲಬುರಗಿ ನಗರದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದ್ದು, ದಲಿತರ ಸಂಘಟನೆಗಳು ಸೇರಿದಂತೆ ಅನ್ಯಾಯಕೊಳಗಾಗುತ್ತಿರುವ ದಲಿತ ಸಮುದಾಯದ ಕಟ್ಟಕಡೆಯ ವ್ಯಕ್ತಿಗಳು ಭಾಗಿಯಾಗಬೇಕು ಎಂದರು.

ಇದೆ ಸಂದರ್ಭದಲ್ಲಿ ಅಂಬೇಡ್ಕರ್ ಜಯಂತ್ಯೋತ್ಸವ ಸಮಿತಿ ಅಧ್ಯಕ್ಷರಾದ ಕುಮಾರ ಕೊಳಿಗೇರಿ, ಗಡ್ಡೆಪ್ಪ ಮಣ್ಣೂರ, ದತ್ತಾತ್ರೇಯ ಹರಿಜನ, ಶಿವು ಸಿಂಗೆ, ನಿಂಗಪ್ಪ ಭಲವಾದಿ, ಬಾಬುರಾವ್ ಕೇಶಾಪುರ, ಶಿವು

ಹೊಸ್ಮನಿ, ದತ್ತುಮಾಶಾಳ, ಗೋಪಾಲ ಚಿಕ್ಕರೇವೂರ, ರಾಘು ಗುಡ್ಡಡಗಿ ,ಮಾದೇವ ನಾಟೀಕಾರ, ಮಾದೇವ ನಾಟೀಕಾರ

ಸೇರಿದಂತೆ ಹಲವಾರು ಉಪಸ್ಥಿತರಿದ್ದರು.

# 'ಬುದ್ಧನ ಬೆಳಕು', ಮನದ ಇಬ್ಬನಿ' ಬಿಡುಗಡೆ




ಬೀದರ. ಜು. 03 : 'ಜಗತ್ತಿನ ಕೆಲವು ದೇಶಗಳದಲ್ಲಿ ಇಂದಿನ ದಿನಮಾನದಲ್ಲಿ ನಡೆಯುತ್ತಿರುವ ಭೀಕರ ಯುದ್ಧಗಳ ತಡೆಗೆ ಬುದ್ಧನ ತತ್ವಾದರ್ಶ ಸಹಕಾರಿ' ಎಂದು ಮಾಜಿ ಸಚಿವ ಹಾಗೂ ಭಾರತ ಸೌಟ್ ಮತ್ತು ಗೈಡ್ಸ್‌ನ ಕರ್ನಾಟಕ ಆಯುಕ್ತ ಪಿಜಿಆರ್ ಸಿಂಧೆ ಹೇಳಿದರು.

ನಗರದ ಐಎಂಎ ಹಾಲಿನಲ್ಲಿ ಸೋಮವಾರ ಬೀದರ್ ಪುಟ್ಟಪರ್ತಿ ಬಾಬಾ ಎಜುಕೇಶನ್ ಸೊಸೈಟಿ ಬೀದರ್ ಮತ್ತು ಪ್ರಗತಿ ಅರ್ಥೋ ಆಸ್ಪತ್ರೆ ವತಿಯಿಂದ ಆಯೋಜಿಸಿದ ಡಾ.ಸುಜಾತ ಲೋಕೇಶ ಹೊಸಮನಿಯವರ ಸಂಪಾದಿತ ಕೃತಿ 'ಬುದ್ಧನ ಬೆಳಕು' ಮತ್ತು ಕವನ ಸಂಕಲನ 'ಮನದ ಇಬ್ಬನಿ' ಪುಸ್ತಕ ಬಿಡುಗಡೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

'ಯುದ್ಧದಿಂದ ಸಾವು, ನೋವುಗಳು ಸಂಭವಿಸಿದರೆ ಬುದ್ಧ ಮಾರ್ಗದಿಂದ ಶಾಂತಿ ನೆಮ್ಮದಿ ಸಿಗುತ್ತದೆ' ಎಂದರು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ಬೀದರ್ ವತಿಯಿಂದ ಸುಜಾತ ಹೊಸಮನಿ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಂ.ಜಿ ಮುಳೆ, ಭಂತೆ ಜ್ಞಾನಸಾಗರ, ಸೌಟ್ ಮತ್ತು ಗೈಡ್ಸ್ ಆಯುಕಸ್ತೆ ಗುರಮ್ಮ ಸಿದ್ದಾರೆಡ್ಡಿ, ಹಿರಿಯ ಸಾಹಿತಿ ಎಂ.ಜನವಾಡಕರ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿಗಳಾದ ಸಂಗಮೇಶ್ವರ ಜ್ಯಾಂತೆ, ರೂಪಾ ಪಾಟೀಲ, ಡಾ.ಶ್ರೇಯಾ ಮಹಿಂದ್ರಕರ್, ಸ್ವರೂಪರಾಣಿ ನಾಗೂರೆ, ಸಿದ್ದಾರೂಢ ಭಾಲ್ಕೆ, ನಾಗನಾಥರಾವ್ ನೀಡೋದಕರ್, ಸತ್ಯಜೀತ್ ನೀಡೋದಕರ್ ಹಾಗೂ ಇನ್ನಿತರರು ಇದ್ದರು.

# ಬಸವ ಧರ್ಮದ ಮಹಾನ್ ಚೇತನಗಳು ಫ ಗು ಹಳಕಟ್ಟಿ ಮತ್ತು ಲಿಂಗಾನಂದ ಸ್ವಾಮಿಗಳ ಸಂಸ್ಮರಣೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 3 ನಮ್ಮ ದೇಶಕ್ಕಾಗಿ, ಧರ್ಮಕ್ಕಾಗಿ, ಸಮಾಜಕ್ಕಾಗಿಹಗಲಿರುಳುದುಡಿದವರಿಗೆ ಕೃತಜ್ಞತೆ ಸಲ್ಲಿಸುವುದು ಮಾನವನ ಸಹಜ ಗುಣವಾಗಿರಬೇಕು, ಬಸವ ಧರ್ಮಕ್ಕಾಗಿ ತಮ್ಮ ಜೀವನವನ್ನೇ ತ್ಯಾಗ ಮಾಡಿದ ಮಹಾನ್ ಚೇತನಗಳಾದ ಡಾ. ಫ ಗು ಹಳಕಟ್ಟಿಮತ್ತುಪೂಜ್ಯಲಿಂಗಾನಂದ ಸ್ವಾಮಿಗಳನ್ನು ನಾವು ಎಂದು ಮರೆಯುವಂತಿಲ್ಲ ಅವರನ್ನು ನಾವು ಸ್ಮರಿಸುವುದು ಕೃತಜ್ಞತೆ ಸಂಕೇತವಾಗಿದೆ ಎಂದು ಬೀದರಿನ ಕಲ್ಯಾಣ ಕರ್ನಾಟಕ ಪ್ರತಿಷ್ಠಾನದ ಅಧ್ಯಕ್ಷರಾದ ಬಸವಕುಮಾರ ಪಾಟೀಲ ಹೇಳಿದರು.

ನಗರದ ಅರಿವು ಆಚಾರ ಅನುಭಾವ ಕೇಂದ್ರ ಶಿವ ಸದನದಲ್ಲಿ ಕಲ್ಯಾಣ ಮಹಾಮನೆ ಹಮ್ಮಿಕೊಂಡ ಡಾ. ಫ ಗು ಹಳಕಟ್ಟಿ ಮತ್ತು ಲಿಂಗಾನಂದ ಸ್ವಾಮಿಗಳ ಸಂಸ್ಮರಣೆ ಕಾರ್ಯಕ್ರಮದ ಉದ್ಘಾಟಿಸಿ ಮಾತನಾಡಿದ ಅವರು ಧಾರ್ಮಿಕವಾಗಿ, ಸಾಮಾಜಿಕವಾಗಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ, ಕನ್ನಡ ನಾಡು ನುಡಿಗಾಗಿ, ಮಹಿಳೆಯರ ಸಬಲೀಕರಣಕ್ಕಾಗಿ ದುಡಿದವರು ಫ ಗು ಹಳಕಟ್ಟಿಯವರು. ಅವರು ಬರದಿದ್ದರೆ ಇಂದು ನಮಗೆ ವಚನ ಸಾಹಿತ್ಯ ಸಿಗುತ್ತಿರಲಿಲ್ಲ, ವಚನ ಸಾಹಿತ್ಯ ನಮ್ಮ ಕೈಗೆ ಸಿಕ್ಕಿರಲಿಲ್ಲವಾಗಿದ್ದರೆ ನಾವು ಯಾರು ಬಸವ ಧರ್ಮಿಯರಾಗಿ ಉಳಿಯುತ್ತಿರಲಿಲ್ಲ ಅವರ ಸತತ ಪರಿಶ್ರಮದ ಸಂಶೋಧನೆ ಕಾರಣವಾಗಿ ವಚನ ಸಾಹಿತ್ಯ ದೊರಕಿದೆ ಆದ್ದರಿಂದ ಅವರು ಸದಾ ಸ್ಮರಣೀಯರು. ಅವರ ಜೀವನದ ಸಾಧನೆಗೆ ಬಹಳಷ್ಟು ಬಿರುದುಗಳು ಬಂದಿವೆ ಆದರೆ ಜನ ಸಾಮಾನ್ಯರು ಕೊಟ್ಟ ವಚನ ಪಿತಾಮಹ ಬಿರುದು ಇಂದು ಅಜರಾಮರವಾಗಿ ಉಳಿದಿದೆ ಆ ಕಾರಣಕ್ಕಾಗಿಯೇ ಕನ್ನಡದ ಪುರೋಹಿತ ಬಿ ಎಮ್ ಶ್ರೀ ಕಂಠಯ್ಯನವರು ವಚನ ಗುಮ್ಮಟ ಎಂದು ಕರೆಯಲು ಸಾಧ್ಯವಾಗಿದೆ ಎಂದು ಬಣ್ಣಿಸಿದರು.

ಲಿಂಗಾನಂದ ಸ್ವಾಮಿಗಳಿಗೂ ಪ್ರವಚನ ಪಿತಾಮಹ ಎಂಬ ಬಿರುದು ಜನ ಸಾಮಾನ್ಯರೆ ಕೊಟ್ಟಿರುವುದು ಎಂಬುದು ಗಮನಾರ್ಹ. ಫ ಗು ಹಳಕಟ್ಟಿಯವರು ವಚನ ಸಾಹಿತ್ಯ ಸಂಶೋಧಿಸಿ ಪುಸ್ತಕ ರೂಪದಲ್ಲಿ ಹೊರತಂದರೆ, ಲಿಂಗಾನಂದ ಸ್ವಾಮಿಗಳು ಮನೆ ಮನೆಗೆ ಪ್ರವಚನದ ಮೂಲಕ ತಲುಪಿಸುವಲ್ಲಿ ಸಾಕಷ್ಟು ಶ್ರಮಿಸಿದವರು. ಯಾವುದೇ ವೈಯುಕ್ತಿಕ ಆಶೆ ಆಮಿಷಕ್ಕೆ ಒಳಗಾಗಿದೆ ನೇರ ದಿಟ್ಟ ನುಡಿಗಳಿಂದ ಬಸವ ಧರ್ಮವನ್ನು ಜನ ಸಾಮಾನ್ಯರ ಹೃದಯಕ್ಕೆ ಮುಟ್ಟುವಂತೆ ಪ್ರವಚನಗೈಯುತ್ತಿದ್ದರು. ಇಂದಿನ ಮಠಾಧೀಶರಿಗೆ ದಿವ್ಯ ಪ್ರೇರಣೆ ಲಿಂಗಾನಂದ ಶ್ರೀಗಳು ಎಂದರಲ್ಲದೆ ಲಿಂಗನಂದ ಸ್ವಾಮಿಗಳಲ್ಲಿ ಹೃದಯವಂತಿಕೆಯ ಪ್ರೀತಿ ಮನೆ ಮಾಡಿತ್ತು, ಅವರು ನಿಗರ್ವಿಗಳಾಗಿದ್ದರು ಯಾವುದೇ ಶಿಕ್ಷಣ ಸಂಸ್ಥೆ ತೆರಯದೆ ಬಸವ ಧರ್ಮ ಪ್ರಚಾರವನ್ನೇ ತಮ್ಮ ಜೀವನದ ಉಸಿರಾಗಿಸಿಕೊಂಡಿದ್ದರು ಆದ್ದರಿಂದ ಇಂದು ಲಕ್ಷಾಂತರ ಬಸವ ಭಕ್ತರು ತಯಾರಾದರು ಎಂದು ಮಾರ್ಮಿಕವಾಗಿ ನುಡಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿಕೊಂಡ ಪೂಜ್ಯಶ್ರೀ ಸದ್ಗುರು ಬಸವಪ್ರಭು ಸ್ವಾಮೀಜಿಯವರು ಮಾತನಾಡಿ ಗುರು ಬಸವಣ್ಣನವರು ಧರ್ಮದ ಗುಮ್ಮಟವಾದರೆ, ಫ ಗು ಹಳಕಟ್ಟಿಯವರು ವಚನ ಗುಮ್ಮಟ, ಲಿಂಗಾನಂದ ಮಹಾ ಸ್ವಾಮಿಗಳು ಪ್ರವಚನ ಗುಮ್ಮಟವಾಗಿದ್ದಾರೆ ಎಂದರು. ಇಬ್ಬರು ಮಹನಿಯರು ತಮ್ಮ ಜೀವವನ್ನು ಶ್ರೀಗಂಧದಂತೆ ಸವೆದು ಬಸವ ಧರ್ಮಕ್ಕೆ ದಿಕ್ಸೂಚಿ ಒದಗಿಸಿದ್ದಾರೆ ಇಂದು ಬಸವ ಧರ್ಮ ಪ್ರಚಾರ ಮಾಡಲು ನಮಗೇನು ಕಷ್ಟವಿಲ್ಲ ನಮಗೆ ಬದ್ಧತೆ ಬೇಕಾಗಿದೆ. ಇಂದು ಬಸವ ಧರ್ಮ ಪ್ರಚಾರ ಮಾಡುವ ಸಂಘ ಸಂಸ್ಥೆಗಳಲ್ಲಿ ಆ ಬದ್ಧತೆ ಇಲ್ಲದೆ ದ್ವೇಷ ವೈಷಮ್ಯ ಪ್ರತಿಷ್ಠೆ ಮನೆ ಮಾಡಿದೆ ಅದರಿಂದ ಹೊರ ಬಂದು ಬಸವಧರ್ಮದಕ್ಕಾಗಿ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಈ ನಿಟ್ಟಿನಲ್ಲಿ ಫ ಗು ಹಳಕಟ್ಟಿ ಮತ್ತು ಲಿಂಗಾನಂದ ಸ್ವಾಮಿಗಳು ನಮಗೆ ಆದರ್ಶವಾಗಿದ್ದಾರೆ ಎಂದರು.

ನೇತೃತ್ವ ವಹಿಸಿದ ಪೂಜ್ಯ ಬಸವರಾಜ ಪಂಡಿತ ಮಾತನಾಡಿ ಬಸವ ಧರ್ಮದ ಎರಡು ನೇತ್ರಗಳು ಫ ಗು ಹಳಕಟ್ಟಿ ಮತ್ತು ಲಿಂಗಾನಂದ ಸ್ವಾಮಿಗಳಾಗಿದ್ದಾರೆ. ಬಸವ ಧರ್ಮವನ್ನು ಆಳವಾಗಿ ಅವರು ಅರಿತಿದ್ದರಿಂದ ಅಷ್ಟೆಲ್ಲ ಕಾರ್ಯ ಮಾಡಿದರು. ನಾವು ಸಹಿತ ಬಸವ ಧರ್ಮವನ್ನು ಆಳವಾಗಿ ಅಧ್ಯಯನ ಮಾಡಿ ತತ್ವ ಪ್ರಚಾರಕ್ಕೆ ಇಳಿಯಬೇಕು. ಜಗತ್ತಿನಲ್ಲಿ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ವಚನ ಸಾಹಿತ್ಯದಲ್ಲಿದೆ, ವಚನಗಳನ್ನು ಕೇವಲ ಕಂಠ ಪಾಠ ಮಾಡಿದರೆ ಸಾಲದು ಅವುಗಳನ್ನು ಅರ್ಥೈಸಿಕೊಂಡು ಬದುಕಲು ಪ್ರಯತ್ನಿಸಬೇಕೆಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ನಿವೃತ್ತ ನ್ಯಾಯಾಧೀಶರಾದ ಎಸ್ ಎಸ್ ನಾಗರಾಳೆ ಮಾತನಾಡಿ ಬಸವಧರ್ಮದ ಧ್ರುವತಾರೆಯಂತೆ ಕಂಗೊಳಿಸಿದವರು ಫ ಗು ಹಳಕಟ್ಟಿಯವರು ಒಂದು ಕಡೆ ಉಳಿದು ವಚನ ಸಾಹಿತ್ಯ ಬೆಳವಣಿಗೆಗಾಗಿ ಶ್ರಮಿಸಿದರೆ ಲಿಂಗಾನಂದ ಸ್ವಾಮಿಗಳು ಜಂಗಮಾತ್ಮಕವಾಗಿ ಹಳ್ಳಿ, ಪಟ್ಟಣಗಳಲ್ಲಿ ಹೋಗಿ ಧರ್ಮ ಪ್ರಚಾರ ಮಾಡಿದ್ದು ಅವಿಸ್ಮರಣೀಯ ಎಂದು ಬಣ್ಣಿಸಿದರು.

ಷಟಸ್ಥಲಧ್ವಜಾರೋಹಣ ಬಸವ ತತ್ವ ಪ್ರಚಾರ ಮತ್ತು ಪ್ರಸಾರ ಕೇಂದ್ರದ ಅಧ್ಯಕ್ಷರಾದ ಜಯಪ್ರಕಾಶ ಸದಾನಂದೆ ನೆರವೇರಿಸಿದರು. ಅಕ್ಕನ ಬಳಗದ ಅಧ್ಯಕ್ಷರಾದ ಸುಲೋಚನಾ ಮಾಮನೆ.

ಆಕಾಶ ಮೋಳಕೇರಾ, ಶ್ರೀದೇವಿ ಉಜಳಂಬೆ, ಕವಿತಾ ಸಜ್ಜನಶೆಟ್ಟಿ, ಗಿರಿಜಾ ಸಿದ್ದಣ್ಣ, ಲಕ್ಷ್ಮಿಬಾಯಿ ಪಾಟೀಲ ವಚನ ಗಾಯನ ಮಾಡಿದರು. ಈ ಸಂದರ್ಭದಲ್ಲಿ

ಶ್ರೀಶೈಲಹುಡೇದ, ಭೀಮಾಶಂಕರ, ವೀರಶೆಟ್ಟಿಪಾಟೀಲ, ಶಾಮರಾವ್ ನೀಲಕಂಠಯ್ಯಸ್ವಾಮಿ, ಚಂದ್ರಕಾಂತ ಗುಂಗೆ, ರಾಮ ಮಜಿಗೆ, ಗಣಪತಿ ಖಾಸ್ತೆ, ಪುಷ್ಪಾ ಮಾಮನೆ, ಜಯಶ್ರೀ ಪಾಟೀಲ, ಜಯಶ್ರೀ ಬಿರಾಜದಾರ, ರಾಣಿ ವಡ್ಡೆ, ಅಂಬಿಕಾ ನಾಗರಾಳೆ, ಪಂಡಿತ ನಾಗರಾಳೆ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಸುಮಿತ್ರಾ ದಾವಣಗಾವೆ ಸ್ವಾಗತಿಸಿದರು , ಸಂಗಮೇಶ ತೊಗರಖೇಡೆ ನಿರೂಪಿಸಿದರು, ರೇಣುಕಾ ಮಾಮನೆ ವಂದಿಸಿದರು.

# ವಿವಿಧ ಹುದ್ದೆಗಳ ನೇಮಕಾತಿಗೆ ಜುಲೈ 4ರಂದು ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 03– ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ವಿವಿಧ ಕಾರ್ಯಕ್ರಮಗಳ ಅಡಿಯಲ್ಲಿ 2025–26ನೇ ಸಾಲಿಗೆ ಮಂಜೂರಾಗಿ ಖಾಲಿ ಇರುವ ಹುದ್ದೆಗಳನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿಯಮಾನುಸಾರ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಜುಲೈ 04 ರಂದು ನೇರ ಸಂದರ್ಶನದ ಅರ್ಜಿ ಆಹ್ವಾನಿಸಲಾಗಿದೆ.

ಹುದ್ದೆಗಳ ವಿವರ : ಸ್ತ್ರೀ ರೋಗ ತಜ್ಞರು–01 ಹುದ್ದೆ, ಮಕ್ಕಳ ತಜ್ಞರು–02 ಹುದ್ದೆ, ನೇತ್ರ ತಜ್ಞರು–01 ಹುದ್ದೆ, ಕಿವಿ ಮೂಗು ಗಂಟಲು ತಜ್ಞರು–02, ಎನ್.ಪಿ.ಪಿ.ಸಿ.ಡಿ., ಎಂ.ಬಿ.ಬಿ.ಎಸ್. ಎಸ್.ಎನ್.ಸಿ.ಯು. ವಿಭಾಗ–02 ಹುದ್ದೆಗಳು, ಎಂ.ಬಿ.ಬಿ.ಎಸ್. ಹೆಚ್.ಡಿ.ಯು. ವಿಭಾಗ–03, ಎಂ.ಬಿ.ಬಿ.ಎಸ್. ಐ.ಸಿ.ಯು./ ಹೆಚ್.ಡಿ.ಯು.–06 ಹುದ್ದೆ, ಎಂ.ಬಿ.ಬಿ.ಎಸ್.ಎನ್.ಟಿ.ಇ.ಪಿ.–02 ಹುದ್ದೆ ಸೇರಿದಂತೆ ಒಟ್ಟು–19 ಹುದ್ದೆಗಳಿಗೆ ಗುತ್ತಿಗೆ ಆಧಾರದ ನೇಮಕಾತಿಯನ್ನು ಮೇರಿಟ್ ಕಮ್ ರೋಷ್ಟರ್ ಆಧಾರದ ಮೇಲೆ ಮಾಡಿಕೊಳ್ಳಲಾಗುವುದು, ಅರ್ಹ ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳಿಗೆ ಜುಲೈ 04ರ ಬೆಳಿಗೆ 10.30ಕ್ಕೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನೇರ ಸಂದರ್ಶನ ಏರ್ಪಡಿಸಲಾಗಿದ್ದು, ಆಸಕ್ತರು ಭಾಗವಹಿಸಬಹುದಾಗಿದೆ.

ಈ ಗುತ್ತಿಗೆ ಆಧಾರದ ನೇಮಕಾತಿಯು ಎನ್.ಹೆಚ್.ಎಂ ನಿಯಮಾವಳಿಯ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಯೋಜನಾ ನಿರ್ವಹಣಾ ಘಟಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ ರಾಯಚೂರು ಇಲ್ಲಿಗೆ ಕಚೇರಿಯ ಅವಧಿಯಲ್ಲಿ ಭೇಟಿ ನೀಡಿ ಮಾಹಿತಿಯನ್ನು ಪಡೆಯಬಹುದು. ಅಥವಾ ದೂರವಾಣಿ ಸಂಖ್ಯೆ:9449843121 ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9449732000

# ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಗೌರವ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 3 ಇಲ್ಲಿನ ಶಾಂತಿನಿಕೇತನ ಪ್ರೌಢಶಾಲೆಯಲ್ಲಿ 2024 –25 ನೇ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆ ಯಲ್ಲಿ ಅಗ್ರ ಶ್ರೇಣಿ ಪಡೆದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸಂಸ್ಥೆಯವತಿಯಿಂದ ಅಧ್ಯಕ್ಷರು ಹಾಗೂ ಸಹಾಯಕ ಆಯುಕ್ತರಾದ ಮುಕುಲ್ ಜೈನ್ ಗೌರವಿಸಿ ಸನ್ಮಾನಿಸಿ ಮಾತನಾಡಿದ ಅವರು ನಮ್ಮ ಶಾಲೆ ಯಲ್ಲಿನ ವಿದ್ಯಾರ್ಥಿಗಳು ಈ ವರ್ಷ ಕನ್ನಡ ಮಾಧ್ಯಮದಲ್ಲಿ ತಾಲೂಕಿಗೆ ಪ್ರಥಮ ಸ್ಥಾನ ತಂದಿರುತ್ತಾರೆ ಎಂದು ಹರ್ಷ ವ್ಯಕ್ತಪಡಿಸಿದರು ಈ ವಿದ್ಯಾರ್ಥಿಗಳ ಮುಂದಿನ ಶಿಕ್ಷಣ ಉಜ್ವಲವಾಗಲಿ ಎಂದು ಶುಭ ಹಾರೈಸಿದರು.

ವೇದಿಕೆ ಮೇಲೆ ಸಂಸ್ಥೆಯ ಸದಸ್ಯರಾದ ಬಸವರಾಜ ಚಿರಡೆ. ಡಾ. ವ್ಹಿ.ಎಸ್. ಮಠಪತಿ. ಮುರು ಗೆಪ್ಪಾ ವಸ್ತ್ರದ. ಮುಖ್ಯಗುರುಗಳಾದ ಚನ್ನವೀರ ಬಿರಾದರ. ಶಿವರಾಜ ಖೇಲೆ ಹಾಗೂ ವಿಧ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು . ರೇಖಾ ಬೇಲೂರೆ ನಿರೂಪಿಸಿದರು. ಮಲಕಣ್ಣ ಮಸೂತಿ ವಂದಿಸಿದರು.




ಬಸವಕಲ್ಯಾಣ :– ಇಲ್ಲಿನ ಶ್ರೀ ಬಸವೇಶ್ವರ ಪಿಯು ಕಾಲೇಜ್ ವತಿಯಿಂದ ಬಿಕೆಡಿಬಿ ಸಭಾ ಭವನದಲ್ಲಿ ನೀಟ್ ಪರೀಕ್ಷೆಯಲ್ಲಿ 572 ಅಂಕ ಗಳೊಂದಿಗೆ ಆಲ್ ಇಂಡಿಯಾ ರಾಂಕಿಂಗ್ ನಲ್ಲಿ 5031ನೇ ಸ್ಥಾನ ಪಡೆದ ಚನ್ನವೀರ ಶಿವರಾಜ ಪಾಟೀಲ ಯಳವಂತಗಿ ಅವರನ್ನು ಸತ್ಕರಿಸಿ ಗೌರವಿಸಲಾಯಿತು.ಈ ಸಂದರ್ಭದಲ್ಲಿ ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಅಧ್ಯಕ್ಷರಾದ ಬಸವರಾಜ ಕೋರಕೆ, ಸಿಪಿಐ ಅಲಿಸಾಬ್, ವೀರಣ್ಣ ಹಲಶೆಟ್ಟಿ, ಡಾ ಜಿ. ಎಸ್. ಭುರಾಳೆ, ಮಹಾನಂದಾ ಪಾಟೀಲ, ರಾಜಕುಮಾರ ದೇಗಾಂವ ಸೇರಿದಂತೆ ಇನ್ನಿತರರು ಮುಂತಾದವರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)


# ಬಸವ ಧರ್ಮದ ಮಹಾನ್ ಚೇತನಗಳು ಫ ಗು ಹಳಕಟ್ಟಿ ಮತ್ತು ಲಿಂಗಾನಂದ ಸ್ವಾಮಿಗಳ ಸಂಸ್ಮರಣೆ.





ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಜು 3 ನಮ್ಮ ದೇಶಕ್ಕಾಗಿ, ಧರ್ಮಕ್ಕಾಗಿ, ಸಮಾಜಕ್ಕಾಗಿಹಗಲಿರುಳುದುಡಿದವರಿಗೆ ಕೃತಜ್ಞತೆ ಸಲ್ಲಿಸುವುದು ಮಾನವನ ಸಹಜ ಗುಣವಾಗಿರಬೇಕು, ಬಸವ ಧರ್ಮಕ್ಕಾಗಿ ತಮ್ಮ ಜೀವನವನ್ನೇ ತ್ಯಾಗ ಮಾಡಿದ ಮಹಾನ್ ಚೇತನಗಳಾದ ಡಾ. ಫ ಗು ಹಳಕಟ್ಟಿಮತ್ತುಪೂಜ್ಯಲಿಂಗಾನಂದ ಸ್ವಾಮಿಗಳನ್ನು ನಾವು ಎಂದು ಮರೆಯುವಂತಿಲ್ಲ ಅವರನ್ನು ನಾವು ಸ್ಮರಿಸುವುದು ಕೃತಜ್ಞತೆ ಸಂಕೇತವಾಗಿದೆ ಎಂದು ಬೀದರಿನ ಕಲ್ಯಾಣ ಕರ್ನಾಟಕ ಪ್ರತಿಷ್ಠಾನದ ಅಧ್ಯಕ್ಷರಾದ ಬಸವಕುಮಾರ ಪಾಟೀಲ ಹೇಳಿದರು.

ನಗರದ ಅರಿವು ಆಚಾರ ಅನುಭಾವ ಕೇಂದ್ರ ಶಿವ ಸದನದಲ್ಲಿ ಕಲ್ಯಾಣ ಮಹಾಮನೆ ಹಮ್ಮಿಕೊಂಡ ಡಾ. ಫ ಗು ಹಳಕಟ್ಟಿ ಮತ್ತು ಲಿಂಗಾನಂದ ಸ್ವಾಮಿಗಳ ಸಂಸ್ಮರಣೆ ಕಾರ್ಯಕ್ರಮದ ಉದ್ಘಾಟಿಸಿ ಮಾತನಾಡಿದ ಅವರು ಧಾರ್ಮಿಕವಾಗಿ, ಸಾಮಾಜಿಕವಾಗಿ, ಆರ್ಥಿಕವಾಗಿ, ಶೈಕ್ಷಣಿಕವಾಗಿ, ಕನ್ನಡ ನಾಡು ನುಡಿಗಾಗಿ, ಮಹಿಳೆಯರ ಸಬಲೀಕರಣಕ್ಕಾಗಿ ದುಡಿದವರು ಫ ಗು ಹಳಕಟ್ಟಿಯವರು. ಅವರು ಬರದಿದ್ದರೆ ಇಂದು ನಮಗೆ ವಚನ ಸಾಹಿತ್ಯ ಸಿಗುತ್ತಿರಲಿಲ್ಲ, ವಚನ ಸಾಹಿತ್ಯ ನಮ್ಮ ಕೈಗೆ ಸಿಕ್ಕಿರಲಿಲ್ಲವಾಗಿದ್ದರೆ ನಾವು ಯಾರು ಬಸವ ಧರ್ಮಿಯರಾಗಿ ಉಳಿಯುತ್ತಿರಲಿಲ್ಲ ಅವರ ಸತತ ಪರಿಶ್ರಮದ ಸಂಶೋಧನೆ ಕಾರಣವಾಗಿ ವಚನ ಸಾಹಿತ್ಯ ದೊರಕಿದೆ ಆದ್ದರಿಂದ ಅವರು ಸದಾ ಸ್ಮರಣೀಯರು. ಅವರ ಜೀವನದ ಸಾಧನೆಗೆ ಬಹಳಷ್ಟು ಬಿರುದುಗಳು ಬಂದಿವೆ ಆದರೆ ಜನ ಸಾಮಾನ್ಯರು ಕೊಟ್ಟ ವಚನ ಪಿತಾಮಹ ಬಿರುದು ಇಂದು ಅಜರಾಮರವಾಗಿ ಉಳಿದಿದೆ ಆ ಕಾರಣಕ್ಕಾಗಿಯೇ ಕನ್ನಡದ ಪುರೋಹಿತ ಬಿ ಎಮ್ ಶ್ರೀ ಕಂಠಯ್ಯನವರು ವಚನ ಗುಮ್ಮಟ ಎಂದು ಕರೆಯಲು ಸಾಧ್ಯವಾಗಿದೆ ಎಂದು ಬಣ್ಣಿಸಿದರು.

ಲಿಂಗಾನಂದ ಸ್ವಾಮಿಗಳಿಗೂ ಪ್ರವಚನ ಪಿತಾಮಹ ಎಂಬ ಬಿರುದು ಜನ ಸಾಮಾನ್ಯರೆ ಕೊಟ್ಟಿರುವುದು ಎಂಬುದು ಗಮನಾರ್ಹ. ಫ ಗು ಹಳಕಟ್ಟಿಯವರು ವಚನ ಸಾಹಿತ್ಯ ಸಂಶೋಧಿಸಿ ಪುಸ್ತಕ ರೂಪದಲ್ಲಿ ಹೊರತಂದರೆ, ಲಿಂಗಾನಂದ ಸ್ವಾಮಿಗಳು ಮನೆ ಮನೆಗೆ ಪ್ರವಚನದ ಮೂಲಕ ತಲುಪಿಸುವಲ್ಲಿ ಸಾಕಷ್ಟು ಶ್ರಮಿಸಿದವರು. ಯಾವುದೇ ವೈಯುಕ್ತಿಕ ಆಶೆ ಆಮಿಷಕ್ಕೆ ಒಳಗಾಗಿದೆ ನೇರ ದಿಟ್ಟ ನುಡಿಗಳಿಂದ ಬಸವ ಧರ್ಮವನ್ನು ಜನ ಸಾಮಾನ್ಯರ ಹೃದಯಕ್ಕೆ ಮುಟ್ಟುವಂತೆ ಪ್ರವಚನಗೈಯುತ್ತಿದ್ದರು. ಇಂದಿನ ಮಠಾಧೀಶರಿಗೆ ದಿವ್ಯ ಪ್ರೇರಣೆ ಲಿಂಗಾನಂದ ಶ್ರೀಗಳು ಎಂದರಲ್ಲದೆ ಲಿಂಗನಂದ ಸ್ವಾಮಿಗಳಲ್ಲಿ ಹೃದಯವಂತಿಕೆಯ ಪ್ರೀತಿ ಮನೆ ಮಾಡಿತ್ತು, ಅವರು ನಿಗರ್ವಿಗಳಾಗಿದ್ದರು ಯಾವುದೇ ಶಿಕ್ಷಣ ಸಂಸ್ಥೆ ತೆರಯದೆ ಬಸವ ಧರ್ಮ ಪ್ರಚಾರವನ್ನೇ ತಮ್ಮ ಜೀವನದ ಉಸಿರಾಗಿಸಿಕೊಂಡಿದ್ದರು ಆದ್ದರಿಂದ ಇಂದು ಲಕ್ಷಾಂತರ ಬಸವ ಭಕ್ತರು ತಯಾರಾದರು ಎಂದು ಮಾರ್ಮಿಕವಾಗಿ ನುಡಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿಕೊಂಡ ಪೂಜ್ಯಶ್ರೀ ಸದ್ಗುರು ಬಸವಪ್ರಭು ಸ್ವಾಮೀಜಿಯವರು ಮಾತನಾಡಿ ಗುರು ಬಸವಣ್ಣನವರು ಧರ್ಮದ ಗುಮ್ಮಟವಾದರೆ, ಫ ಗು ಹಳಕಟ್ಟಿಯವರು ವಚನ ಗುಮ್ಮಟ, ಲಿಂಗಾನಂದ ಮಹಾ ಸ್ವಾಮಿಗಳು ಪ್ರವಚನ ಗುಮ್ಮಟವಾಗಿದ್ದಾರೆ ಎಂದರು. ಇಬ್ಬರು ಮಹನಿಯರು ತಮ್ಮ ಜೀವವನ್ನು ಶ್ರೀಗಂಧದಂತೆ ಸವೆದು ಬಸವ ಧರ್ಮಕ್ಕೆ ದಿಕ್ಸೂಚಿ ಒದಗಿಸಿದ್ದಾರೆ ಇಂದು ಬಸವ ಧರ್ಮ ಪ್ರಚಾರ ಮಾಡಲು ನಮಗೇನು ಕಷ್ಟವಿಲ್ಲ ನಮಗೆ ಬದ್ಧತೆ ಬೇಕಾಗಿದೆ. ಇಂದು ಬಸವ ಧರ್ಮ ಪ್ರಚಾರ ಮಾಡುವ ಸಂಘ ಸಂಸ್ಥೆಗಳಲ್ಲಿ ಆ ಬದ್ಧತೆ ಇಲ್ಲದೆ ದ್ವೇಷ ವೈಷಮ್ಯ ಪ್ರತಿಷ್ಠೆ ಮನೆ ಮಾಡಿದೆ ಅದರಿಂದ ಹೊರ ಬಂದು ಬಸವಧರ್ಮದಕ್ಕಾಗಿ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಈ ನಿಟ್ಟಿನಲ್ಲಿ ಫ ಗು ಹಳಕಟ್ಟಿ ಮತ್ತು ಲಿಂಗಾನಂದ ಸ್ವಾಮಿಗಳು ನಮಗೆ ಆದರ್ಶವಾಗಿದ್ದಾರೆ ಎಂದರು.

ನೇತೃತ್ವ ವಹಿಸಿದ ಪೂಜ್ಯ ಬಸವರಾಜ ಪಂಡಿತ ಮಾತನಾಡಿ ಬಸವ ಧರ್ಮದ ಎರಡು ನೇತ್ರಗಳು ಫ ಗು ಹಳಕಟ್ಟಿ ಮತ್ತು ಲಿಂಗಾನಂದ ಸ್ವಾಮಿಗಳಾಗಿದ್ದಾರೆ. ಬಸವ ಧರ್ಮವನ್ನು ಆಳವಾಗಿ ಅವರು ಅರಿತಿದ್ದರಿಂದ ಅಷ್ಟೆಲ್ಲ ಕಾರ್ಯ ಮಾಡಿದರು. ನಾವು ಸಹಿತ ಬಸವ ಧರ್ಮವನ್ನು ಆಳವಾಗಿ ಅಧ್ಯಯನ ಮಾಡಿ ತತ್ವ ಪ್ರಚಾರಕ್ಕೆ ಇಳಿಯಬೇಕು. ಜಗತ್ತಿನಲ್ಲಿ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ವಚನ ಸಾಹಿತ್ಯದಲ್ಲಿದೆ, ವಚನಗಳನ್ನು ಕೇವಲ ಕಂಠ ಪಾಠ ಮಾಡಿದರೆ ಸಾಲದು ಅವುಗಳನ್ನು ಅರ್ಥೈಸಿಕೊಂಡು ಬದುಕಲು ಪ್ರಯತ್ನಿಸಬೇಕೆಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ನಿವೃತ್ತ ನ್ಯಾಯಾಧೀಶರಾದ ಎಸ್ ಎಸ್ ನಾಗರಾಳೆ ಮಾತನಾಡಿ ಬಸವಧರ್ಮದ ಧ್ರುವತಾರೆಯಂತೆ ಕಂಗೊಳಿಸಿದವರು ಫ ಗು ಹಳಕಟ್ಟಿಯವರು ಒಂದು ಕಡೆ ಉಳಿದು ವಚನ ಸಾಹಿತ್ಯ ಬೆಳವಣಿಗೆಗಾಗಿ ಶ್ರಮಿಸಿದರೆ ಲಿಂಗಾನಂದ ಸ್ವಾಮಿಗಳು ಜಂಗಮಾತ್ಮಕವಾಗಿ ಹಳ್ಳಿ, ಪಟ್ಟಣಗಳಲ್ಲಿ ಹೋಗಿ ಧರ್ಮ ಪ್ರಚಾರ ಮಾಡಿದ್ದು ಅವಿಸ್ಮರಣೀಯ ಎಂದು ಬಣ್ಣಿಸಿದರು.

ಷಟಸ್ಥಲಧ್ವಜಾರೋಹಣ ಬಸವ ತತ್ವ ಪ್ರಚಾರ ಮತ್ತು ಪ್ರಸಾರ ಕೇಂದ್ರದ ಅಧ್ಯಕ್ಷರಾದ ಜಯಪ್ರಕಾಶ ಸದಾನಂದೆ ನೆರವೇರಿಸಿದರು. ಅಕ್ಕನ ಬಳಗದ ಅಧ್ಯಕ್ಷರಾದ ಸುಲೋಚನಾ ಮಾಮನೆ.

ಆಕಾಶ ಮೋಳಕೇರಾ, ಶ್ರೀದೇವಿ ಉಜಳಂಬೆ, ಕವಿತಾ ಸಜ್ಜನಶೆಟ್ಟಿ, ಗಿರಿಜಾ ಸಿದ್ದಣ್ಣ, ಲಕ್ಷ್ಮಿಬಾಯಿ ಪಾಟೀಲ ವಚನ ಗಾಯನ ಮಾಡಿದರು. ಈ ಸಂದರ್ಭದಲ್ಲಿ ಶ್ರೀಶೈಲಹುಡೇದ, ಭೀಮಾಶಂಕರ, ವೀರಶೆಟ್ಟಿಪಾಟೀಲ, ಶಾಮರಾವ್ ನೀಲಕಂಠಯ್ಯ ಸ್ವಾಮಿ, ಚಂದ್ರಕಾಂತ ಗುಂಗೆ, ರಾಮ ಮಜಿಗೆ, ಗಣಪತಿ ಖಾಸ್ತೆ, ಪುಷ್ಪಾ ಮಾಮನೆ, ಜಯಶ್ರೀ ಪಾಟೀಲ, ಜಯಶ್ರೀ ಬಿರಾಜದಾರ, ರಾಣಿ ವಡ್ಡೆ, ಅಂಬಿಕಾ ನಾಗರಾಳೆ, ಪಂಡಿತ ನಾಗರಾಳೆ, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಸುಮಿತ್ರಾ ದಾವಣಗಾವೆ ಸ್ವಾಗತಿಸಿದರು , ಸಂಗಮೇಶ ತೊಗರಖೇಡೆ ನಿರೂಪಿಸಿದರು, ರೇಣುಕಾ ಮಾಮನೆ ವಂದಿಸಿದರು.


# ವಾಹನ ಸರಬರಾಜಿಗೆ ಸೇವೆ ಒದಗಿಸಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 03–: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ರಾಷ್ಟ್ರೀಯ ಆರೋಗ್ಯ ಅಭಿಯಾನದ ವಿವಿಧ ಕಾರ್ಯಾಕ್ರಮಗಳಿಗೆ ಅವಶ್ಯಕವಾದ ಒಟ್ಟು 16 ವಾಹನಗಳು ಜಿಲ್ಲಾ ಮಟ್ಟದ ಕಚೇರಿಗಳಿಗೆ ಹಾಗೂ ತಾಲೂಕು ಮಟ್ಟದಲ್ಲಿ ಆರ್.ಬಿ.ಎಸ್.ಕೆ. ತಂಡಗಳಿಗೆ ವಾಹನಗಳನ್ನು ಸರಬರಾಜು ಮಾಡಲು ಆಯ್ದ ಸಂಸ್ಥೆಗಳಿಂದ ಒಂದು ವರ್ಷದ ಅವಧಿಗೆ ಸೇವೆಯನ್ನು ಒದಗಿಸಲು ಅರ್ಜಿ ಕರೆಯಲಾಗಿದೆ. ದಿನಾಂಕ: 04.07.2025ರಿಂದ18.07.2025ರ ಸಂಜೆ 5:30ರೊಳಗೆ ಅರ್ಜಿಗಳನ್ನು ಇ–ಪ್ರಕ್ಯೂರ್‌ಮೆಂಟ್ ವೆಬ್‌ಸೈಟ್ https://kppp.karnataka.gov.in ನಲ್ಲಿ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ, ಡಿ.ಪಿ.ಎಂ.ಯು. ವಿಭಾಗಕ್ಕೆ ಸಂಪರ್ಕಿಸಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಲೆಮಾರಿ–ಅರೆ ಅಲೆಮಾರಿ ಜನಾಂಗದ ಅರ್ಹ ಫಲಾನುಭವಿಗಳಿಗೆ
# ವಿವಿಧ ಸೌಲಭ್ಯ ಕಲ್ಪಿಸಿ ಜಿಲ್ಲಾಧಿಕಾರಿ ಡಾ.ಸುಶೀಲ.ಬಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜು:3– ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದ ಅರ್ಹ ಫಲಾನುಭವಿಗಳಿಗೆ ಸರ್ಕಾರದ ವಿವಿಧ ಇಲಾಖೆಗಳ ಸೌಲಭ್ಯಗಳನ್ನು ಸಕಾಲಕ್ಕೆ ತಲುಪಿಸುವಂತೆ ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಜಿಲ್ಲಾ ಮಟ್ಟದ ಅಲೆಮಾರಿ/ ಅರೆ ಅಲೆಮಾರಿ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಅರ್ಹ ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದವರು ಸರ್ಕಾರದ ವಿವಿಧ ಯೋಜನೆಗಳ ಲಾಭದಿಂದ ವಂಚಿತರಾಗಬಾರದು. ಸಂಬಂಧಿಸಿದ ಅಧಿಕಾರಿಗಳು ದಾಖಲಾತಿಗಳನ್ನು ಸಮರ್ಪಕವಾಗಿ ಪರಿಶೀಲಿಸಿ ಸೌಲಭ್ಯ ಕಲ್ಪಿಸುವಂತೆ ಸೂಚಿಸಿದರು. ಚಾಮನಾಳ ಗ್ರಾಮದಲ್ಲಿ 2025–26ನೇ ಸಾಲಿಗೆ ಅಲೆಮಾರಿ/ಅರೆ ಅಲೆಮಾರಿ ಜನಾಂಗದ ನಿವೇಶನ ರಹಿತ ಕುಟುಂಬದವರಿಗೆ, 60 ನಿವೇಶನ ಹಂಚಿಕೆಗೆ ಸಂಬಂಧಿಸಿದಂತೆ ಪುನರ್ ಪರಿಶೀಲನಾ ವರದಿ ಸಲ್ಲಿಸಬೇಕು. ಇದಕ್ಕಾಗಿ ಯಾದಗಿರಿ ನಗರಸಭೆ ಅಧಿಕಾರಿಗಳು, ಅಲೆಮಾರಿ ಹಾಗೂ ಅರೆ ಅಲೆಮಾರಿ ಜನಾಂಗದ ಪ್ರತಿನಿಧಿ ಹಾಗೂ ಗ್ರಾಮ ಆಡಳಿತಾಧಿಕಾರಿಗಳು ಒಳಗೊಂಡ ಮೂವರು ಸದಸ್ಯರ ತಂಡವನ್ನು ರಚಿಸಿ, ದಾಖಲಾತಿಗಳನ್ನು ಪರಿಶೀಲಿಸುವ ಜೊತೆಗೆ ಕ್ಷೇತ್ರ ಮಟ್ಟದಲ್ಲಿ ಭೇಟಿ ನೀಡಿ, ಮರು ಪರಿಶೀಲಿಸಿ, ವರದಿ ಸಲ್ಲಿಸುವಂತೆ ಅವರು ಸೂಚನೆ ನೀಡಿದರು.

ಈ ಜನಾಂಗದ ಕಾಲೋನಿಗಳಿಗೆ ಅವಶ್ಯಕತೆ ಇರುವ ಮೂಲಸೌಕರ್ಯಕ್ಕೆ ಸಂಬಂಧಿಸಿದಂತೆ ಪ್ರಸ್ತಾವನೆ ಸಲ್ಲಿಸಬೇಕು. ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಹಿಂದುಳಿದ ವರ್ಗಗಳ ಅಲೆಮಾರಿ /ಅರೆ ಅಲೆಮಾರಿ ಜನಾಂಗದ ಅರ್ಹ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಬೇಕು. ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ದೊರಕಿಸುವ

ಕುರಿತು ಜಿಲ್ಲಾಧಿಕಾರಿಗಳು ಪರಿಶೀಲಿಸಿದರು.


# ವಿವಿಧ ಹುದ್ದೆಗಳ ನೇಮಕಾತಿಗೆ ಜುಲೈ 4ರಂದು ನೇರ ಸಂದರ್ಶನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 03– ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ವಿವಿಧ ಕಾರ್ಯಕ್ರಮಗಳ ಅಡಿಯಲ್ಲಿ 2025–26ನೇ ಸಾಲಿಗೆ ಮಂಜೂರಾಗಿ ಖಾಲಿ ಇರುವ ಹುದ್ದೆಗಳನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿಯಮಾನುಸಾರ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಜುಲೈ 04 ರಂದು ನೇರ ಸಂದರ್ಶನದ ಅರ್ಜಿ ಆಹ್ವಾನಿಸಲಾಗಿದೆ.

ಹುದ್ದೆಗಳ ವಿವರ : ಸ್ತ್ರೀ ರೋಗ ತಜ್ಞರು–01 ಹುದ್ದೆ, ಮಕ್ಕಳ ತಜ್ಞರು–02 ಹುದ್ದೆ, ನೇತ್ರ ತಜ್ಞರು–01 ಹುದ್ದೆ, ಕಿವಿ ಮೂಗು ಗಂಟಲು ತಜ್ಞರು–02, ಎನ್.ಪಿ.ಪಿ.ಸಿ.ಡಿ., ಎಂ.ಬಿ.ಬಿ.ಎಸ್. ಎಸ್.ಎನ್.ಸಿ.ಯು. ವಿಭಾಗ–02 ಹುದ್ದೆಗಳು, ಎಂ.ಬಿ.ಬಿ.ಎಸ್. ಹೆಚ್.ಡಿ.ಯು. ವಿಭಾಗ–03, ಎಂ.ಬಿ.ಬಿ.ಎಸ್. ಐ.ಸಿ.ಯು./ಹೆಚ್.ಡಿ.ಯು.–06 ಹುದ್ದೆ, ಎಂ.ಬಿ.ಬಿ.ಎಸ್. ಎನ್.ಟಿ.ಇ.ಪಿ.–02 ಹುದ್ದೆ ಸೇರಿದಂತೆ ಒಟ್ಟು–19 ಹುದ್ದೆಗಳಿಗೆ ಗುತ್ತಿಗೆ ಆಧಾರದ ನೇಮಕಾತಿಯನ್ನು ಮೇರಿಟ್ ಕಮ್ ರೋಷ್ಟರ್ ಆಧಾರದ ಮೇಲೆ ಮಾಡಿಕೊಳ್ಳಲಾಗುವುದು, ಅರ್ಹ ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳಿಗೆ ಜುಲೈ 04ರ ಬೆಳಿಗೆ 10.30ಕ್ಕೆ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ನೇರ ಸಂದರ್ಶನ ಏರ್ಪಡಿಸಲಾಗಿದ್ದು, ಆಸಕ್ತರು ಭಾಗವಹಿಸಬಹುದಾಗಿದೆ.

ಈ ಗುತ್ತಿಗೆ ಆಧಾರದ ನೇಮಕಾತಿಯು ಎನ್.ಹೆಚ್.ಎಂ ನಿಯಮಾವಳಿಯ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಯೋಜನಾ ನಿರ್ವಹಣಾ ಘಟಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ ರಾಯಚೂರು ಇಲ್ಲಿಗೆ ಕಚೇರಿಯ ಅವಧಿಯಲ್ಲಿ ಭೇಟಿ ನೀಡಿ ಮಾಹಿತಿಯನ್ನು ಪಡೆಯಬಹುದು. ಅಥವಾ ದೂರವಾಣಿ ಸಂಖ್ಯೆ: 9449843121 ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಶಿಷ್ಟರಿಗೆ ಸ್ಮಶಾನ ಭೂಮಿ ಮಂಜೂರು ಮಾಡಿ ಜಾನಸನ್ ಘೋಡೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.03:ಬೀದರ್ ಜಿಲ್ಲೆಯ ಎಲ್ಲ ಗ್ರಾಮಗಳಲ್ಲಿ ಪರಿಶಿಷ್ಟರಿಗೆ ಸ್ಮಶಾನ ಭೂಮಿ ಮಂಜೂರು ಮಾಡಬೇಕು ಎಂದು ಕಾಂಗ್ರೆಸ್ ಕಾರ್ಮಿಕ ವಿಭಾಗದರಾಜ್ಯಕಾರ್ಯದರ್ಶಿ ಜಾನಸನ್ ಘೋಡೆ ಬೇಡಿಕೆ ಮಂಡಿಸಿದ್ದಾರೆ.

ಬೆಂಗಳೂರಿನಲ್ಲಿಗುರುವಾರ ಅವರು ಈ ಕುರಿತು ಕಂದಾಯ ಸಚಿವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ. ಜಿಲ್ಲೆಯಬಹುತೇಕ ಗ್ರಾಮಗಳಲ್ಲಿ ವಿಶೇಷವಾಗಿ ಔರಾದ್ ತಾಲ್ಲೂಕಿನಲ್ಲಿ ಪರಿಶಿಷ್ಟಜಾತಿಯವರಿಗೆ ಶವ ಸಂಸ್ಕಾರಕ್ಕೆಸ್ಮಶಾನ ಭೂಮಿ ಇಲ್ಲ ಎಂದು ತಿಳಿಸಿದರು. ಹಿಂದೆ ಸಾಮಾನ್ಯವರ್ಗದವರಸ್ಮಶಾನ ಭೂಮಿಯಲ್ಲಿ ಪರಿಶಿಷ್ಟರ ಶವ ಸಂಸ್ಕಾರ ಮಾಡಲಾಗುತ್ತಿತ್ತು. ಸದ್ಯ ಅದಕ್ಕೆ ಅವಕಾಶ ನೀಡದ ಕಾರಣ ಪರಿಶಿಷ್ಟರು ಸಂಕಷ್ಟ ಅನುಭವಿಸುವಂತಾಗಿದೆ ಎಂದು ಹೇಳಿದರು. ಜಿಲ್ಲೆಯ ಎಲ್ಲ ತಾಲ್ಲೂಕುಗಳಲ್ಲಿ ಸಮೀಕ್ಷೆ ನಡೆಸಿ, ಸ್ಮಶಾನ ಭೂಮಿ ಮಂಜೂರು ಮಾಡಲು ಸಂಬಂಧಪಟ್ಟ ಅಧಿಕಾರಿಗಳಿಗೆ ಆದೇಶಿಸಬೇಕು ಎಂದು ಮನವಿ ಮಾಡಿದರು.

# ಪ್ರಧಾನಮಂತ್ರಿ ಸಿಂಚಾಯಿ ಯೋಜನೆಯಡಿ ಸೌಲಭ್ಯಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.03:2025–26ನೇ ಸಾಲಿನ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಸೌಲಭ್ಯ ನೀಡಲು ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಮತ್ತು ರೇಷ್ಮೆ ಇಲಾಖೆ ಮೂಲಕ ರೈತರು ಸೂಕ್ಷ್ಮ ನೀರಾವರಿ ಘಟಕಗಳನ್ನು (ಹನಿ ಮತ್ತು ತುಂತುರು ನೀರಾವರಿ) ಅಳವಡಿಸಿಕೊಂಡಿದ್ದರೆ ಅಥವಾ ಸೂಕ್ಷ್ಮ ನೀರಾವರಿ ವ್ಯವಸ್ಥೆಯನ್ನು ಅಳವಡಿಸಿಕೊಳ್ಳಲು ನಿರ್ಧರಿಸಿದರೆ ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.

ಚಟುವಟಿಕೆಗಳ ವಿವರ: ವೈಯಕ್ತಿಕ ನೀರು ಸಂಗ್ರಹಣಾ ವಿನ್ಯಾಸಗಳು, ಕೇಂದ್ರೀಯ ಅಂತರ್ಜಲ ಮಂಡಳಿಯಿಂದ ಅಧಿಸೂಚನೆಯಾಗಿರುವ ಶೋಷಿತ, ನಿರ್ಣಾಯಕ ಮತ್ತು ಅರೆ ನಿರ್ಣಾಯಕ ಪ್ರದೇಶಗಳನ್ನು ಹೊರತುಪಡಿಸಿ, ಇತರೆ ಅಂತರ್ಜಲ ಸುರಕ್ಷಿತ ಪ್ರದೇಶಗಳಲ್ಲಿ ಕೊಳವೆ ಬಾವಿಗಳು ನಿರ್ಮಾಣ (ಅಲ್ಪ/ಮಧ್ಯಮ ಆಳದ), ಸಣ್ಣ ಬಾವಿಗಳ ಮರು ಸ್ಥಾಪನೆ/ನವೀಕರಣ, ಸ್ಥಗಿತಗೊಂಡಿರುವ ಕೊಳವೆ ಬಾವಿಗಳ ಮರು ಪೂರ, ಪೈಪ್/ಪ್ರಿ–ಕಾಸ್ಟ್ ವಿತರಣಾ ವ್ಯವಸ್ಥೆ, ನೀರೆತ್ತುವ ಸಾಧನೆಗಳು (ವಿದ್ಯುತ್, ಡೀಸೆಲ್, ಪವನ/ಸೌರ).

ಈ ಮೇಲಿನ ಸೌಲಭ್ಯಗಳನ್ನು ಪಡೆಯಲು ರಐತರು ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರು, ಕೃಷಿ ಇಲಾಖೆ ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಇಂದು ಬೀದರಗೆ ಸಚಿವೆ ಲಕ್ಷ್ಮೀ ಆರ್.ಹೆಬ್ಬಾಳಕರ್



ಮಲ್ಲಮ್ಮ ನುಡಿ ವಾರ್ತೆ

ಬೀದರ.ಜು.03:ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಸಚಿವರಾದ ಲಕ್ಷ್ಮೀ ಆರ್. ಹೆಬ್ಬಾಳಕರ್ ಅವರು ಜುಲೈ.4 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಅಂದು ಅವರು ಬೆಳಿಗ್ಗೆ 7.30ಗಂಟೆಗೆ ಬೆಂಗಳೂರಿನಿಂದ (ಸ್ಟಾರ್ ಏರ್ ಎಸ್ಎಸ್–159) ವಿಮಾನದ ಮೂಲಕ ಹೊರಟು ಬೆಳಿಗ್ಗೆ 8.45 ಗಂಟೆಗೆ ಬೀದರಗೆ ಆಗಮಿಸಲಿದ್ದಾರೆ. ಬೆಳಿಗ್ಗೆ 10 ಗಂಟೆಗೆ ಬೀದರ ಶಿವನಗರದಲ್ಲಿರುವ ಕಾಂಗ್ರೆಸ್ ಪಕ್ಷದ ಕಚೇರಿಗೆ ಭೇಟಿ ನೀಡಲಿದ್ದಾರೆ. ನಂತರ ಬೆಳಿಗ್ಗೆ 11 ಗಂಟೆಗೆ ಶಾರದಾ ಆರ್ ಸಿಟಿ, ಪ್ರತಾಪನಗರ ಮಾರುತಿ ಶೋ ರೂಂ ಪಕ್ಕ, ನೌಬಾದ್ ರಸ್ತೆ ಬೀದರದಲ್ಲಿ ಆಯೋಜಿಸಿರುವ ಕಲಬುರಗಿ ವಿಭಾಗೀಯ ಮಟ್ಟದ ಇಲಾಖಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 2.30 ಗಂಟೆಗೆ ಇಲಾಖೆಗೆ ಸಂಬಂಧಿಸಿದಂತೆ ಕ್ಷೇತ್ರಭೇಟಿ ನೀಡಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತರು ಬೆಳೆವಿಮ ಮಾಡಿಸಿಕೊಳ್ಳಿ: ಮಲ್ಲಿನಾಥ್ ನಾಗನಹಳ್ಳಿ ಮನವಿ



ಕಲಬುರಗಿ:ಜು.3: ರೈತ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ 2025–26ನೇ ಸಾಲಿನ ಖರೀಫ್ ಬೆಳೆಗಳಿಗೆ ರೈತರು ಬಾಂಧವರು ಬೆಳೆವಿಮೆ ಯೋಜನೆಯಡಿ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಕೊಳ್ಳಬೇಕು ಎಂದು ಕೂಟನೂರ ಡಿ ಪ್ರಾಥಮಿಕ ಕೃಷಿ ಸಹಕಾರ ಸಂಘದ ಅಧ್ಯಕ್ಷ ಮಲ್ಲಿನಾಥ್ ನಾಗನಹಳ್ಳಿ ಮನವಿ ಮಾಡಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಪ್ರತಿ ವರ್ಷದಂತೆ ಈ ವರ್ಷವೂ ರೈತರು ಬೆಳೆವಿಮೆ ಮಾಡಿಸಬೇಕು. ಬೆಳೆ ವಿಮೆ ನೋಂದಣಿಗೆ ಜುಲೈ 31 ಅಂತಿಮ ದಿನಾಂಕವಾಗಿದ್ದು, ರೈತರು ತಮ್ಮ ಹತ್ತಿರದ ಪೋಸ್ಟ್ ಆಫೀಸ್, ಬ್ಯಾಂಕ್, ಗ್ರಾಮ–ಒನ್ ಅಥವಾ ಸಿ.ಎಸ್.ಸಿ ಕೇಂದ್ರಗಳಲ್ಲಿ ನೋಂದಣಿ ಮಾಡಿಸಬಹುದಾಗಿದೆ ಎಂದಿದ್ದಾರೆ. ಬೆಳೆವಿಮೆಯಿಂದ ಅತಿವೃಷ್ಟಿ ಮತ್ತು ಅನಾವೃಷ್ಟಿ ಪ್ರಕೃತಿ ವಿಕೋಪಗಳಿಂದ ತಮ್ಮ ಬೆಳೆ ನಷ್ಟವಾಗಿ, ಆರ್ಥಿಕ ಸಂಕಷ್ಟ ಅನುಭವಿಸುವುದನ್ನು ತಪ್ಪಿಸಿಕೊಳ್ಳಬಹುದು. ಹೀಗಾಗಿ ಎಲ್ಲಾ ರೈತರು ಬೆಳೆ ವಿಮೆ ಮಾಡಿಸಿಕೊಳ್ಳಿ ಎಂದು ನಾಗನಹಳ್ಳಿ ಹೇಳಿದ್ದಾರೆ.

# ಜು. 6ರಂದು ಚಿತ್ರಕಲಾವಿದ ಸಿ.ಬಿ.ಸೋಮಶೆಟ್ಟಿಗೆ ಅಭಿನಂದನಾ ಸಮಾರಂಭ ಸಿ.ಬಿ. ಸೋಮಶೆಟ್ಟಿ ಚಿತ್ರಾಲಯ ರಾಜ್ಯಕ್ಕೆ ಮಾದರಿ: ಸುರೇಶ ಚನಶೆಟ್ಟಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 03 : ಖ್ಯಾತ ಚಿತ್ರಕಲಾವಿದ ಸಿ.ಬಿ.ಸೋಮಶೆಟ್ಟಿ ಶ್ರದ್ಧೆ ಮತ್ತು ನಿಷ್ಠೆಯ ಶ್ರೇಷ್ಠ ಕಲಾವಿದರಾಗಿದ್ದಾರೆ. ಅವರು ತಮ್ಮ ಸ್ವಂತ ಖರ್ಚಿನಲ್ಲಿ ತಮ್ಮ ಮನೆಯಲ್ಲೇ ವಿಶ್ವಗುರು ಬಸವೇಶ್ವರರ ಜನನದಿಂದ ಲಿಂಗೈಕ್ಯರಾಗುವವರೆಗೆ ಸುಮಾರು 130 ಚಿತ್ರಕಲೆಗಳನ್ನು ಬಿಡಿಸಿ ಅವರ ಜೀವನದ ಮೇಲೆ ಬೆಳಕು ಚೆಲ್ಲುವ ಕಾರ್ಯ ಮಾಡಿದ್ದಾರೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಸುರೇಶ ಚನಶೆಟ್ಟಿ ತಿಳಿಸಿದರು.


ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಕ–ರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಜು. 6ರಂದು ರವಿವಾರ ಬೆಳಿಗ್ಗೆ 10.30ಕ್ಕೆ ಬೀದರನ ಬಸವನಗರದಲ್ಲಿರುವ ಸಿ.ಬಿ.ಸೋಮಶೆಟ್ಟಿ ಚಿತ್ರಾಲಯದ ಎದುರುಗಡೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಸಿ.ಬಿ.ಸೋಮಶೆಟ್ಟಿ ಕಲಾ ಪ್ರತಿಷ್ಠಾನ ಹಾಗೂ ವಚನ ಸಮೂಹ ಸಂಸ್ಥೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಸಿ.ಬಿ.ಸೋಮಶೆಟ್ಟಿ ಚಿತ್ರಾಲಯ ಮತ್ತು ಶ್ರೀಗುರುಬಸವ ಚಿತ್ರಚರಿತ ಗ್ರಂಥ ಲೋಕಾರ್ಪಣೆ ಹಾಗೂ ಅಭಿನಂದನಾ ಸಮಾರಂಭ ಆಯೋಜಿಸಲಾಗಿದೆ. ಆರ್ಟ್ ಗ್ಯಾಲರಿಯನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಉದ್ಘಾಟನೆ ಮಾಡಲಿದ್ದು, ಗ್ರಂಥ ಲೋಕಾರ್ಪಣೆಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶಿವರಾಜ ತಂಗಡಗಿ ಮಾಡಲಿದ್ದಾರೆ. ಮಹಾದ್ವಾರದ ಉದ್ಘಾಟನೆಯನ್ನು ಪೌರಾಡಳಿತ ಮತ್ತು ಹಜ್ ಸಚಿವರ ಹಿಂಖಾನ್ ನೆರವೇರಿಸಲಿದ್ದಾರೆ. ಅಭಿನಂದನಾ ನುಡಿಗಳನ್ನು ಕಲಬುರಗಿಯ ಚೈತನ್ಯಮಯಿ ಆರ್ಟ್ ಗ್ಯಾಲರಿ ನಿರ್ದೇಶಕ ಡಾ.ಎ.ಎಸ್.ಪಾಟೀಲ ನುಡಿಯಲಿದ್ದಾರೆ.

ದಿವ್ಯ ಸಾನಿಧ್ಯವನ್ನು ಬಸವಕಲ್ಯಾಣ ಅನುಭವ ಮಂಟಪ ಅಧ್ಯಕ್ಷ ಪೂಜ್ಯ ಶ್ರೀ ಡಾ.ಬಸವಲಿಂಗಪಟ್ಟದ್ದೇವರು ವಹಿಸಲಿದ್ದು, ನೇತೃತ್ವವನ್ನು ಹುಲಸೂರಿನ ಪೂಜ್ಯ ಶ್ರೀ ಶಿವಾನಂದ ಸ್ವಾಮೀಜಿ, ಅಧ್ಯಕ್ಷತೆಯನ್ನು ಪೂಜ್ಯ ನಿಜಗುಣಪ್ರಭು ತೊಂಡದಾರ್ಯ ಮಹಾಸ್ವಾಮಿಗಳು ವಹಿಸಲಿದ್ದಾರೆ. ಅಲ್ಲದೇ ನಾಡಿನ ಅನೇಕ ಮಠಾಧೀಶರು ಪಾಲ್ಗೊಳ್ಳಲಿದ್ದು, ಘನ ಉಪಸ್ಥಿತಿಯನ್ನು ಜಿ.ಕೆ.ಫೌಂಡೇಶನ್ ಅಧ್ಯಕ್ಷ ಗುರುನಾಥ ಕೊಳ್ಳೂರು, ಚ.ಭೀ.ಸೋಮಶೆಟ್ಟಿ, ಸಿದ್ರಾಮಪ್ಪ ಮಾಸಿಮಾಡೆ, ಅರುಣ ಹೊತಪೇಟ್, ಸುರೇಶ ಚನಶೆಟ್ಟಿ ಸೇರಿದಂತೆ ಅನೇಕ ಗಣ್ಯರು ವಿಶೇಷ ಆಹ್ವಾನಿತರಾಗಿ ಆಗಮಿಸಲಿದ್ದಾರೆ ಎಂದು ಕಾರ್ಯಕ್ರಮದ ಕುರಿತು ಮಾಹಿತಿ ನೀಡಿದರು.

ಸಿ.ಬಿ.ಸೋಮಶೆಟ್ಟಿ ಕಲಾ ಪ್ರತಿಷ್ಠಾನದ ಉಪಾಧ್ಯಕ್ಷ ಅರುಣಕುಮಾರ ಹೊತಪೇಟ್ ಮಾತನಾಡಿ ಸೋಮಶೆಟ್ಟಿಯವರು ಈ ನಾಡು ಕಂಡ ಶ್ರೇಷ್ಠ ಕಲಾವಿದರಲ್ಲಿ ಒಬ್ಬರಾಗಿದ್ದಾರೆ. ಅವರಿಗೆ ರಾಜ್ಯ ಸರ್ಕಾರ ಗುರುತಿಸಿ ಅತ್ಯುನ್ನತ ಪ್ರಶಸ್ತಿ ಪುರಸ್ಕಾರ ನೀಡಿ ಗೌರವಿಸಬೇಕು. ಜೊತೆಗೆ ಅವರು ನಿರ್ಮಿಸಿರುವ ಆರ್ಟ್ ಗ್ಯಾಲರಿಗೆ ಸರ್ಕಾರ ಅನುದಾನ ಒದಗಿಸಬೇಕು. ಜೊತೆಗೆ ಇದೇ ಮಾದರಿಯಲ್ಲಿ ಬಸವಕಲ್ಯಾಣದಲ್ಲಿಯೂ ಒಂದು ವಿಶೇಷ ಆರ್ಟ್ ಗ್ಯಾಲರಿ ಸರ್ಕಾರ ನಿರ್ಮಿಸಲು ಪ್ರಯತ್ನಿಸಬೇಕೆಂದು ತಿಳಿಸಿದರು.

ಇದೇ ವೇಳೆ ವಚನ ವರ್ಷಿಣಿ ತಂಡದ ಅಧ್ಯಕ್ಷೆ ಲಿಂಗಾರತಿ ನಾವದಗೆರೆ ಮಾತನಾಡಿ ಇಂದು ಮಕ್ಕಳು ಪುಸ್ತಕ ಓದುವ ಹವ್ಯಾಸ ಬಹುತೇಕ ಕಳೆದುಕೊಂಡಿದ್ದಾರೆ. ಹೀಗಾಗಿ ಚಿತ್ರಕಲೆ ಮೂಲಕ ಬಸವಣ್ಣನವರ ಮತ್ತು ಶರಣರ ಜೀವನ ಚರಿತ್ರೆ ತಿಳಿದುಕೊಳ್ಳಲು ಈ ಸೋಮಶೆಟ್ಟಿಯವರ ಚಿತ್ರಕಲಾ ಗ್ಯಾಲರಿ ಸಹಕಾರಿಯಾಗಲಿದೆ. ಸುಮಾರು 15 ವರ್ಷಗಳ ತಪಸ್ಸಿನ ಫಲವೇ ಈ ಚಿತ್ರಕಲೆ ಆರ್ಟ್ ಗ್ಯಾಲರಿಯಾಗಿದೆ. ಇದು ಅಂತರಾಷ್ಟ್ರೀಯ ಮಟ್ಟದಲ್ಲಿ ಬೆಳೆಯಲಿ. ಎಲ್ಲರೂ ಕಾರ್ಯಕ್ರಮಕ್ಕೆ ಆಗಮಿಸಿ ಪ್ರೋತ್ಸಾಹಿಸಬೇಕೆಂದು ಕರೆ ನೀಡಿದರು. ಇದೇ ವೇಳೆ ಕ.ರಾ.ಶಿ ಸಂಸ್ಥೆಯ ನಿರ್ದೇಶಕ ಸಿದ್ಧರಾಜ ಪಾಟೀಲ ಮಾತನಾಡಿದರು. ಪ್ರಮುಖರಾದ ಶಿವಶಂಕರ ಟೋಕರೆ, ರೇವಣಪ್ಪ ಸೋಮಶೆಟ್ಟಿ, ರೇವಣಪ್ಪ ಮೂಲಗೆ, ಮಲ್ಲಿಕಾರ್ಜುನ ನಿಂಗದಳ್ಳಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿನಿಯರಿಗಾಗಿ ಆಪ್ತ ಸಮಾಲೋಚನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಜು.3: ನಗರದ ಹೈ.ಕ.ಶಿ. ಸಂಸ್ಥೆಯ ಬಿ.ವಿ. ಭೂಮರಡ್ಡಿ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಪದವಿ ಮಹಾವಿದ್ಯಾಲಯದಲ್ಲಿ ಎನ್.ಎಸ್.ಎಸ್. ವಿಶೇಷ ವಾರ್ಷಿಕ ಶಿಬಿರದ ತೃತೀಯ ದಿನದ ಅಂಗವಾಗಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ಆಪ್ತ ಸಮಾಲೋಚನಾ ಅಧಿಕಾರಿ ಹಾಗೂ ಜಿಲ್ಲಾ ಮಕ್ಕಳ ಕಲ್ಯಾಣಾಧಿಕಾರಿಗಳಾದ ಶ್ರೀ ಸೀಮಪ್ಪ ಸರಕುರೆ ಅವರು ಮಾತನಾಡುತ್ತಾ ಇಂದಿನ ಆಧುನಿಕ ಯುಗದಲ್ಲಿ ವಿದ್ಯಾರ್ಥಿನಿಯರು ಮೋಬೈಲ್ ಗೀಳಿಗೆ ದಾಸರಾಗಿ ಖಿನ್ನತೆಗೆ ಒಳಗಾಗುತ್ತಿದ್ದಾರೆ ಅಂಥಹ ವಿದ್ಯಾರ್ಥಿಗಳನ್ನು ನಾವು ಆಪ್ತ ಸಮಾಲೋಚನೆ ನಡೆಸಿ ಯಾವುದೇ ವಿಚಾರಗಳು ನಾವು ಬಹಿರಂಗ ಪಡಿಸದೆ ಗುಪ್ತವಾಗಿಟ್ಟು ನಾವು ಸಮಾಜದ ಸರಿದಾರಿಗೆ ಅಂತಹವರನ್ನು ತರುತ್ತೇವೆ. ತಮ್ಮ ಸಮಾಜದ ಅಥವಾ ಗ್ರಾಮದಲ್ಲಿ ಯಾವುದೇ ಮಹಾವಿದ್ಯಾಲಯದ ವಿದ್ಯಾರ್ಥಿಗಳಿದ್ದರು ಅವರಿಗೆ ನಮ್ಮ ಹತ್ತಿರ ಕರೆದುಕೊಂಡು ಬಂದಾಗ ನಾವು ಸರಿಯಾದ ಚಿಕಿತ್ಸೆಕೊಟ್ಟು ಸರಿದಾರಿಗೆ ತರುತ್ತೇವೆ. ಆದುದರಿಂದ ಇಂದಿನ ಶಿಬಿರದಲ್ಲಿ ಪಾಲ್ಗೊಂಡ ಶಿಬಿರಾರ್ಥಿಗಳು ಒಳ್ಳೆಯ ಹವ್ಯಾಸ ಬೆಳೆಸಿಕೊಂಡು ಅಂ–ದರೆ ಗ್ರಂಥಗಳನ್ನು ಓದುವುದು ಲೇಖಗಳನ್ನು ಬರೆಯುವುದು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಪಯುಕ್ತವಾಗುವಂತಹ ಪುಸ್ತಕಗಳನ್ನು ಓದಿ ಸಾಧನೆ ಮಾಡಬೇಕೆಂದು ಕಿವಿ ಮಾತು ಹೇಳಿದರು. ಮಹಾವಿದ್ಯಾಲಯದ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂರೆಯವರು ಮಾತನಾಡುತ್ತಾ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಸಮಯಕ್ಕೆ ಸರಿಯಾಗಿ ಅಧ್ಯಯನ ಹಾಗೂ ಕಿರು ಪರೀಕ್ಷೆಗಳನ್ನು ಎದುರಿಸಿ ತಮ್ಮಲ್ಲಿ ಇರುವ ಪರೀಕ್ಷಾ ಭಯವನ್ನು ಹೋಡೆದೋಡಿಸಿ ಉನ್ನತ ಜ್ಞಾನಾರ್ಜನೆ ಮಾಡಿ ಉನ್ನತ ಹುದ್ದೆ ಪಡೆದು ಗ್ರಾಮದ ಮತ್ತು ಪಾಲಕರ ಹೆಸರು ಚಿರಸ್ಥಾಯಿಗೊಳಸಬೇಕೆಂದು ಹೇಳುತ್ತಾ ಒಂದು ಪ್ರೋತ್ಸಾಹ ಗೀತೆಯ ಜೊತೆಗೆ ಶಿಬಿರಾರ್ಥಿಗಳನ್ನು ಹುರಿದುಂಬಿಸಿದರು.

ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ವಹಿಸಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಪಿ. ವಿಠ್ಠಲ ರಡ್ಡಿಯವರು ಮಾತನಾಡುತ್ತಾ ಒಬ್ಬ ಶಿಬಿರಾರ್ಥಿ ಒಂದು ಗ್ರಾಮದ ಪ್ರಗತಿ ಸಾಧಿಸಲು ತಾವು ಗ್ರಾಮದಲ್ಲಿ ಒಂದು ಯುವಕರ ಸಂಘವನ್ನು ಕಟ್ಟಿಕೊಂಡು ಗ್ರಾಮದ ಯಶೋಭಿವೃದ್ಧಿಗೆ ಕಾರಣಕರ್ತರಾಗಬೇಕು ಹಾಗೂ ಗುರುಹಿರಿಯರ ಹಾಗೂ ವಯೋವೃದ್ಧರ ಸಹಾಯಕ್ಕೆ ಬರಬೇಕು ಮತ್ತು ವಿದ್ಯಾರ್ಥಿನಿಯರು ನಮ್ಮ ಸ್ವದೇಶಿ ಸಂಸ್ಕೃತಿ ಅಳವಡಿಸಿಕೊಂಡು ಭಾರತೀಯತೆಯನ್ನು ಎತ್ತಿಹಿಡಿಯಬೇಕು ಹಾಗೂ ನಮ್ಮಲ್ಲಿರುವ ವೀರರಾಣಿ ಕಿತ್ತೂರು ಚೆನ್ನಮ್ಮ, ಡಾ. ಪ್ರತಿಭಾ ದೇವಿಸಿಂಗ್ ಪಾಟೀಲ, ಶ್ರೀಮತಿ ಇಂದಿರಾ ಗಾಂಧಿ, ಸರೋಜನಿ ನಾಯ್ಡು, ಉಮಾಬಾಯಿ ಕುಂದಾಪುರ, ಇಂತಹ ಮಹಾನ ಮಹಿಳೆಯರ ಸಾಧನೆಯನ್ನು ತಮ್ಮ ಆದರ್ಶವನ್ನುಟ್ಟಿಕೊಂಡು ಮುನ್ನಡೆಯಬೇಕೆಂದು ಮಾರ್ಮಿಕವಾಗಿ ನುಡಿದರು.

ಕಾರ್ಯಕ್ರಮದ ವೇದಿಕೆಯ ಮೇಲೆ ಗೌರವ ಉಪಸ್ಥಿತಿಯನ್ನು ರಸಾಶಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಮಲ್ಲಿಕಾರ್ಜುನ ಕೋಟೆ, ಎನ್.ಎಸ್.ಎಸ್. 'ಅ' ಘಟಕದ ಸಂಯೋಜನಾಧಿಕಾರಿಗಳಾದ ಡಾ. ದೀಪಾ ರಾಗ, ಹಾಗೂ 'ಬ' ಘಟಕ ಸಂಯೋಜನಾಧಿಕಾರಿಗಳಾದ ಶ್ರೀ ಬಸವರಾಜ ಬಿರಾದಾರ ಉಪಸ್ಥಿತರಿದ್ದರು. ಕಾರ್ಯಕ್ರಮ ಮೊದಲಿಗೆ ಸ್ವಾಗತವನ್ನು ಇತಿಹಾಸ ವಿಭಾಗದ ಉಪನ್ಯಾಸಕರ ಶ್ರೀ ಬಸವರಾಜ ಬಿರಾದಾರ ನಡೆಸಿಕೊಟ್ಟರೆ, ಕಾರ್ಯಕ್ರಮದ ನಿರೂಪಣೆಯನ್ನು ಹಿಂದಿ ವಿಭಾಗದ ಉಪನ್ಯಾಸಕರಾದ ಶ್ರೀ ನೂರ ಪಾಶಾ ಮಾಡಿದರೆ ಕಾರ್ಯಕ್ರಮವನ್ನು ಕನ್ನಡ ವಿಭಾಗದ ಶ್ರೀಮತಿ ಕಾವೇರಿ ಖಂಡ್ರೆ ವಂದಿಸಿದರು, ಕಾರ್ಯಕ್ರಮದಲ್ಲಿ ಎನ್.ಎಸ್.ಎಸ್. ಶಿಬಿರಾರ್ಥಿಗಳು, ಪ್ರಾಧ್ಯಾಪಕರು, ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಜು. 6ರಂದು ಸಾಯಂಕಾಲ ರಂಗಮಂದಿರದಲ್ಲಿ ಶಿವಾನಿ ಸ್ವಾಮಿಗೆ ಅಭಿನಂದನಾ ಸಮಾರಂಭ ಡಾ.ಸಂತೋಷ ಹಾನಗಲ್ ವಿರಚಿತ ಭಾಷೆ ಬದುಕು ಗ್ರಂಥ ಬಿಡುಗಡೆ: ಸೋನಾರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 03 : ಜುಲೈ 6ರಂದು ನಗರದ ಜಿಲ್ಲಾ ರಂಗಮಂದಿರದಲ್ಲಿ ಸಾ. 5 ಗಂಟೆಗೆ ಜೀ ಕನ್ನಡ ಸರಿಗಮಪ ಸೀಜನ್ 21ರ ವಿಜೇತೆ ಕಉ. ಶಿವಾನಿ ಸ್ವಾಮಿಗೆ ಅಭಿನಂದನಾ ಸಮಾರಂಭ ಮತ್ತು ಡಾ. ಸಂತೋಷ ಹಾನಗಲ್ ವಿರಚಿತ ಭಾಷೆ ಬದುಕು ಗ್ರಂಥ ಲೋಕಾರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಕಲ್ಯಾಣ ಕರ್ನಾಟಕ ಕಲಾವಿದರ ಒಕ್ಕೂಟದ ಅಧ್ಯಕ್ಷ ವಿಜಯಕುಮಾರ ಸೋನಾರೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಕ–ರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಶಿವಾನಿ ಸ್ವಾಮಿ ತನ್ನ ಗಾಯನದ ಮೂಲಕ ಬೀದರ ಜಿಲ್ಲೆಯ ಹೆಸರು ರಾಷ್ಟ್ರಮಟ್ಟದಲ್ಲಿ ಬೆಳೆಸಿದ್ದಾಳೆ. ಹೀಗಾಗಿ ಆಕೆಗೆ ಅಭಿನಂದನಾ ಸಮಾರಂಭ ಆಯೋಜಿಸಲಾಗಿದ್ದು, ಈ ಕಾರ್ಯಕ್ರಮವನ್ನು ಅರಣ್ಯ ಜೀವಿಶಾಸ್ತ್ರ ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಉದ್ಘಾಟಿಸಲಿದ್ದು, ಪುಸ್ತಕ ಲೋಕಾರ್ಪಣೆಯನ್ನು ಪೌರಾಡಳಿತ ಹಜ್ ಸಚಿವ ರಹಿಂಖಾನ್ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ವಹಿಸಲಿದ್ದು, ಕೃತಿ ಪರಿಚಯವನ್ನು ಕಲಬುರಗಿಯ ನಿ. ಪ್ರಾಧ್ಯಾಪಕ ಡಾ. ಕಲ್ಯಾಣರಾವ ಜಿ ಪಾಟೀಲ ಮಾಡಿಕೊಡಲಿದ್ದಾರೆ. ದಿವ್ಯ ಸಾನಿಧ್ಯವನ್ನು ಅನುಭವಮಂಟಪ ಅಧ್ಯಕ್ಷ ಡಾ. ಬಸವಲಿಂಗ ಪಟ್ಟದ್ದೇವರು ವಹಿಸಲಿದ್ದು, ನೇತೃತ್ವವನ್ನು ಹುಲಸೂರಿನ ಡಾ. ಶಿವಾನಂದ ಮಹಾಸ್ವಾಮಿಗಳು ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ, ಮೀನುಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ಬಿ ನಾರಾಯಣರಾವ, ಕರ್ನಾಟಕ ಜಾನಪದ ಅಕಾಡೆಮಿ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ, ಡಾ. ಸಂತೋಷ ಹಾನಗಲ್, ಸೇರಿದಂತೆ ಹಲವರು ಉಪಸ್ಥಿತರಿರಲಿದ್ದಾರೆ.

ಇದೇ ವೇಳೆ ಸರ್ಕಾರದಿಂದ ನಾಮನಿರ್ದೇಶನಗೊಂಡ ಸದಸ್ಯರಿಗೆ ಸನ್ಮಾನ ನೆರವೇರಲಿದೆ. ನಾಡಗೀತೆಯನ್ನು ಸವಿಗಾನ ಸಂಗೀತ ಅಕಾಡೆಮಿ ವತಿಯಿಂದ ನಡೆಯಲಿದ್ದು, ಆಶಯ ನುಡಿ ಸುರೇಶ ಚನಶೆಟ್ಟಿ, ಸ್ವಾಗತವನ್ನು ವಿಜಯಕುಮಾರ ಸೋನಾರೆ, ವಂದನಾರ್ಪಣೆಯನ್ನು ಶಿವಕುಮಾರ ಕಟ್ಟೆ ನೆರವೇರಿಸಲಿದ್ದಾರೆ. ಜಿಲ್ಲೆಯ ಜನರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಕೋರಿದರು.

ಕ.ರಾ.ಶಿ ಸಂಸ್ಥೆಯ ನಿರ್ದೇಶಕ ಸಿದ್ಧರಾಜ ಪಾಟೀಲ ಮಾತನಾಡಿ ಶಿವಾನಿ ಸ್ವಾಮಿ ನಮ್ಮ ಕರ್ನಾಟಕ ಕಾಲೇಜಿನಲ್ಲಿಯೇ ವ್ಯಾಸಂಗ ಮಾಡುತ್ತಿದ್ದು, ಆಕೆಯ ಶಿಕ್ಷಣ ಸಂಪೂರ್ಣವಾಗಿ ನಾವು ಉಚಿತವಾಗಿ ನೀಡುತ್ತಿದ್ದೇವೆ. ಆಕೆ ಪಿಯುಸಿಯಲ್ಲಿ ಇದ್ದಾಗ ಹಿಂದಿ ಇಂಡಿಯನ್ ಐಡೋಲ್‌ಗೆ ಆಯ್ಕೆಯಾಗಿದ್ದಳು. ಇದೀಗ ಪದವಿ ಓದುತ್ತಿದ್ದಾಗ ಜೀ ಕನ್ನಡದ ಸರಿಗಮಪಗೆ ಆಯ್ಕೆಯಾಗಿ ಕೊನೆಗೆ ಸೀಜನ್ 21ರ ವಿನ್ನರ್ ಆಗಿ ಹೊರಹೊಮ್ಮಿದ್ದು ನಮ್ಮ ಕಾಲೇಜಿಗೆ ಒಂದು ಹೆಮ್ಮೆಯ ವಿಷಯವಾಗಿದೆ. ಆದ್ದರಿಂದ ಕರ್ನಾಟಕ ಕಾಲೇಜಿನ ಸಹಕಾರದೊಂದಿಗೆ, ಬಸವರಾಜ ಜಾಬಶೆಟ್ಟಿಯವರ ಅಧ್ಯಕ್ಷತೆಯಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸುರೇಶ ಚನಶೆಟ್ಟಿ ಹಾಗೂ ಶಿವಶಂಕರ ಟೋಕರೆ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದು

# ಹಿಂದೂ-ಮುಸ್ಲಿಂ ಭಾವೈಕ್ಯ ಅವಿನಾವ ಸಂಬಂಧ ಬೆಸೆಯುವ ಮೊಹರಂ



ನಮ್ಮ ನಾಡಿನ ಸಾಮರಸ್ಯದ ಪ್ರತಿಕ ಹಿಂದೂ ಮುಸ್ಲಿಂ ಸೇರಿದಂತೆ ಎಲ್ಲಾ ಸಮುದಾಯದ ಜನರು ಒಗ್ಗೂಡಿ ಆಚರಿಸುವ ಮೊಹಂ ಹಬ್ಬ ನಮ್ಮ ನೆಲದಲ್ಲಿ ಕೋಮು ಸೌಹಾರ್ದ ಉಳಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ ದೂರದ ನಾಡಿನಲ್ಲಿ ನಡೆದ ದುರಂತ ಹೊಂದರ ಸ್ಮರಣೆಗಾಗಿ ಹುಟ್ಟಿದ ಧಾರ್ಮಿಕ ಆಚರಣೆ ನಮ್ಮಲ್ಲಿ ಸಾಂಸ್ಕೃತಿಕ ಆಚರಣೆ ರೂಪಾಂತರ ಪಡೆದಿರುವದು ವಿಶೇಷ ಮೂಲತಃ ಇದು ಶೊಕ ವ್ಯಕ್ತಪಡಿಸುವ ಆಚರಣೆ ಇತ್ತೀಚಿನ ದಿನಗಳಲ್ಲಿ ನಮ್ಮ ನಾಡು ನಮ್ಮ ದೇಶದಲ್ಲಿ ಮೊಹರಂ ಉತ್ಸವ ರೂಪದಲ್ಲಿ ರಂಗು ಪಡೆದಿರುವುದು ಮತ್ತೊಂದು ವಿಶೇಷ.

ಭಾರತ ದೇಶವು ಪ್ರಾಚೀನ ಕಾಲದಿಂದಲೂ ಒಂದು ಸನಾತನ ಧರ್ಮಕ್ಕೆ ಅಂಟಿಕೊಂಡು ಒಂದೇ ಧರ್ಮದ ಆಧಾರದ ಮೇಲೆ ನಡೆದುಕೊಳ್ಳುತ್ತಿದ್ದ ಜನ ತುಂಬಾ ವಿರಳವಾಗಿತ್ತು ರಾಜ-ಮಹಾರಾಜರ ಕಾಲದಿಂದಲೂ ಜಾತಿ ಮತ ಪಂಥ ಎನ್ನುವ ಗೊಡವಿಗೆ ಹೋಗದೆ ಎಲ್ಲರೂ ನಮ್ಮವರು ಎಲ್ಲರೂ ನಮ್ಮ ನೆಲದವರು ಅನೇಕ ಪರಿಕೀಯರ ಹಾಗೂ ಬ್ರಿಟಿಷರ ವಿರುದ್ಧ ಹೋರಾಟಗಳದ್ದೆ ಸದ್ದು ವಿನಃಹ ಯಾವತ್ತು ಜಾತಿ ಜಾತಿ ಎಂದು ಬಡಿದಾಡಿದ ಉದಾಹರಣೆಗಳೇ ಸಿಗುತ್ತಿರಲಿಲ್ಲ ಆದರೆ ಜನವಾಸಿಗಳು ಅಭಿವೃದ್ಧಿಯ ಹೆಸರಿನಲ್ಲಿ ಬಲಗೊಂಡ ನಂತರ ನಮ್ಮ ನಮ್ಮಲ್ಲಿಯೇ ಜಾತಿಗಳು ಹುಟ್ಟಿಕೊಂಡು ಇಂದು ಅಧರ್ಮ ತಾಂಡವಾಡುತ್ತಿದೆ ನಮ್ಮ ನಮ್ಮ ಒಳಗೆ ಜಾತಿ ಭೇದಭಾವ ಪ್ರಾರಂಭವಾಯಿತು ವಿನ:ಹ ಮೊದಲಿನವರ್ಯಾರು ಯಾವತ್ತೂ ಜಾತಿ ಭೇದ ಭಾವ ಮಾಡಿರಿ ಎಂದು ಎಲ್ಲ ದಾಖಲಿಸಿಲ್ಲ ಕೇವಲ ಒಂದು ಧರ್ಮ ಒಂದು ಜಾತಿಗೆ ಅಂಟಿಕೊಂಡು ಯಾವ ರಾಜ ಮಹಾರಾಜರು ಆಡಳಿತ ನಡೆಸಿದ ಉದಾಹರಣೆಗಳು ಪ್ರಾಚೀನ ಭಾರತದ ಇತಿಹಾಸದಿಂದಲೂ ಈವರೆಗೂ ಗೋಚರಿಸುವುದು ತುಂಬಾ ವಿರಳ ಆದರೆ ಇತ್ತಿತ್ತಲಾಗಿ ನಮ್ಮ ನಮ್ಮಗಳ ಮಧ್ಯೆ ಜಾತಿ ಭೇದಭಾವಗಳನ್ನು ಬೆಳೆಸಿಕೊಂಡು ನಮ್ಮೊಳಗೆ ನಾವೇ ಬಡಿದಾಡಿ ನಮ್ಮ ಕಾಲನ್ನು ನಾವೇ ಎಳೆಯುವಂತ ಪರಿಸ್ಥಿತಿಗೆ ಬಂದಿರುವದು ತುಂಬಾ ವಿಷಾಧನೆಯೆನಿಸಿದರು ಸತ್ಯವಾದ ಮಾತು ಆದರೆ ಎಷ್ಟೇ ಜಾತಿ ಭೇದ ಭಾವಗಳ ತಾರತಮ್ಯವಾದರು ಮೊಹರಂ ಹಬ್ಬ ಬಂದಾಗ ಮಾತ್ರ ನಮ್ಮ ಭಾರತೀಯ ಜನ ನಾವೆಲ್ಲರೂ ಒಂದಾಗಿದ್ದೇವೆ ಎಂದು ಮೊಹರಂ ಹಬ್ಬ ಮುಸ್ಲಿಮರ ಹಬ್ಬವಾದರೂ ಭಾರತೀಯ ಗ್ರಾಮೀಣ ಪ್ರದೇಶದಲ್ಲಿ ಹಿಂದುಗಳ ಸಂಪೂರ್ಣವಾಗಿ ಈ ಹಬ್ಬದ ನೇತೃತ್ವ ವಹಿಸಿ ಹಬ್ಬವನ್ನು ಅದ್ದೂ-ರಿಯಾಗಿ ಆಚರಿಸುತ್ತಿರುವುದು ದೇಶಾದ್ಯಂತ ಎಲ್ಲರ ಗಮನ ಸೆಳೆಯುತ್ತದೆ ಮೊಹರಂ ಹಬ್ಬ ಎಂದರೆ ಅದಕ್ಕೆ ಕಾರಣ ಹಿಂದೂ ಮುಸ್ಲಿಮರು ಸಹೋದರರ ಬಾಂಧತ್ವ ಬೆಸೆಯುವ ಹಾಗೂ ನಾವೆಲ್ಲರೂ ಒಂದು ಎನ್ನುವ ಭಾವನೆಯಿಂದ ನಡೆದುಕೊಳ್ಳುವ ಮನೋಭಾವ ಇರುವುದರಿಂದ ಹಬ್ಬಗಳು ವಿಶೇಷವಾಗಿ ನಡೆಯುತ್ತಿರುವುದಕ್ಕೆ ಭಾರತ ಸಾಕ್ಷಿಯಾಗಿದೆ.

ಕರ್ನಾಟಕದಲ್ಲಿಂತು ಮೊಹರಂ ಹಬ್ಬ ಪ್ರತಿ ಊರಿನ ಜಾತ್ರೆಯನ್ನಾಗಿ ಆಚರಣೆ ಮಾಡುವ ಪ್ರತಿತಿಯಿದೆ ನಮ್ಮ ರಾಜ್ಯದಲ್ಲಿ ಜಾತ್ರೆಗಳು ನಡೆಯದ ಅದೆಷ್ಟೋ ಹಳ್ಳಿಗಳು ಇವೆ ಮುಸ್ಲಿಮರೆ ವಾಸವಿಲ್ಲದ ಸಾಕಷ್ಟು ಗ್ರಾಮಗಳಲ್ಲಿ ಮೊಹರಂ ಹಬ್ಬದ ಮೆರವಣಿಗೆ ನಡೆಯಲಾರದ ಹಳ್ಳಿಗಳೇ ಇಲ್ಲ. ಹಾಗಾಗಿ ಪ್ರತಿಯೊಬ್ಬರೂ ಊರಿನ ಜಾತ್ರೆಯನ್ನಾಗಿ ಮೊಹರಂ ಹಬ್ಬ ಅದ್ದೂರಿಯಾಗಿ ಹಿಂದು ಮುಸ್ಲಿಂ ಎನ್ನದೆ ಎಲ್ಲರೂ ಏಕತಾಭಾವದಿಂದ ಗ್ರಾಮದ ಜಾತ್ರೆಯನ್ನಾಗಿ ಆಚರಣೆ ಮಾಡುವ ಪರಂಪರೆ ಈ ಮೊದಲಿನಿಂದಲೂ ಭಾರತೀಯ ಗ್ರಾಮೀಣ ಪ್ರದೇಶದ ಜನರು ಮೈಗೂಡಿಸಿಕೊಂಡು ಬಂದಿರುವುದು ಮೊಹರಂ ಹಬ್ಬದ ಮತ್ತೊಂದು ವಿಶೇಷ ಇಷ್ಟೆಲ್ಲಾ ಅವಿನಾಭಾವ ಸಂಬಂಧದಿಂದ ಮೊಹರಂ ಆಚರಿಸುವ ಹಿಂದೂ ಮುಸ್ಲಿಂರ ಮಧ್ಯೆ ಹುಳಿ ಹಿಂಡುವ ಕೆಲಸ ಮಾಡಿ ತಮ್ಮ ತಮ್ಮ ವೈಯಕ್ತಿಕ ಲಾಭಕ್ಕೋಸ್ಕರ ಜಾತಿಗಳನ್ನು ಬಳಸಿಕೊಂಡು ಜಾತಿ ಜಾತಿಗಳ ಮಧ್ಯೆ ಜಗಳ ಹಚ್ಚಿ ಮೋಜು ನೋಡುವಂತ ಮನಸ್ಥಿತಿಗಳನ್ನು ದೂರವಿಟ್ಟರೆ ಪ್ರತಿಯೊಂದು ಹಿಂದೂ-ಮುಸ್ಲಿಂ ಹಬ್ಬಗಳನ್ನು ನೆಮ್ಮದಿಯಿಂದ ಆಚರಿಸಬಹುದು ಮನಸ್ಸಿನಲ್ಲಿಲ್ಲದ ಜಾತಿಯನ್ನು ಮನದಲ್ಲಿ ಬೇರೂರುವಂತೆ ಪ್ರೇರೇಪಿಸಿ ಜಾತಿ ಜಾತಿಗಳ ಮಧ್ಯೆ ಸಮಸ್ಯೆಗಳನ್ನು ತಂದಿಟ್ಟು ಆ ಸಮಸ್ಯೆಯನ್ನೇ ತಮ್ಮ ಹಸ್ತವನ್ನಾಗಿ ಮಾಡಿಕೊಂಡು ತಮ್ಮ ಲಾಭಕ್ಕೋಸ್ಕರ ಮಾಡುತ್ತಿರುವ ಹೀನ ಮನಸ್ಥಿತಿಗಳ ಮಧ್ಯೆ ಇವತ್ತು ಜಾತಿ ಜಾತಿ ಎಂದು ಬಡದಾಡುವಂತ ಪರಿಸ್ಥಿತಿ ನಮ್ಮ ಜನರಲ್ಲಿ ಬೇರೂರುತ್ತಿದೆ ಇವೆಲ್ಲದರ ಮಧ್ಯೆಯು ಮೊಹರಂ ಹಬ್ಬವನ್ನು ಕೆಲವೊಂದು ಪ್ರದೇಶದಲ್ಲಿ ಬಿಟ್ಟರೆ ಎಲ್ಲರೂ ಪ್ರತಿ ಗ್ರಾಮಗಳಲ್ಲೂ ಪ್ರತಿವರ್ಷ ಮೊಹರಂ ಹಬ್ಬವನ್ನು ಮುಸ್ಲಿಂರಿಗಿಂತ ಹೆಚ್ಚಾಗಿ ಹಿಂದುಗಳೇ ಆಚರಣೆ ಮಾಡುವ ಹಬ್ಬವಾಗಿದೆ ಮೊಹರಂ ಬಕ್ರೀದ್ ಹಾಗೂ ರಂಜಾನ್ ಹಬ್ಬದ ದಿವಸ ಸ್ವತಃ ನಡೆದಾಡುವದೇವರಂದೇ ಖ್ಯಾತರಾದ ಅಭಿನವ ಕೊಪ್ಪಳದ ಗವಿಸಿದ್ದೇಶ್ವರ ಶ್ರೀಗಳು ಮುಸ್ಲಿಮರ ಮನೆಗೆ ತೆರಳಿ ಹಬ್ಬದ ಶುಭಾಶಯಗಳು ತಿಳಿಸಿ ಮತ್ತು ಉತ್ತರ ಕರ್ನಾಟಕದ ಅನೇಕ ಭಾಗಗಳಲ್ಲಿ ಮಸೀದಿಗಳನ್ನು ಉದ್ಘಾಟನೆ ಮಾಡುವುದರ ಮೂಲಕ ಹಿಂದೂ ಮುಸ್ಲಿಂ ಕ್ರೈಸ್ತ ಬೇರೆ ಬೇರೆ ಅಲ್ಲ ನಾವೆಲ್ಲರೂ ಒಂದೇ ಒಂದು ಗಿಡದ ಕೆಳಗೆ ಬಿಸಿಲು ಹೆಚ್ಚಾದರೆ ನಾವುಗಳು ಹೇಗೆ ಒಂದು ಗಿಡದ ಕೆಳಗೆ ನೆರಳಿನ ಆಶ್ರಯ ಪಡೆಯಲು ಬಂದಾಗ ನೆರಳು ನೀಡಿದ ಗಿಡ ನೀನು ಮುಸ್ಲಿಂ, ಹಿಂದು, ಕ್ರೈಸ್ತ. ನನ್ನ ಹತ್ತಿರ ಬರಬೇಡ ಎಂದು ಹೇಳಿಲ್ಲ ಪ್ರಕೃತಿಯಿಂದ ಬೆಳೆದ ಒಂದು ಗಿಡವೇ ಜಾತಿ ಬೇದ ಬಾವ ಮಾಡಲ್ಲವೆಂದರೆ ನಾವೇಕೆ ಜಾತಿ ಜಾತಿ ಅಂತ ಬಡದಾಡಬೇಕು. ಎನ್ನುವ ಪರಿಜ್ಞಾನ ನಮ್ಮ ಜನಗಳಿಗೆ ಇಲ್ಲದಿರುವುದೇ ಸಾಕಷ್ಟು ಅನೇಕ ಉದಾಹರಣೆಗಳನ್ನು ಜನರಿಗೆ ಮನಮುಟ್ಟುವಂತೆ ಪ್ರೇರೇಪಿಸಿ ಜನರ ಜನರ ಮಧ್ಯ ಇರುವ ಜಾತಿ ಭೇದಭಾವದ ತಾರತಮ್ಯವನ್ನು ಹೋಗಲಾಡಿಸುವಲ್ಲಿ ಸದಾಕಾಲ ಮುಂಚೂಣಿಯಲ್ಲಿ ನಡೆದಾಡುವ ದೇವರು ಅನೇಕ ಮಠದ ಸ್ವಾಮೀಜಿಗಳು ಇದ್ದಾರೆ ಎಂದರೆ ತಪ್ಪಾಗಲಾರದು. ಹೀಗೆ ಅನೇಕ ಸ್ವಾಮೀಜಿಗಳು ಜಾತಿ ಜಾತಿಗಳ ಮಧ್ಯೆ ಇರುವ ತಾರತಮ್ಯಗಳನ್ನು ತಿದ್ದುವಲ್ಲಿ ಸಾಕಷ್ಟು ಪ್ರಯತ್ನದ ಮಧ್ಯೆಯು ಸಮಾಜ ಸುಧಾರಕರಿಂದ ಪ್ರೇರೇಪಣೆಗೊಂಡ ನಾವುಗಳು ಜಾತಿ ಜಾತಿ ಎಂದು ಬಡದಾಡದೆ ಎಲ್ಲರೂ ಒಂದಾಗಿ ಆಚರಿಸುವ ಹಬ್ಬವೇ ಮೊಹರಂ ಹಬ್ಬ.

**ಮೊರಂ ಇತಿಹಾಸ**

ಅರಬ್ ರಾಜ ಅಜಿತ್ ವಿರುದ್ಧ ನಡೆದ ಯುದ್ಧದಲ್ಲಿ ತಮ್ಮ ಪ್ರಾಣ ಬಲಿದಾನ ಮಾಡಿ ಹುತಾತ್ಮರಾದ ಹಸನ್ ಅಲಿ ಹುಸೇನ್ ಅಲಿ ಅವರ ನೆನಪಿಗಾಗಿ ಆಚರಿಸುವ ಹಬ್ಬವೇ ಮೊರಂ ಹಬ್ಬವಾಗಿದೆ

ಮಮ್ಮದ್ ಪೈಗಂಬರರ ಮಗಳು ಬಿಬಿ ಜಾನ ರವರನ್ನು ಅಜರತ್ ಮೌಲಾ ಅಲಿ ಅವರಿಗೆ ಕೊಟ್ಟು ಮದುವೆ ಮಾಡುತ್ತಾರೆ ಹಜರತ್ ಮೌಲಾ ಹಲಿ ಹಾಗೂ ಬಿಬಿ ಜಾನ್ ಉದರದಲ್ಲಿ ಜನಿಸಿದವರೇ ಹಸನ್ ಅಲಿ, ಹುಸೇನ ಅಲಿ,ಮಮ್ಮದ್ ಪೈಗಂಬರರ ಅಳಿಯ ಮೌಲಾ ಅಲಿ ನಾಲ್ಕನೇ ಕಲಿಪನಾಗಿ ರಾಜ್ಯಭಾರ ಮಾಡುತ್ತಿರುತ್ತಾನೆ ಲೋಕ ರೂಢಿಯಂತೆ ಮೌಲಾ ಅಲಿ ನಂತರ ಹುಸೇನ ಅಲಿ ಕಲಿಪನಾಗಬೇಕಿತ್ತು ಆದರೆ ಅಲ್ಲಿಯ ಸರದಾರನಾಗಿದ್ದ ಹೆಜ್ಜೆ ಎಂಬ ದುಷ್ಟ ತನ್ನಿಷ್ಟಕ್ಕೆ ತಾನೇ ಕಲೀಪನೆಂದು ಘೋಷಿಸಿಕೊಳ್ಳುತ್ತಾನೆ ಇಸ್ಲಾಂ ತತ್ವ ಮತ್ತು ಸಿದ್ದಾಂತಗಳನ್ನು ತನಗೆ ಅನುಕೂಲವಾಗುವ ರೀತಿಯಲ್ಲಿ ಬದಲಾಯಿಸಿಕೊಳ್ಳುತ್ತಾನೆ ಇದರಿಂದ ರೋಷಿಗೊಂಡ ಹಸನ್ ಅಲ್ಲಿ ಮತ್ತು ಹುಸೇನ್ ಅಲಿ ತಮ್ಮ ಅಜ್ಜ ಮೊಮ್ಮದ್ ಪೈಗಂಬರಿಗೆ ಇಷ್ಟವಿಲ್ಲದ ತತ್ವ ಸಿದ್ಧಾಂತಗಳನ್ನು ಜಾರಿಗೆ ತರಲು ಹೆಜ್ಜೆ ಪ್ರಯತ್ನಿಸಿದಾಗ ಅಜೀದನನ್ನು ವಿರೋಧಿಸುತ್ತಾರೆ

ಇವರವಿರೋಧವನ್ನು ಸಹಿಸಿಕೊಳ್ಳದ ಅರಬ್ ರಾಜ ಹಸನ್ ಅಲಿ ಯನ್ನ ಆಹಾರದಲ್ಲಿ ವಿಷ ಹಾಕಿ ಸಾಯಿಸಿದರು. ಸಹೋದರನ ಸಾವಿನ ಬಳಿಕವು ಹುಸೇನ್ ಅಲಿ ಯಜೀದನ ಆಡಳಿತ ವಿರೋಧಿಸುತ್ತಾನೆ ಇದರಿಂದ ಕುಪಿತಗೊಂಡ ಈಜಿ ರಾಜ್ಯ ಹಸನ್ ಅಲಿ ಅವರನ್ನು ಸಂವಿಧಾನಕ್ಕೆ ಕರೆದು ಮಾತನಾಡಿದಾಗ ಅಜೀದನ ಇಸ್ಲಾಂ ತತ್ವಗಳನ್ನು ಹುಸೇನ,ಅಲಿ ನಿರಾಕರಿಸುತ್ತಾನೆ

ಎಜೀದ ಮತ್ತು ಹುಸೇನ್ ಅಲಿ ಅವರ ವೈ ಮನಸು ತಾರಕ್ಕೇರಿದಾಗ ಅಜೀದನು ಹೇಗಾದರೂ ಮಾಡಿ ಹಸನ್ ಅಲಿ ಅವರನ್ನು ಕೊಲ್ಲಬೇಕೆಂದು ಸಂಚು ಮಾಡಿದ ಕಾರಣ ತನ್ನ 72 ಅನುಯಾಯಿಗಳೊಂದಿಗೆ ಹುಸೇನ್ ಅಲಿ ಎಜೀದ ಉಪಟಳದಿಂದ ಬೇಸತ್ತು ಅಕ್ಕ ಮದನ ಕಡೆಗೆ ಸಾಗಬೇಕೆಂದು ತೆರಳುತ್ತಾನೆ ಆದರೆ ಮೆಕ್ಕಾ ಎನ್ನುವುದು ಮುಸ್ಲಿಮರ ಪವಿತ್ರ ಕ್ಷೇತ್ರ ಅಲ್ಲಿ ಕೂಡ ಎಜೀದನು ಬಂದು ಕೊಲ್ಲುತ್ತಾನೆ ಹಾಗಾಗಿ ನಾನು ಆ ಪ್ರದೇಶಕ್ಕೆ ಹೋಗುವುದು ಬೇಡ ಎಂದು ಮಾರ್ಗ ಮಧ್ಯದಲ್ಲಿ ನಿರ್ಧಾರ ಬದಲಿಸಿ ಕರ್ಬಲ್ ಕಡೆ ಹೋಗಿ ನದಿಯ ದಂಡಿಯ ಮೇಲೆ ತನ್ನ 72 ಅನುಯಾಯಿಗಳೊಂದಿಗೆ ವಾಸವಿರುತ್ತಾನೆ ಹುಸೇನ್ ಅಲಿ ಅವರ ಇದ್ದಲ್ಲಿಗೆ ತೆರಳಿದ ಹೇಜಿದನ ಅನುಯಾಯಿಗಳು ಆರು ತಿಂಗಳವರೆಗೆ ಹುಸೇನ್ ಅಲಿ ಅವರಿಗೆ ಮತ್ತು ಅವರ ಸಹೋದರಿ ಸಹೋದರರಿಗೆ ಹಾಗೂ 72 ಅನುಯಾಯಿಗಳಿಗೆ ಆರು ತಿಂಗಳಗಳ ಕಾಲ ಒಂದು ಹನಿ ನೀರು ಕೂಡ ಸಿಗದಂತೆ ಮಾಡುತ್ತಾರೆ ಇಷ್ಟೆಲ್ಲ ಮಾಡಿದರು ಹುಸೇನ್ ಅಲಿಯವರು ಜನರ ಸೇವೆ ಮಾಡಬೇಕು ಜನರಿಗಾಗಿ ನಾನು ಏನೆಲ್ಲವನ್ನು ಮಾಡಬೇಕು ಆ ಸೇವೆ ನಾನು ಮುಂದುವರಿಸಿದ್ದೇನೆ ಎಂದು ತಮ್ಮ ಕಾಯಕದಲ್ಲಿ ನಿರತರಾಗಿರುತ್ತಾರೆ. ಆದರೆ ಒಂದು ದಿವಸ ನಮಾಜ್ ಮಾಡುವ ಸಮಯದಲ್ಲಿ ಎಜೀತನ ಅನುಯಾಯಿಗಳು ಬಂದು ಹುಸೇನ್ ಅಲಿ ಅವರ ರುಂಡವನ್ನು ಕತ್ತರಿಸಿ ಹಾಕುತ್ತಾರೆ ಹೀಗಾಗಿ ಹಸನ್ ಅಲಿ ಮತ್ತು ಹುಸೇನ್ ಅಲ್ಲಿ ಅವರ ನೆನಪಿನಗೋಸ್ಕರ 10 ದಿನಗಳ ಕಾಲ ಮೊರಂ ಹಬ್ಬವನ್ನು ನಮ್ಮ ಭಾರತ ದೇಶದಲ್ಲಿ ಅದರಲ್ಲೂ ದಕ್ಷಿಣ ಭಾರತದಲ್ಲಿ ವಿಶೇಷವಾಗಿ ಮೊಹರಂ ಹಬ್ಬ ಆಚರಿಸುತ್ತಾರೆ ಹೀಗಾಗಿ ಮೊಹರಂ ಹಬ್ಬವನ್ನು ಮುಸ್ಲಿಮರು ವರ್ಷದ ಮೊದಲನೇ ತಿಂಗಳ ಹಾಗೂ ಪವಿತ್ರ ತಿಂಗಳ ವಾಗಿದ್ದರಿಂದ ಹಸನ್ ಅಲಿ ಮತ್ತು ಹುಶನ್ ಅಲಿಯವರಿಗೆ ಸೋಕ ಮತ್ತು ಕಣ್ಣೀರು ಹಾಕುವುದರ ಮೂಲಕ ಮೊಹರಂ ಹಬ್ಬ ಆಚರಿಸುತ್ತಾರೆ ಈ ಹತ್ತು ದಿನಗಳ ಕಾಲ ನಡೆಯುವ ಹಬ್ಬವನ್ನು ಸುನ್ನಿ ಸಿಯಾ ಶಾಂತಿ ದುರ್ಬಲ ಹಬ್ಬ ಪಶ್ಚಾತಾಪದ ಹಬ್ಬ ಎಂದು ಕರೆಯುತ್ತಾರೆ..



**ಜಗದೀಶ,ಎಸ್.ಗಿರಡ್ಡಿ**
**ಲೇಖಕರು. ಗೊರಬಾಳ.**
**ಮೊ. 9902470856**

# ದಕ್ಷ ಅಧಿಕಾರಿಗಳಿಗೆ ಕೆಲಸ ಮಾಡಲು ಬಿಡಿ-ರಂಗಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಗುರುಮಿಠಕಲ್, ಜೂ. 03, ದಕ್ಷ ಅಧಿಕಾರಿಗಳಿಗೆ 6 ತಿಂಗಳಲ್ಲಿಯೇ ವರ್ಗಾವಣೆ ಮಾಡುತ್ತಿರುವುದು ಕೈಬಿಡಿ ಇಲ್ಲದಿದ್ದರೆ ಉಗ್ರ ಹೋರಾಟ ಮಾಡಲಾಗುವುದು ಏಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಎಚ್ಚರಿಕೆ

ಯಾದಗಿರಿ ಜಿಲ್ಲೆಯ ಎಸ್. ಪಿ. ಶಂಕರ್ ಸರ್ ಅವರು ದಕ್ಷ ಅಧಿಕಾರಿಯಾಗಿದ್ದು ಉತ್ತಮ ರೀತಿಯಲ್ಲಿ ಕೆಲಸ ಮಾಡುತಿದ್ದು ಅವರನ್ನು ಆದಷ್ಟು ಬೇಗನೆ ಎತ್ತಂಗಡಿ ಮಾಡಲು ತಯ್ಯಾರಿ ಬರದಿಂದ ಸಾಗುತ್ತಿದೆ ಎನ್ನುವುದು ಕಾಣುತ್ತಿದೆ ಆದಕಾರಣ ಅವರಿಗೆ ವರ್ಗಾವಣೆ ಮಾಡುವ ಹುನ್ನಾರಕ್ಕೆ, ದಲಿತ ಸಂಘರ್ಷ ಸಮಿತಿ ಸಂಘಟನೆ ತೀವ್ರ ವಿರೋಧ ವ್ಯಕ್ತಪಡಿಸಿದೆ. ಈ ಕುರಿತು ಹೇಳಿಕೆ ನೀಡಿರುವ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಸಂಘಟನೆಯ ಗುರುಮಠಕಲ್ ತಾಲೂಕು ಸಂಚಾಲಕರು ರಂಗಸ್ವಾಮಿ ಕೊಂಕಲ್.. ದಕ್ಷ ಹಾಗೂ ಪ್ರಾಮಾಣಿಕತೆಯಿಂದ ಕೆಲಸ ಮಾಡುತ್ತಿರುವ ಅಧಿಕಾರಿಗಳನ್ನು ಹೀಗೆ ಅಂಧಾ ದರ್ಬಾರ್ ನಡೆಸುವ ಮೂಲಕ ವರ್ಗಾವಣೆ ಮಾಡಿರುವುದು ಅತ್ಯಂತ ನಾಚಿಕೇಗೇಡು ಸಂಗತಿಯಾಗಿದೆ. ಅತ್ಯಂತ ಹಿಂದುಳಿದ ಜಿಲ್ಲೆಗೆ ಆಗೊಮ್ಮೆ ಈಗೊಮ್ಮೆ ಪ್ರಮಾಣಿಕ ದಕ್ಷ ಅಧಿಕಾರಿಗಳು ಬರುತ್ತಿದ್ದು, ಅವರನ್ನೂ ಸಹ ಹೀಗೆ ದಿಢೀರ್ ವರ್ಗಾವಣೆ ಮಾಡಿದರೆ ಜಿಲ್ಲೆಯ ಅಭಿವೃದ್ಧಿ ಆಗುವುದಾದರೂ ಯಾವಾಗ? ಎಂದು ಅವರು ಖಾರವಾಗಿ ಪ್ರಶ್ನಿಸಿದ್ದಾರೆ. ಸರ್ಕಾರ ಹಾಗೂ ಜಿಲ್ಲೆಯ ಜನಪ್ರತಿನಿಧಿಗಳು ದಕ್ಷ ಅಧಿಕಾರಿಗಳನ್ನು ವರ್ಗಾವಣೆ ಮಾಡಿಸಿದರೆ ನಮ್ಮ ಸಂಘಟನೆಯ ವತಿಯಿಂದ ಉಗ್ರ ಹೋರಾಟ ರೂಪಿಸಬೇಕಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ. ಇದಲ್ಲದೇ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೂ ಸಹ ದಕ್ಷತೆಯಿಂದ ಕೆಲಸ ಮಾಡುತ್ತಿದ್ದಾರೆ. ಎಸ್.ಪಿ. ಅವರು ಈಗಾಗಲೇ ಜಿಲ್ಲಾ ಕೇಂದ್ರದಲ್ಲಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸುವ ಮಹತ್ವದ ಕೆಲಸ ಮಾಡುತ್ತಿದ್ದಾರೆ. ಅಲ್ಲದೇ ಅಕ್ರಮ ಮರಳು ಧಂದೆ, ಇಸ್ಪಿಟ್, ಜೂಜಾಟ ಸೇರಿದಂತೆ ಇನ್ನಿತರ ಮನೆಹಾಳು ಕೆಲಸ ಮಾಡುವವರನ್ನು ಮಟ್ಟ ಹಾಕುತ್ತಿದಾರೆ.

ಹೀಗೆ ದಕ್ಷತೆಯಿಂದ ಜಿಲ್ಲೆಯ ಜನತೆಯ ಪರವಾಗಿ ಕೆಲಸ ಮಾಡುತ್ತಿರುವ ದಕ್ಷತೆಯಿಂದ ಕೆಲಸ ಮಾಡುವವರಿಗೆ ವರ್ಗಾವಣೆ ಮಾಡುವ ಕೆಲಸ ಕೈಬಿಡಬೇಕು. ಎಸ್.ಪಿ. ಅವರಿಗೂ ಸಹ ವರ್ಗಾವಣೆ ಮಾಡುವ ದಟ್ಟ ವದಂತಿ ಹರಡಿದ್ದು, ಎಸ್.ಪಿ. ಅವರ ವರ್ಗಾವಣೆ ಮಾಡಿದಲ್ಲಿ ಜನಪರ ಸಂಘಟನೆಗಳೊಂದಿಗೆ ಹೋರಾಟ ರೂಪಿಸಲಾಗುವುದು ಎಂದು ಎಚ್ಚರಿಕೆನೀಡಿದ್ದಾರೆ.

ರಂಗಸ್ವಾಮಿ ದಾಸರಿ ಕೊಂಕಲ್ದ, ದಲಿತ ಸಂಘರ್ಷ ಸಮಿತಿ ಗುರುಮಿಠಕಲ್ ತಾಲೂಕು ಸಂಚಾಲಕರು ಮಾಧ್ಯಮಕ್ಕೆ ತಿಳಿಸಿದ್ದಾರೆ.

ದಕ್ಷ ಅಧಿಕಾರಿಗಳಿಗೆ 6 ತಿಂಗಳಲ್ಲಿಯೇ ವರ್ಗಾವಣೆ ಮಾಡುತ್ತಿರುವುದು

# ಕೈಬಿಡಿ ಇಲ್ಲದಿದ್ದರೆ ಉಗ್ರ ಹೋರಾಟ: ನ್ಯಾಯ ಕ್ರಾಂತಿ ಸಂಘ ಎಚ್ಚರಿಕೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಜಿಲ್ಲೆಗೆ ಬಂದು ದಕ್ಷತೆಯಿಂದ ಕೆಲಸ ಮಾಡುತ್ತಿದ್ದ ಉಪ ಅರಣ್ಯ ಅರಣ್ಯ ಸಂರಕ್ಷಣಾಧಿಕಾರಿ ಪ್ರಭಾಕರ ಪ್ರಿಯದರ್ಶಿ ಇವರನ್ನು ಆರು ತಿಂಗಳಾಗುವ ಮುನ್ನವೇ ವರ್ಗಾವಣೆ ಮಾಡಿರುವ ಸರ್ಕಾರದ ಕ್ರಮಕ್ಕೆ ಕರ್ನಾಟಕ ನ್ಯಾಯ ಕ್ರಾಂತಿ ಸಂಘಟನೆ ತೀವ್ರ ವಿರೋಧ ವ್ಯಕ್ತಪಡಿಸಿದೆ.

ಈ ಕುರಿತು ಹೇಳಿಕೆ ನೀಡಿರುವ ನ್ಯಾಯ ಕ್ರಾಂತಿ ಸಂಘಟನೆಯ ಕಲ್ಯಾಣ ಕರ್ನಾಟಕ ವಿಭಾಗೀಯ ಅಧ್ಯಕ್ಷ ಬಿ.ಕೆ. ನಾಶಿ, ದಕ್ಷ ಹಾಗೂ ಪ್ರಾಮಾಣಿಕತೆಯಿಂದ ಕೆಲಸ ಮಾಡುತ್ತಿರುವ ಅಧಿಕಾರಿಗಳನ್ನು ಹೀಗೆ ಅಂಧಾ ದರ್ಬಾರ್ ನಡೆಸುವ ಮೂಲಕ ವರ್ಗಾವಣೆ ಮಾಡಿರುವುದು ಅತ್ಯಂತ ನಾಚಿ-ಕೆಗೇಡು ಸಂಗತಿಯಾಗಿದೆ.

ಅತ್ಯಂತ ಹಿಂದುಳಿದ ಜಿಲ್ಲೆಗೆ ಆಗೊಮ್ಮೆ ಈಗೊಮ್ಮೆ ಪ್ರಮಾಣಿಕ ದಕ್ಷ ಅಧಿಕಾರಿಗಳು ಬರುತ್ತಿದ್ದು, ಅವರನ್ನೂ ಸಹ ಹೀಗೆ ದಿಢೀರ್ ವರ್ಗಾವಣೆ ಮಾಡಿದರೆ ಜಿಲ್ಲೆಯ ಅಭಿವೃದ್ಧಿ ಆಗುವುದಾದರೂ ಯಾವಾಗ? ಎಂದು ಅವರು ಖಾರವಾಗಿ ಪ್ರಶ್ನಿಸಿದ್ದಾರೆ.

ಸರ್ಕಾರ ಹಾಗೂ ಜಿಲ್ಲೆಯ ಜನಪ್ರತಿನಿಧಿಗಳು ದಕ್ಷ ಅಧಿಕಾರಿಗಳನ್ನು ವರ್ಗಾವಣೆ ಮಾಡಿಸಿದರೆ ನಮ್ಮ ಸಂಘಟನೆಯ ವತಿಯಿಂದ ಉಗ್ರ ಹೋರಾಟ ರೂಪಿಸಬೇಕಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

ಇದಲ್ಲದೇ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೂ ಸಹ ದಕ್ಷತೆಯಿಂದ ಕೆಲಸ ಮಾಡುತ್ತಿದ್ದಾರೆ. ಎಸ್.ಪಿ. ಅವರು ಈಗಾಗಲೇ ಜಿಲ್ಲಾ ಕೇಂದ್ರದಲ್ಲಿ ಸಿಸಿ ಕೆಮೆರಾಗಳನ್ನು ಅಳವಡಿಸುವ ಮಹತ್ವದ ಕೆಲಸ ಮಾಡುತ್ತಿದ್ದಾರೆ. ಅಲ್ಲದೇ ಅಕ್ರಮ ಮರಳು ಧಂದೆ, ಇಸ್ಪಿಟ್, ಜೂಜಾಟ ಸೇರಿದಂತೆ ಇನ್ನಿತರ ಮನೆಹಾಳು ಕೆಲಸ ಮಾಡುವವರನ್ನು ಮಟ್ಟ ಹಾಕುತ್ತಿದಾರೆ.

ಹೀಗೆ ದಕ್ಷತೆಯಿಂದ ಜಿಲ್ಲೆಯ ಜನತೆಯ ಪರವಾಗಿ ಕೆಲಸ ಮಾಡುತ್ತಿರುವ ದಕ್ಷತೆಯಿಂದ ಕೆಲಸ ಮಾಡುವವರಿಗೆ ವರ್ಗಾವಣೆ ಮಾಡುವ ಕೆಲಸ ಕೈಬಿಡಬೇಕು

ಎಸ್.ಪಿ. ಅವರಿಗೂ ಸಹ ವರ್ಗಾವಣೆ ಮಾಡುವ ದಟ್ಟ ವದಂತಿ ಹರಡಿದ್ದು, ಎಸ್.ಪಿ. ಅವರ ವರ್ಗಾವಣೆ ಮಾಡಿದಲ್ಲಿ ಜನಪರ ಸಂಘಟನೆಗಳೊಂದಿಗೆ ಹೋರಾಟ ರೂಪಿಸಲಾಗುವುದು ಎಂದು ಎಚ್ಚರಿಕೆನೀಡಿದ್ದಾರೆ.

# ಮಾಧವಾರ ಗ್ರಾಮದಲ್ಲಿ ಅಲಾಯಿ ಕುಣಿಯುವುದನ್ನು ನಿಷೇಧ ಆದೇಶ

ಯಾದಗಿರಿ : ಜುಲೈ 03- ಸೈದಾಪೂರ ಠಾಣಾ ವ್ಯಾಪ್ತಿಯ ಮಾಧವಾರ ಗ್ರಾಮದಲ್ಲಿ ಮೊಹರಂ ಹಬ್ಬದ ಸಮಯದಲ್ಲಿ ಅಲಾಯಿ ಕುಣಿಯುವುದನ್ನು ನಿಷೇಧ ಆದೇಶವನ್ನು ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಹೊರಡಿಸಿದ್ದಾರೆ.

# ನಿಷ್ಠಾವಂತ ಅಧಿಕಾರಿಗಳು ವರ್ಗಾವಣೆ ಮಾಡುತ್ತಿರುವುದು ಖಂಡನೀಯ ಮಾನಪ್ಪ ಹಡಪದ್.




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಜಿಲ್ಲಾ ಪೊಲೀಸ್ ಅಧೀಕ್ಷಕರಾಗಿ ಶ್ರೀ ಪೃಥ್ವಿಶಂಕರ ರವರು ಇತ್ತೀಚಿಗೆ ಅಧಿಕಾರ ವಹಿಸಿಕೊಂಡ ನಂತರ ಜಿಲ್ಲೆಯಲ್ಲಿ ನಡೆಯುತ್ತಿರುವ ಅಕ್ರಮ ಮರಳು, ಜೂಜು, ಮಟಕಾ, ಇಸ್ಪೀಟ್, ಕೋಳಿ ಪಂದ್ಯ, ಐಪಿಎಲ್ ಬೆಟ್ಟಿಂಗ್ ಇನ್ನೀತರ ಅಹಿತಕರ ಘಟನೆಗಳನ್ನು ಸಂಭವಿಸಿದ್ದಲ್ಲಿ, ತಕ್ಷಣ ತ್ವರಿತ ನಿರ್ಧಾರ ಕೈ-ಕೊಂಡು, ಇವೆಲ್ಲವುಗಳನ್ನು ಮಟ್ಟ ಹಾಕಿದ್ದಾರೆ. ಇದರಿಂದ ಅವರು ನೇರವಾಗಿ ಭ್ರಷ್ಟರಿಗೆ, ರಾಜಕೀಯ ಹಿಂಬಾಲಕರಿಗೆ, ಅನೈತಿಕ ಚಟುವಟಿಕೆ ಮಾಡುವವರಿಗೆ ಸಿಂಹಸ್ವಪ್ನವಾಗಿ ಇವರೆಲ್ಲರ ಕೆಂಗಣ್ಣಿಗೆ ಗುರಿಯಾಗಿದ್ದಾರೆ. ಇದರಿಂದ ರೋಸಿ ಹೋಗಿ, ರಾಜಕೀಯ ವ್ಯಕ್ತಿಗಳು ಸರ್ಕಾರದ ಮೇಲೆ ಪ್ರಭಾವ ಭೀರಿ ಇವರ ವರ್ಗಾವಣೆ ಮಾಡಿಸುತ್ತಿದ್ದಾರೆ ಎಂಬ ಬಗ್ಗೆ ಪತ್ರಿಕಾ ವರದಿಗಳಿಂದ ತಿಳಿದುಬರುತ್ತಿದೆ.


ಆದ್ದರಿಂದ, ದಕ್ಷ ಅಧಿಕಾರಿಗಳನ್ನು ಅವಧಿಪೂರ್ವ ವರ್ಗಾವಣೆ ಮಾಡುವುದನ್ನು ತಡೆಗಟ್ಟಬೇಕೆಂದು

ಯಾದಗಿರಿ ಜಿಲ್ಲೆಯಲ್ಲಿ ರಾಜಕೀಯ ಹಿಂಬಾಲಕರ ಮೂಲ ಉದ್ಯೋಗ: ಅಕ್ರಮ ಮರಳು ಸಾಗಾಣಿಕೆ, ಜೂಜು, ಮಟ್ಕಾ, ಕೋಳಿ ಪಂದ್ಯ, ವೇಶ್ಯವಾಟಿಕೆ, ಮರಮ್ ಸಾಗಾಣಿಕೆ, ಸರ್ಕಾರದ ಆಸ್ತಿಯನ್ನು ಒತ್ತುವರಿ ಮಾಡುವುದು ರಾಜಕೀಯ ಮುಖಂಡರುಗಳ ಅಭ್ಯಾಸವಾಗಿದ್ದು. ಇಂತಹದನ್ನು ತಡೆಗಟ್ಟುವಂತಹ ಅಧಿಕಾರಿಗಳ ವರ್ಗಾವಣೆ ಮಾಡುತ್ತಿರುವ ರಾಜಕೀಯ ಮುಖಂಡರ ವಿರುದ್ಧ ಖಂಡಿಸುತ್ತೇವೆ ಮಾನಪ್ಪ ಹಡಪದ ಖಂಡಿಸಿದ್ದಾರೆ.

ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು ರವರೆಗೆ

ಮಾನ್ಯ ತಹಸೀಲ್ದಾರರು ಹಾಗೂ ತಾಲೂಕು ದಂಡಾಧಿಕಾರಿಗಳು ಮನವಿ ಸಲ್ಲಿಸಲಾಯಿತು.

# ಬಿಸಿಯೂಟದ ಆಹಾರ ಸಾಮಾಗ್ರಿಗಳು ಹಾಗೂ ಮೊಟ್ಟೆ ಕಳ್ಳತನ ಸೂಕ್ತ ಕ್ರಮಕ್ಕೆ ಕರವೇ ಸ್ವಾಭಿಮಾನಿ ಸೇನೆ ಒತ್ತಾಯ.



ಮಲ್ಲಮ್ಮ ನುಡಿ ವಾರ್ತೆ

ದೇವರಭೂಪೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬಿಸಿಯೂಟದ ಆಹಾರ ಸಾಮಾಗ್ರಿಗಳು ಹಾಗೂ ಮೊಟ್ಟೆ ಕಳ್ಳತನ ಮಾಡುವ ಮುಖ್ಯ ಅಡುಗೆದಾರರು ಹಾಗೂ ಸಹಾಯಕರ ವಿರುದ್ಧ ಕ್ರಮ ಕೈಗೊಳ್ಳಲು ದೇವರಭೂಪೂರು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನ ಸೇನೆ ಯಿಂದ ಮನವಿ ಸಲ್ಲಿಸಿದರು.

ಲಿಂಗಸುಗೂರು ತಾಲೂಕಿನ ದೇವರಭೂಪೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 262 ವಿದ್ಯಾರ್ಥಿಗಳಿದ್ದಾರೆ. ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಆಹಾರ ಸಾಮಾಗ್ರಿಗಳ ವಿತರಣೆ ಮಾಡಿದರೂ ಸಹ ಕೆಲವು ವಿದ್ಯಾರ್ಥಿಗಳಿಗೆ ಊಟ ಸಿಗುವುದಿಲ್ಲ. ಈ ಬಗ್ಗೆ ವಿಚಾರಿಸಿದರೆ ಅವರ ಮೇಲೆ ಇವರು ಇವರ ಮೇಲೆ ಅವರು ಗೂಬೆ ಕುರಿಸುವ ಕೆಲಸ ಮಾಡುತ್ತಿದ್ದಾರೆ.

ಅಡುಗೆದಾರರಿಗೆ ಅಡುಗೆ ಮಾಡಲು ಸಾಮಾಗ್ರಿಗಳನ್ನು ಕೊಟ್ಟಾಗ ಅಡುಗೆದಾರರು ಅದರಲ್ಲಿ ಅರ್ಧ ಭಾಗದಷ್ಟು ತೆಗೆದುಕೊಂಡು ಕಡಿಮೆ ಅಡುಗೆ ಮಾಡುತ್ತಿದ್ದಾರೆ. ಇದರಿಂದ ಮಕ್ಕಳಿಗೆ ಸರಿಯಾದ ಆಹಾರ ಸಿಗುತ್ತಿಲ್ಲ. ಸರ್ಕಾರ ಕೋಟಿ ಕೋಟಿ ಅನುದಾನ ಖರ್ಚು ಮಾಡಿ ಬಡ ಮಕ್ಕಳು ವಿದ್ಯಾಭ್ಯಾಸದಿಂದ ವಂಚಿತರಾಗಬಾರದು ಉದ್ದೇಶದಿಂದ ಬಿಸಿಯೂಟವನ್ನು ಪ್ರಾರಂಭಿಸಲಾಗಿದೆ. ಆದರೆ ಅಡುಗೆದಾರರು ಅಡುಗೆ ಸಾಮಾಗ್ರಿಗಳನ್ನು ಕದ್ದುಕೊಂಡು ಹೋಗುತ್ತಿರುವುದು ಮುಖ್ಯ ಶಿಕ್ಷಕರಿಗೂ ತಿಳಿದಿದೆ. ಆದರೆ ಅವರು ತಮ್ಮ ಅಸಹಾಯಕತೆಯನ್ನು ತೋರಿಸುತ್ತಿದ್ದಾರೆ. ಇದರಿಂದಾಗಿ ಪ್ರತಿ ದಿನ ಮಕ್ಕಳು ಆಹಾರ ಮತ್ತು ಮೊಟ್ಟೆ ಸಿಗುತ್ತಿಲ್ಲ. ಒಂದು ಮೊಟ್ಟೆಯಲ್ಲಿ ಮೂರು ಭಾಗ ಮಾಡಿ ಮಕ್ಕಳಿಗೆ ವಿತರಣೆ ಮಾಡುತ್ತಿದ್ದಾರೆ. ಮಕ್ಕಳು ಅರ್ಧ ಹೊಟ್ಟೆಯಲ್ಲಿ ಅಭ್ಯಾಸ ಮಾಡುವಂತಹ ನಿರ್ಮಾಣವಾಗಿದೆ.

ಮಕ್ಕಳ ಆಹಾರಕ್ಕೆ ಕನ್ನ ಹಾಕುವ ಮುಖ್ಯ ಅಡುಗೆದಾರರು ಹಾಗೂ ಸಹಾಯಕಿಯರನ್ನು ಕೂಡಲೇ ಕೆಲಸದಿಂದ ತೆಗೆದು ಹಾಕಿ ಬೇರೆ ಅಡುಗೆದಾರರನ್ನು ನೇಮಿಸಬೇಕು ಇಲ್ಲದಿದ್ದರೆ ತಮ್ಮ ಕಾರ್ಯಾಲಯದ ಮುಂದೆ ಧರಣಿ ಮಾಡಲಾಗುವುದೆಂದು ಎಚ್ಚರಿಸುತ್ತಿದ್ದೇವೆ. ಎಂದು ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನ ಸೇನೆ ಗ್ರಾಮ ಘಟಕ ದೇವರಭೂಪುರ ಅದ್ಯಕ್ಷ ರಾದ ಬಸನಗೌಡ ಉಪಾಧ್ಯಕ್ಷರಾದ ತಿಮ್ಮನಗೌಡ ಪೊಲೀಸ ಪಾಟೀಲ್ ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಅಂಧ ಮಕ್ಕಳೊಂದಿಗೆ ಹುಟ್ಟುಹಬ್ಬದ ಸಂತಸ ಹಂಚಿಕೊಂಡು ಅಂಧಮಕ್ಕಳ ಮುಖದಲ್ಲಿ ಆನಂದ ಕಂಡ ರಸೀದ್ ಮುತ್ತ್ಯಾ



ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ: ಪಟ್ಟಣದ ಅಂಧ ಮಕ್ಕಳ ಶಾಲೆಯಲ್ಲಿ ಭಕ್ತರೊಟ್ಟಿಗೆ ತಮ್ಮ 24 ನೇ ಹುಟ್ಟುಹಬ್ಬ ಆಚರಿಸಿಕೊಂಡ ನಾರಾಯಣಪುರದ ರಸೀದ್ ಮುತ್ತ್ಯಾ. ನಂತರ ಮಾತನಾಡಿದ ರಸೀದ್ ಮುತ್ತ್ಯಾ ದಿನನಿತ್ಯದ ಜೀವನದಲ್ಲಿ ನಾವು ಕಷ್ಟ ಸುಖಗಳನ್ನು ಭೋಗಿಸುತ್ತೆವೆ. ಆದರೆ ನಾವು ಹುಟ್ಟಿದ ದಿನದಂದು ಉತ್ತಮ ಕೆಲಸಕ್ಕೆ ನಾಂದಿಯಾಗಲೂ ಇಂದು ನನ್ನ ಹುಟ್ಟುಹಬ್ಬವನ್ನು ಭಕ್ತರ ಬಳಗ ಅಂಧ ಮಕ್ಕಳೊಂದಿಗೆ ಆಚರಿಸಿಕೊಳ್ಳಲು ಪ್ರೇರಣೆ ನೀಡಿದ್ದು ಬಹಳಷ್ಟು ಖುಷಿ ತಂದಿದೆ. ಆಡಂಬರದ ಹುಟ್ಟುಹಬ್ಬದ ಕ್ಷಣಿಕ ಸಂತೋಷಕ್ಕಾಗಿ ಲಕ್ಷಾಂತರ ರೂಪಾಯಿ ಖರ್ಚು ಮಾಡುವುದಕ್ಕಿಂತ ಬಡತನದಲ್ಲಿ ತಮ್ಮ ಸುಖ ಜೀವನ ಸಾಗಿಸುವ ಜನರೊಟ್ಟಿಗೆ ಆಚರಿಸಿಕೊಳ್ಳುವುದು ಬಹಳ ಸಂತೋಷ ನೀಡುತ್ತದೆ. ಪ್ರಪಂಚ ಕಾಣದ ಮಕ್ಕಳೊಟ್ಟಿಗೆ ಸಿಹಿ ತಿನಿಸಿ ಹುಟ್ಟು ಹಬ್ಬ ಆಚರಿಸಿಕೊಂಡಿದ್ದು ಬಹಳ ಸಂತಸ ನೀಡಿದೆ. ನನ್ನ ನಂಬಿದ ಭಕ್ತರೆಲ್ಲರೂ ತಮ್ಮ ಖುಷಿಯ ಕ್ಷಣಗಳನ್ನು ಹಿಂತಹ ಮಕ್ಕಳೊಟ್ಟಿಗೆ ಮಾಡಿಕೊಳ್ಳಬೇಕು ಎಂದರು. ಇದೆ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಕಾರ್ಯದರ್ಶಿ ದುಂಡು ಜಮಾದಾರ, ಯುಥ ಕಾಂಗ್ರೆಸ್ ಅಧ್ಯಕ್ಷ ಪ್ರವೀಣ ಕಲ್ಲೂರ, ಕುರುಬ ಸಮಾಜದ ತಾಲೂಕು ಅಧ್ಯಕ್ಷ ಭಿರಣ್ಣ ಪೂಜಾರಿ, ಚಿದಾನಂದ ಮಠ, ಚಿದು ಮುತ್ತ್ಯಾ, ಪುಟ್ಟು ಹೂಗಾರ, ಅಮರಸಿಂಗ, ಪ್ರಮೋದ ಭೋವಿ, ಜಗದೀಶ ತಳವಾರ, ಅಂಧ ಮಕ್ಕಳ ಶಾಲಾ ಶಿಕ್ಷಕರಾದ ಕೇಶವರಾವ ಕುಲಕರ್ಣಿ (ಮೇಲ್ವಿಚಾರಕರು) ಶೈಲಾಬಾಯಿ ಎಂ. ಹೇರೂರ ಮುಖ್ಯ ಗುರುಗಳು, ಬನಶಂಕರಿ ಉದಯಕುಮಾರ ದೇಶಪಾಂಡೆ (ವಾರ್ಡನ್), ಪದ್ಮಾ ಪಾಟೀಲ (ಬ್ರೈಲ್ ಶಿಕ್ಷಕರು) ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಕಾರ್ಮಿಕ ಇಲಾಖೆ: ಜು.05 ರಂದು ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತು ಅರಿವು ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.03–ಕಾರ್ಮಿಕ ಇಲಾಖೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಸಾರಿಗೆ ಇಲಾಖೆ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್ ಇವರ ಸಂಯುಕ್ತಾಶ್ರಯದಲ್ಲಿ ಜು.05 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಸ್ಟೇಡಿಯಂ ರಸ್ತೆಯ ವಾಲ್ಮೀಕಿ ಭವನದಲ್ಲಿ ಬಳ್ಳಾರಿ ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ವಿವಿಧ ಯೋಜನೆಗಳ ಕುರಿತು ಅರಿವು ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಕಾರ್ಮಿಕ ಸಚಿವರು, ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್.ಲಾಡ್ ಅವರು ಉದ್ಘಾಟಿಸುವರು.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಘನ ಉಪಸ್ಥಿತರಿರುವರು.

ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್.ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ರಾಜ್ಯಸಭೆ ಸಂಸದ ಡಾ.ಸೈಯದ್ ನಾಸೀರ್ ಹುಸೇನ್, ವಿಧಾನಪರಿಷತ್ ಶಾಸಕ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ನಾರಾ ಭರತ್ ರೆಡ್ಡಿ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ನಮೋಶಿ,ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ,ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಕಾರ್ಮಿಕ ಇಲಾಖೆಯ ಕಾರ್ಯದರ್ಶಿ ರೋಹಿಣಿ ಸಿಂಧೂರಿ ದಾಸರಿ, ಸಾರಿಗೆ ಇಲಾಖೆಯ ಕಾರ್ಯದರ್ಶಿ ಎನ್.ವಿ.ಪ್ರಸಾದ್, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯದರ್ಶಿ ಭಾರತಿ.ಡಿ., ಸಾರಿಗೆ ಇಲಾಖೆಯ ಸಾರಿಗೆ ಮತ್ತು ಸುರಕ್ಷತೆಯ ಆಯುಕ್ತ ಯೋಗೀಶ್ ಎ.ಎಂ., ಕಾರ್ಮಿಕ ಆಯುಕ್ತರು ಹಾಗೂ ರಾಜ್ಯ ವಿಮಾ ಯೋಜನಾ ವೈದ್ಯಕೀಯ ಸೇವೆಗಳ ಆಯುಕ್ತ ಡಾ.ಎಚ್.ಎನ್.ಗೋಪಾಲಕೃಷ್ಣ,ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ.,ಜಂಟಿ ಕಾರ್ಮಿಕ ಆಯುಕ್ತರು ಹಾಗೂವ ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಜಂಟಿ ಕಾರ್ಯದರ್ಶಿ ಡಾ.ಎಸ್.ಬಿ ರವಿಕುಮಾರ್ ಸೇರಿದಂತೆ ಇತರರು ವಿಶೇಷ ಆಹ್ವಾನಿತರಾಗಿ ಭಾಗವಹಿಸುವರು.

ಕಲಬುರ್ಗಿಯ ಕಲಬುರ್ಗಿ ಪ್ರಾದೇಶಿಕ ಉಪ ಕಾರ್ಮಿಕ ಆಯುಕ್ತ ಡಾ.ವೆಂಕಟೇಶ್ ಶಿಂದಿಹಟ್ಟಿ,ದಾವಣಗೆರೆಯ ಬಳ್ಳಾರಿ ವಿಭಾಗದ ಸಹಾಯಕ ಕಾರ್ಮಿಕ ಆಯುಕ್ತ ಡಾ.ಅವಿನಾಶ್ ನಾಯಕ್, ಬಳ್ಳಾರಿ ಉಪ ವಿಭಾಗ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಖೈನೂರು, ಬಳ್ಳಾರಿ 2ನೇ ವೃತ್ತದ ಕಾರ್ಮಿಕ ನಿರೀಕ್ಷಕ ಪರಶುರಾಮ್ ಎನ್.ಎಸ್., ಬಳ್ಳಾರಿ 1ನೇ ವೃತ್ತದ ಕಾರ್ಮಿಕ ನಿರೀಕ್ಷಕ ರಮೇಶ್ ಗಡ್ಡದ್, ಸಂಡೂರು ವೃತ್ತದ ಕಾರ್ಮಿಕ ನಿರೀಕ್ಷಕ ಮಂಜುನಾಥ್ ತೊಂಡಿಹಾಳ, ಸಿರುಗುಪ್ಪ ವೃತ್ತದ ಕಾರ್ಮಿಕ ನಿರೀಕ್ಷಕ ತಿರುಮಲೇಶ್, ಹೊಸಪೇಟೆ(ಕಂಪ್ಲಿ) 2ನೇ ವೃತ್ತದ ಕಾರ್ಮಿಕ ನಿರೀಕ್ಷಕ ಶಿವಶಂಕರ್ ತಳವಾರ ಸೇರಿದಂತೆ ಜಿಲ್ಲೆಯ ಎಲ್ಲಾ ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಸದಸ್ಯರು, ಕಾರ್ಮಿಕ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ಬಳ್ಳಾರಿ ಕೇಂದ್ರ ಕಾರಾಗೃಹದಲ್ಲಿ ಯಾವುದೇ ನಿಷೇಧಿತ ವಸ್ತು, ಮೊಬೈಲ್ ಬಳಕೆ ಇಲ್ಲ: ಅಧೀಕ್ಷಕಿ ಆರ್.ಲತಾ ಸ್ಪಷ್ಟನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.03–ಬಳ್ಳಾರಿ ಜಿಲ್ಲಾ ಕೇಂದ್ರ ಕಾರಾಗೃಹದಲ್ಲಿ ಯಾವುದೇ ನಿಷೇಧಿತ ವಸ್ತುಗಳು, ಮೊಬೈಲ್ ನುಸುಳದಂತೆ ಕ್ರಮಕೈಗೊಳ್ಳಲಾಗಿದೆ ಎಂದು ಬಳ್ಳಾರಿ ಕೇಂದ್ರ ಕಾರಾಗೃಹದ ಅಧೀಕ್ಷಕರಾದ ಆರ್.ಲತಾ ಅವರು ಸ್ಪಷ್ಟನೆ ನೀಡಿದ್ದಾರೆ.

ಬುಧವಾರದಂದು ಬಳ್ಳಾರಿ ಕೇಂದ್ರ ಕಾರಾಗೃಹದ ಕುರಿತು ಟಿ.ವಿ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಬಿತ್ತರವಾದ ದೃಶ್ಯಾವಳಿಗಳು ಪ್ರಸ್ತುತದ್ದಲ್ಲ ಹಾಗೂ ಕಾರಾಗೃಹದಿಂದ ಯಾವುದೇ ಸೆರೆಹಿಡಿದ ದೃಶ್ಯಾವಳಿಗಳು ವೈರಲ್ ಆಗಿರುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

ಈ ಕಾರಾಗೃಹದಲ್ಲಿ ಹರ್ಷ ಕೊಲೆ ಕೇಸಿನ ಆರೋಪಿಗಳು ಇದ್ದು, ಅವರನ್ನು ಭದ್ರತೆ ದೃಷ್ಟಿಯಿಂದ ಹೊರವಿಶೇಷ ಭದ್ರತೆಯಲ್ಲಿರಿಸಲಾಗಿದೆ.ಬಂಧಿಗಳು ಬೇರೆ ಕಾರಾಗೃಹಕ್ಕೆ ವರ್ಗಾವಣೆ ಕೋರಿದ್ದು,ನ್ಯಾಯಾಲಯದಿಂದ ವರ್ಗಾವಣೆಯು ತಿರಸ್ಕರಿಸಲ್ಪಟ್ಟಿದೆ. ಈ ಹಿನ್ನಲೆಯಲ್ಲಿ ಬಂಧಿಗಳು ಕಾರಾಗೃಹದಲ್ಲಿ ಸಿಬ್ಬಂದಿಗಳ ಮೇಲೆ ಹಾಗೂ ಕಾರಾಗೃಹದ ಆಡಳಿತದ ವಿರುದ್ಧವಾಗಿ ವಿಡೀಯೋ ಹರಿಬಿಡುವುದಾಗಿ ಬೆದರಿಕೆ ಒಡ್ಡುತ್ತಿರುತ್ತಾರೆ.

ಕಾರಾಗೃಹದ ಕುರಿತು ಟಿವಿ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಬಿತ್ತರವಾದ ದೃಶ್ಯಾವಳಿಗಳಲ್ಲಿರುವ ಬಂಧಿಗಳು ಈಗಾಗಲೇ ಬಿಡುಗಡೆ ಹೊಂದಿದ್ದು, ಕಾರಾಗೃಹದಲ್ಲಿ ಪ್ರಸ್ತುತ ದಾಖಲಿರುವುದಿಲ್ಲ. ಆ ದೃಶ್ಯಾವಳಿಗಳು ತುಂಬಾ ಹಳೆಯದಾಗಿದ್ದು,ಅವುಗಳನ್ನು ಬಳಸಿ ಹರಿಬಿಟ್ಟಿರುವುದು ಕಂಡುಬಂದಿದೆ. ಪ್ರಸ್ತುತ ಅವು ಈಗಿನ ದೃಶ್ಯಾವಳಿಗಳಾಗಿರುವುದಿಲ್ಲ.

ಬುಧವಾರ ಟಿ.ವಿ ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಬಿತ್ತರವಾದ ದೃಶ್ಯಾವಳಿಗಳನ್ನು ಪರಿಶೀಲಿಸಿದಾಗ ಪ್ರಸ್ತುತ ದಿನಗಳ ದೃಶ್ಯಾವಳಿಗಳಾಗಿರುವುದಿಲ್ಲ. ಇದು ಬಂಧಿಗಳು ಆಡಳಿತದ ವಿರುದ್ಧ ಹಾಗೂ ಸಿಬ್ಬಂದಿಗಳ ಮನಸ್ಥೈರ್ಯ ಕುಗ್ಗಿಸಲು ಮಾಡಿರುವ ತಂತ್ರವಾಗಿದೆ ಎಂದು ಅಧೀಕ್ಷಕರಾದ ಆರ್.ಲತಾ ಅವರು ಪ್ರಕಟಣೆಯಲ್ಲಿ ಸ್ಪಷ್ಟನೆ ನೀಡಿದ್ದಾರೆ.

## ಜುಲೈ 5 ರಂದು ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 03–ಇಲ್ಲಿನ ಸಮಾಜ ಕಲ್ಯಾಣ ಇಲಾಖೆಯಿಂದ ರಾಯಚೂರು ನಗರದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಅವರ ವೃತ್ತದ ಅಭಿವೃದ್ಧಿ ಹಾಗೂ ಉನ್ನತೀಕರಣ ಕಾಮಗಾರಿಗಳ ಕುರಿತು ಚರ್ಚಿಸಲು ಪೂರ್ವಭಾವಿ ಸಭೆಯು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜುಲೈ 5 ರಂದು ಸಂಜೆ 4 ಗಂಟೆಗೆ ನಡೆಯಲಿದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಸಭೆಗೆ ಜಿಲ್ಲೆಯ ವಿವಿಧ ಸಂಘ–ಸಂಸ್ಥೆಗಳ ಮುಖಂಡರು, ದಲಿತ ಸಮುದಾಯಗಳ ಮುಖಂಡರು,ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಎನ್.ಜಿ.ಓ. ಸಂಸ್ಥೆಯವರು ಭಾಗವಹಿಸಿ ತಮ್ಮ ಸಲಹೆ ಸೂಚನೆಗಳನ್ನು ನೀಡುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 06 ರಂದು ಜಗಜೀವನ ರಾಮ್ ಪುಣ್ಯತಿಥಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 03–ಹಸಿರು ಕ್ರಾಂತ್ರಿಯ ಹರಿಕಾರ ಡಾ.ಬಾಬು ಜಗಜೀವನ ರಾಮ್ ಅವರ ಪುಣ್ಯತಿಥಿ ನಿಮಿತ್ತ ಜುಲೈ 6ರ ಬೆಳಗ್ಗೆ 9 ಗಂಟೆಗೆ ಸ್ಟೇಷನ್ ವೃತ್ತದಲ್ಲಿರುವ ಡಾ.ಬಾಬು ಜಗಜೀವನ ರಾಮ್ ಅವರ ಪುತ್ಥಳಿಗೆ ಜಿಲ್ಲಾಧಿಕಾರಿಗಳು ಮಾಲಾರ್ಪಣೆ ಮಾಡಲಿದ್ದಾರೆ.

## ವಾತಾವರಣದಲ್ಲಿ ಉಂಟಾಗುವ ಏರುಪೇರಿನಿಂದ ಕಂಡುಬಂದಿರುವ ವೈರಲ್ ಜ್ವರ ಪ್ರಕರಣಗಳು ನಿಯಂತ್ರಣದಲ್ಲಿದೆ: ಡಿಹೆಚ್‌ಓ ಡಾ.ಯಲ್ಲಾ ರಮೇಶ್‌ಬಾಬು ಸ್ಪಷ್ಟನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.03–ವಾತಾವರಣದಲ್ಲಿ ಉಂಟಾಗುವ ಏರುಪೇರುನಿಂದ ವೈರಲ್ ಜ್ವರ ಕಂಡುಬರುವ ಸಾಧ್ಯತೆ ಇದ್ದು,ಸಾರ್ವಜನಿಕರು ಆತಂಕ ಪಡದೇ ಉಚಿತವಾಗಿ ಪರೀಕ್ಷೆ ಮತ್ತು ಚಿಕಿತ್ಸೆ ಮಾಡಿಸುವ ಮೂಲಕ ಗುಣಮುಖರಾಗಲು ಎಮ್ಮಿಗನೂರು ಹಾಗೂ ಕಂಪ್ಲಿ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವ್ಯವಸ್ಥೆ ಕಲ್ಪಿಸಲಾಗಿದ್ದು, ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್‌ಬಾಬು ಅವರು ತಿಳಿಸಿದರು.



ಕಂಪ್ಲಿ ತಾಲೂಕಿನ ಎಮ್ಮಿಗನೂರು ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಶಾಂತಿನಗರ ಗ್ರಾಮದಲ್ಲಿ ಕಂಡುಬಂದ ಜ್ವರ ಪ್ರಕರಣಗಳ ಮಾಹಿತಿ ಹಿನ್ನಲೆಯಲ್ಲಿ ಗುರುವಾರ ವೈದ್ಯಕೀಯ ತಂಡದೊಂದಿಗೆ ಗ್ರಾಮಕ್ಕೆ ಭೇಟಿ ನೀಡಿ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ಗ್ರಾಮದಲ್ಲಿ ಯಾವುದೇ ವಾಂತಿ–ಭೇದಿ ಪ್ರಕರಣಗಳು ವರದಿಯಾಗಿರುವುದಿಲ್ಲ. ಅಲ್ಲದೇ ಅಧಿಕೃತವಾಗಿ ಡೆಂಗ್ಯು ಪ್ರಕರಣಗಳು ಸಹ ವರದಿಯಾಗಿರುವುದಿಲ್ಲ. 70 ಮನೆಗಳಿರುವ ಗ್ರಾಮದಲ್ಲಿ ಮೇಲ್ನೋಟಕ್ಕೆ ವಾತಾವರಣದ ಬದಲಾವಣೆಯಿಂದಾಗುವ ವೈರಲ್ ಜ್ವರ ಕಂಡುಬಂದಿರುವ ಸಾಧ್ಯತೆಯಿದ್ದು, ಈಗಾಗಲೇ ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಅಬ್ದುಲ್ಲಾ ಹಾಗೂ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ಅವರ ತಂಡ ಭೇಟಿ ನೀಡಿ ಮುಂಜಾಗ್ರತೆ ವಹಿಸಲಾಗಿದೆ.

ಗ್ರಾಮದ ಸರಕಾರಿ ಶಾಲೆಯಲ್ಲಿ ತುರ್ತು ಚಿಕಿತ್ಸಾ ಕೇಂದ್ರ ಆರಂಭಿಸಲಾಗಿದ್ದು, ಅಗತ್ಯ ಔಷಧಿ, ಆಂಬ್ಯುಲೆನ್ಸ್ ಮತ್ತು ವೈದ್ಯರನ್ನು ನಿಯೋಜಿಸಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕು ಎಂದು ತಿಳಿಸಿದರು.

ಗ್ರಾಮದಲ್ಲಿ ಕ್ಷೇತ್ರ ಸಿಬ್ಬಂದಿ ಒಳಗೊಂಡ ವೈದ್ಯಕೀಯ ತಂಡವು ಮನೆಗಳಿಗೆ ತೆರಳಿ ಲಾರ್ವಾ ಸಮೀಕ್ಷೆ ಕೈಗೊಂಡು ಸೊಳ್ಳೆಗಳಿಂದ ಹರಡುವ ರೋಗಗಳ ಬಗ್ಗೆ ಆರೋಗ್ಯ ಶಿಕ್ಷಣ ನೀಡಲಾಗುತ್ತಿದೆ. ನೆಲ್ಲುಡಿ ಗ್ರಾಮ ಪಂಚಾಯತ್ ಸಹಕಾರದೊಂದಿಗೆ ನೀರಿನ ಮೂಲಗಳು, ಚರಂಡಿಗಳನ್ನು ಸ್ವಚ್ಛಗೊಳಿಸಲಾಗಿದೆ.ಸಾರ್ವಜನಿಕರು ಆದಷ್ಟು ಕುದಿಸಿ ಆರಸಿ ಸೋಸಿದ ನೀರನ್ನು ಕುಡಿಯಬೇಕು.ಬಿಸಿಯಾದ ಆಹಾರ ಪದಾರ್ಥ ಸೇವಿಸಬೇಕು ಎಂದರು.

ಈ ಸಂದರ್ಭದಲ್ಲಿ ನೆಲ್ಲುಡಿ ಗ್ರಾಪಂ ಸದಸ್ಯರಾದ ಪ್ರಭಾಕರ, ಮುಖ್ಯ ಆಡಳಿತ ವೈದ್ಯಾಧಿಕಾರಿ ಡಾ.ರವೀಂದ್ರ ಕನಕೇರಿ, ಆಡಳಿತ ವೈದ್ಯಾಧಿಕಾರಿ ಡಾ.ಫಾರೂಖ್ ಅಹಮ್ಮದ್, ಪ್ರಸೂತಿ ತಜ್ಞ ಡಾ.ಭರತ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಜಿಲ್ಲಾ ಎನ್‌ಸಿಡಿ ಸಲಹೆಗಾರರಾದ ಡಾ.ಜಬೀನ್ ತಾಜ್, ಜಿಲ್ಲಾ ಕಾಲರ ನಿಯಂತ್ರಣ ತಂಡದ ತಿಪ್ಪೇಸ್ವಾಮಿ, ಉಮಾ ಮಹೇಶ್ವರಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಬಸವರಾಜ, ಹೆಚ್‌ಐಒ ಬಸನಗೌಡ, ವಿಜ್ಞೇಶ್ವರ, ಕೃಷ್ಣಮೂರ್ತಿ, ಚನ್ನಬವರಾಜ, ಪಿಹೆಚ್‌ಸಿಒ, ಗೀತಾ, ನಂದಾ ಸೇರಿದಂತೆ ಆಶಾ ಕಾರ್ಯಕರ್ತೆಯರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ಡಾ. ಫ.ಗು.ಹಳಕಟ್ಟಿ ವಚನಗಳ ರಕ್ಷಣೆಗೆ ಶ್ರಮಿಸಿದ್ದರು– ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕನ್ನಡ ಸಾಹಿತ್ಯದಲ್ಲಿ ವಚನ ಸಾಹಿತ್ಯ ಮತ್ತು ದಾಸ ಸಾಹಿತ್ಯಗಳಿಗೆ ಬಹಳ ವಿಶೇಷ ಸ್ಥಾನವಿದ್ದು, ಡಾ. ಫ.ಗು. ಹಳಕಟ್ಟಿಯವರು ವಚನಗಳ ರಕ್ಷಣೆಗೆ ಶ್ರಮಿಸಿದವರಾಗಿದ್ದರು ಎಂದು ಕೊಪ್ಪಳ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಹೇಳಿದರು.




ಅವರು ಬುಧವಾರ ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ಜಿಲ್ಲಾಡಳಿತ,ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಡಾ. ಫ.ಗು. ಹಳಕಟ್ಟಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇಂದಿನ ಜನ ಸಮುದಾಯಕ್ಕೆ ನಟ, ನಟಿಯರು ಆದರ್ಶ ವ್ಯಕ್ತಿಗಳಾಗಿದ್ದಾರೆ.ಆದರೆ,ನಿಜವಾಗಲು ಆದರ್ಶವಾಗಬೇಕಿರುವುದು ಡಾ. ಫ.ಗು.ಹಳಕಟ್ಟಿ ಯವರಂತಹ ಮಹನೀಯರು.12ನೇ ಶತಮಾನದಲ್ಲಿ ಬಸವಾದಿ ಶರಣರು ಸಮ ಸಮಾಜ ನಿರ್ಮಾಣಕ್ಕಾಗಿ ಬಹಳಷ್ಟು ಹೋರಾಟಗಳ ಮೂಲಕ ಅಂದಿನ ಕಾಲಕಟ್ಟದಲ್ಲಿದ್ದ ಹಲವಾರು ವರ್ಗ ಮತ್ತು ಜಾತಿ ವ್ಯವಸ್ಥೆಯನ್ನು ನಿರ್ಮೂಲನೆ ಮಾಡುವ ಮೂಲಕ ಸಮ ಸಮಾಜದ ಕನಸು ಕಂಡಿದ್ದರು. ಅವರು ಸಾಮಾಜದಲ್ಲಿನ ಮೌಢ್ಯಗಳನ್ನು ಹೋಗಲಾಡಿಸಲು ಶ್ರಮಿಸಿದ್ದರು. ಕರ್ನಾಟಕ ಅಷ್ಟೇ ಅಲ್ಲದೇ ದೇಶದ ಎಲ್ಲಾ ಭಾಗಗಳಿಂದ ಬಂದಂತಹ ಶರಣ, ಶರಣೆಯರು ಅನುಭವ ಮಂಟಪದಲ್ಲಿ ಸೇರಿ ವಿಶ್ವದ ಮೊದಲ ಸಂಸತ್ತನ್ನು ನಿರ್ಮಾಣ ಮಾಡಿ, ಅಲ್ಲಿ ಚರ್ಚಿಸಿ ವಚನಗಳ ರಚನೆಯನ್ನು ಮಾಡಿದ್ದರು. ಆ ಎಲ್ಲಾ ವಚನಗಳು ಬೇರೆ–ಬೇರೆ ಕಡೆ ಹಂಚಿಹೋಗಿದ್ದವು. ಅವುಗಳ ಸಂಗ್ರಹಣೆಗಾಗಿ ಡಾ. ಫ.ಗು. ಹಳಕಟ್ಟಿ ಯವರು ಊರುರು ಸುತ್ತಿ, ಪ್ರಕಟಣೆ ಹಾಗೂ ಸಂಶೋಧನೆಗೊಳಿಸುವ ಮೂಲಕ ನಮಗೆಲ್ಲಾ ತಿಳಿಸಿಕೊಟ್ಟಿದ್ದಾರೆ ಎಂದರು.

ಡಾ. ಫ.ಗು.ಹಳಕಟ್ಟಿಯವರು ವಚನಗಳ ಸಂಗ್ರಹಣೆ ಮಾಡದೇ ಇದ್ದರೇ, ನಮಗೆ ವಚನ ಸಾಹಿತ್ಯ ಸಿಗಲು ಸಾಧ್ಯವಾಗುತ್ತಿರಲಿಲ್ಲ. ಇಂತಹ ಮಹಾನ ವ್ಯಕ್ತಿಯ ಜಯಂತಿ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು. ನಮ್ಮ ಭಾರತದ ಸಂವಿಧಾನದಲ್ಲಿರುವ ಎಲ್ಲಾ ಆಶಯಗಳನ್ನು ಬಸವಾದಿ ಶರಣ–ರು 12ನೇ ಶತಮಾನದಲ್ಲಿಯೇ ಹೇಳಿದ್ದರು. ಅವರ ಆದರ್ಶಗಳನ್ನು ಎಲ್ಲರೂ ಮೈಗೂಡಿಸಿಕೊಳ್ಳಬೇಕಿದೆ ಎಂದು ಹೇಳಿದರು.

ಗದಗಿನ ನಿವೃತ್ತ ಕಾರ್ಯನಿರ್ವಾಹಕ ಇಂಜಿನಿಯರ್ ಅಶೋಕ ಬಸಪ್ಪ ಬರಗುಂಡಿ ಅವರು ಡಾ. ಫ.ಗು. ಹಳಕಟ್ಟಿಯವರ ಕುರಿತು ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ಡಾ.ಫ.ಗು.ಹಳಕಟ್ಟಿಯವರು 1880 ಜುಲೈ 2ರಂದು ಧಾರವಾಡದಲ್ಲಿ ಜನಿಸಿದರು. ಫಕೀರಪ್ಪ ತಂದೆ ಗುರುಬಸಪ್ಪ ಹಳಕಟ್ಟಿ ಅವರು ಕಾನೂನು ಪದವಿ ಪಡೆದು, ವೃತ್ತಿಯಿಂದ ವಕೀಲರಾಗಿ, ಸಾಹಿತಿ, ಸಹಕಾರಿಗಳಾಗಿ, ಸಂಘಸಂಸ್ಥೆಗಳ ಕಟ್ಟಿ ಬೆಳೆಸಿ ಸಮಾಜಕ್ಕಾಗಿ ತಮ್ಮ ತನು ಮನ ಧನವನ್ನು ನೀಡಿ ವಚನ ಸಾಹಿತ್ಯವನ್ನು ಉಳಿಸಿದ್ದಾರೆ. ಅವರು ತಮ್ಮ ಬಧುಕನ್ನು ವಚನಗಳ ಜೋಡಣೆಗೆ ಪುಡುಪಾಗಿಟ್ಟರು. ಬಸವಾದಿ ಶರಣರ ಆಶಗಳನ್ನು ಉಳಿಸುವುದಕ್ಕಾಗಿ ಶ್ರಮಿಸಿದ ಡಾ. ಫ.ಗು.ಹಳಕಟ್ಟಿಯವರನ್ನು ವಚನ ಸಾಹಿತ್ಯದ ಪಿತಾಮಹ ಎಂದು ಕರೆಯುತ್ತಾರೆ. ವಚನಗಳ ಮೂಲಕ ಒಂದು ಸುಂದರವಾದ ಸಮಾಜ ನಿರ್ಮಾಣ ಸಾಧ್ಯವಾಗಿದ್ದು, ಇಂತಹ ವಚನಗಳ ರಕ್ಷಣೆಗೆ ಶ್ರಮಿಸಿದ ಡಾ ಫ.ಗು.ಹಳಕಟ್ಟಿಯವರು ನಮ್ಮ ಸಂಸ್ಕೃತಿಗೆ ಬಹುದೊಡ್ಡ ಕೊಡುಗೆ ನೀಡಿದ್ದಾರೆ ಎಂದರು.

ಬಸವ ಸಮಿತಿ ಅಧ್ಯಕ್ಷರಾದ ಬಸವರಾಜ ಬಳ್ಳೊಳ್ಳಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕೊಪ್ಪಳ ನಗರಸಭೆ ಸದಸ್ಯರಾದ ಗುರುರಾಜ ಹಲಗೇರಿ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಎ.ಬಸವರಾಜ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ ಮರಬನಳ್ಳಿ ಸೇರಿದಂತೆ ಮತ್ತಿತರರು ಇದೇ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಬಿ.ಎನ್ ಹೊರಪೇಟಿ ಕಾರ್ಯಕ್ರಮ ನಿರೂಪಿಸಿದರು.

*ಫ.ಗು.ಹಳಕಟ್ಟಿ ವೃತ್ತದಲ್ಲಿ ಕಾರ್ಯಕ್ರಮ:* ಕೊಪ್ಪಳ ನಗರದ ಕುಷ್ಟಗಿ ರಸ್ತೆಯಲ್ಲಿರುವ ಫ. ಗು.ಹಳಕಟ್ಟಿ ವೃತ್ತದಲ್ಲಿ ನಡೆದ ಧ್ವಜಾರೋಹಣ ಹಾಗೂ ಪುಷ್ಪಾರ್ಚನೆ ಕಾರ್ಯಕ್ರಮದಲ್ಲಿ ಕೊಪ್ಪಳ ಸಂಸದರಾದ ರಾಜಶೇಖರ ಬಸವರಾಜ ಹಿಟ್ನಾಳ, ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ, ಮಾಜಿ ಶಾಸಕರಾದ ಕೆ.ಶರಣಪ್ಪ, ನಗರಸಭೆ ಸದಸ್ಯರಾದ ರಾಜಶೇಖರ ಆಡೂರ, ಗುರುರಾಜ ಹಲಿಗೇರಿ, ಬಸವ ಸಮಿತಿ ಅಧ್ಯಕ್ಷರಾದ ಬಸವರಾಜ ಬಳ್ಳೊಳ್ಳಿ, ವಿಶ್ವಗುರು ಬಸವೇಶ್ವರ ಟ್ರಸ್ಟಿನ ಮತ್ತು ಬಸವ ಸಮಿತಿಯ ರಾಜೇಶ ಸಸಿಮಠ, ಬಸವರಾಜ, ವೀರಣ್ಣ ಸಂಕ್ಲಾಪುರ್, ವೀರಣ್ಣ ಕೊರ್ಲಳ್ಳಿ, ಗವಿಸಿದ್ದಪ್ಪ ಕೊಪ್ಪಳ, ಪ್ರಕಾಶ ಚಿನಿವಾಲರ, ವೀರೇಶ ಕೊತಬಾಳ, ಡಾ. ಬಸವರಾಜ ಕ್ಯಾವಟರ್, ಶರಣಪ್ಪ ಹ್ಯಾಟಿ, ಸುಧಾ ಶೆಟ್ಟರ್, ಗಿರಿಜಾ ಮೆಳ್ಳಿಕೇರಿ, ಸವಿತಾ ಬೋರಟ್ಟಿ, ಅರ್ಚನಾ ಸಸಿಮಠ, ಸೌಮ್ಯ ನಾಲ್ವಾಡ, ಎಬಿ ಕಣಿವೆ ವಕೀಲರು ಸೇರಿದಂತೆ ಮತ್ತಿತರರಿದ್ದರು.

## ಗ್ರಾಮೀಣ ಭಾಗದಲ್ಲಿ ಗುಣಮಟ್ಟದ ಆರೋಗ್ಯ ಸೇವೆ ನೀಡಲು ಸರ್ಕಾರ ಬದ್ಧ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.03–ಗ್ರಾಮೀಣ ಭಾಗದ ಜನತೆಯ ವೈಯಕ್ತಿಕ ಆರೋಗ್ಯಕ್ಕಾಗಿ ನಗರಗಳಿಗೆ ಆಗಮಿಸಿ ಹಣ ವೆಚ್ಚ ಮಾಡುವುದನ್ನು ತಪ್ಪಿಸಲು ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಅಗತ್ಯ ಪರಿಕರಗಳ ಒದಗಿಸುವಿಕೆ, ಸಿಬ್ಬಂದಿಗಳಿಗೆ ವಸತಿ ಗೃಹ ನಿರ್ಮಾಣ ಮಾಡುವ ಮೂಲಕ ಜನತೆಗೆ ಸ್ಥಳೀಯ ಆಸ್ಪತ್ರೆಗಳಲ್ಲಿಯೇ ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸಲು ಸರಕಾರ ಬದ್ಧವಾಗಿದೆ ಎಂದು ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ಶಾಸಕ ಬಿ.ಎಂ.ನಾಗರಾಜ ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮೂಲಕ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ 50 ಲಕ್ಷ ರೂ.ಗಳ ಅನುದಾನದಡಿ ಸಿರುಗುಪ್ಪ ತಾಲೂಕಿನ ತಾಳೂರು ಗ್ರಾಮದಲ್ಲಿ ಶುಶ್ರೂಷಣಾಧಿಕಾರಿ ಹಾಗೂ ಡಿ–ಗ್ರೂಪ್ ಸಿಬ್ಬಂದಿಯವರಿಗೆ ವಸತಿಗೃಹಗಳ ನಿರ್ಮಾಣಕ್ಕೆ ಗುರುವಾರ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು.

ಜನರ ಆರೋಗ್ಯದ ಕಾಳಜಿ ವಹಿಸುವ ಉನ್ನತ ಮಹಾತ್ವಾಕಾಂಕ್ಷಿಯನ್ನು ರಾಜ್ಯ ಸರಕಾರ ಹೊಂದಿದ್ದು, ಈಗಾಗಲೇ ಸಿರುಗುಪ್ಪ ಪಟ್ಟಣ–ಕ್ಕೆ 150 ಹಾಸಿಗೆಗಳ ಹೈಟೆಕ್ ಆಸ್ಪತ್ರೆಯ ನಿರ್ಮಾಣಕ್ಕೆ ಸರಕಾರದ ಅನುಮೋದನೆಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

ಈಗಾಗಲೇ ಜಿಲ್ಲೆಯ ಕುರವಳ್ಳಿ ಹಾಗೂ ರಾವಿಹಾಳ ಗ್ರಾಮಗಳಲ್ಲಿ ನೂತನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ನಿರ್ಮಿಸಲಾಗಿದ್ದು, ವೈದ್ಯರು ಹಾಗೂ ಸಿಬ್ಬಂದಿಯವರು ಕೇಂದ್ರಸ್ಥಾನದಲ್ಲಿಯೇ ಲಭ್ಯವಾಗಲು ಸಹಾಯಕವಾಗಿ ವಸತಿಗೃಹಗಳ ನಿರ್ಮಾಣ ಮಾಡಲಾಗುತ್ತಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶಬಾಬು, ಸಿರುಗುಪ್ಪ ತಾಲೂಕಿನ ಆರೋಗ್ಯ ಕೇಂದ್ರಗಳಲ್ಲಿ ರಾಜ್ಯ ಸರಕಾರದಿಂದ ರಕ್ತಪರೀಕ್ಷೆ ಮಾಡಲು ಸೆಲ್ ಕೌಂಟರ್‌ಗಳನ್ನು ಹಾಗೂ ಹೃದಯ ಸಮಸ್ಯೆಗಳ ಆರಂಭಿಕ ತೊಂದರೆಗಳನ್ನು ಗುರುತಿಸಲು ಇಸಿಜಿ ಯಂತ್ರಗಳನ್ನು ಕ್ಷೇತ್ರದ ಶಾಸಕರ ಮುತವರ್ಜಿಯಿಂದ ವ್ಯವಸ್ಥೆ ಮಾಡಲಾಗಿದ್ದು, ಅಗತ್ಯವಿರುವವರು ಹಣ ವೆಚ್ಚ ಮಾಡದೇ ಸ್ಥಳೀಯವಾಗಿ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ವಿನಂತಿಸಿದರು.

ಈ ಸಂದರ್ಭದಲ್ಲಿ ತಾಳೂರು ಗ್ರಾಮ ಪಂಚಾಯಿತಿ ಉಪಾಧ್ಯಕ್ಷರಾದ ಬಲ್ಲೂರಪ್ಪ, ಆಡಳಿತ ವೈದ್ಯಾಧಿಕಾರಿ ಡಾ.ಸುನೀಲ್, ಗ್ರಾಮ ಪಂಚಾಯತ್ ಸದಸ್ಯರಾದ ಪುರುಷೋತ್ತಮರೆಡ್ಡಿ, ರಾಮಾಂಜನಿ, ಫಕೀರಪ್ಪ, ದೇವರೆಡ್ಡಿ, ತುರು ಮುಂದಪ್ಪ, ಊಳೂರು ಈರಣ್ಣ ನೇಣಿಕಪ್ಪ, ದಿಬ್ಬಲಿ ಗಾದಿಲಿಂಗಪ್ಪ, ಅಂಬ್ರೇಶ, ಮಾಳಮ್ಮ, ಅಭಿಯಂತರರಾದ ಚಂದನಗೌಡ, ರಾಜೇಶ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೆಂಕಪ್ಪ ಸೇರಿದಂತೆ ಗ್ರಾಮಸ್ಥರು, ಸಿಬ್ಬಂದಿಯವರು ಉಪಸ್ಥಿತರಿದ್ದರು.

## ಜು.10 ರಂದು ಹಡಪದ ಅಪ್ಪಣ ಜಯಂತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.03–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಶಿವಶರಣ ಹಡಪದ ಅಪ್ಪಣ ಜಯಂತಿ ಕಾರ್ಯಕ್ರಮವನ್ನು ಜು.10 ರಂದು ಬೆಳಿಗ್ಗೆ 11.30 ಗಂ–ಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ವಸತಿ,ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾ ಹಡಪದ ಅಪ್ಪಣ ಸೇವಾ ಸಮಿತಿಯ ಅಧ್ಯಕ್ಷ ಹೆಚ್.ರುದ್ರಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಬಳ್ಳಾರಿಯ ನಿವೃತ್ತಿ ಮುಖ್ಯಗುರುಗಳಾದ ಸಿ.ಕೊಟ್ರಪ್ಪ ಅವರು ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಸಿರುಗುಪ್ಪದ ವಿರೇಶ ದಳವಾಯಿ ಅವರಿಂದ ವಚನ ಸಂಗೀತ ಇರಲಿದೆ.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ಮಾದಿಗ ದಂಡೋರಾ ರಾಜ್ಯಾಧ್ಯಕ್ಷರಾಗಿ ಪ್ರಭಾಕರ ಹದನೂರ ರವರ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರಿನ ಯು.ಟಿ.ಎಲೈಟ್ ಹೋಟೆಲ್ ಗಾಂಧಿನಗರದಲ್ಲಿ,ಜುಲೈ 02,2025 ರಂದು ನಡೆದ ಮಾದಿಗ ದಂಡೋರಾ ಹೋರಾಟ ಸಮಿತಿಯ ರಾಜ್ಯ ಮಟ್ಟದ ಕಾರ್ಯಕರ್ತರ ಸಭೆ ಮತ್ತು




1997 ರಂದು ರಾಜ್ಯದಲ್ಲಿ ಮೊಟ್ಟಮೊದಲ ಬಾರಿಗೆ ಮಾದಿಗ ಜಾತಿ ಹೆಸರಿನಲ್ಲಿ ಸಂಘಟನೆಯನ್ನು ಕಟ್ಟಿ ಬೆಳೆಸಿದ ಮಾದಿಗ ದಂಡೋರಾ ಸಂಸ್ಥಾಪಕರಾದ ಶ್ರೀಮಾನ ಮಾಪಣ್ಣ ಹದನೂರ ರವರ ಹೃದಾಯಘಾತದಿಂದ ನಿಧನರಾದ ನಂತರ ಯಾವುದೇ ಕಾರಣಕ್ಕೂ ಭೀತಿಪಡದೇ ಮತ್ತು ಅವರ ಹೋರಾಟದ ರಥವನ್ನು ಮುಂದುವರೆಸಿಕೊಂಡು ಹೋಗುವ ಮಹತ್ವದ ಸಭೆಯಲ್ಲಿ ಮಾದಿಗ ದಂಡೋರಾ ರಾಜ್ಯಾಧ್ಯಕ್ಷರಾಗಿ ಪ್ರಭಾಕರ ಮಾಪಣ್ಣ ಹದನೂರ ರವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಈ ಸಭೆಯಲ್ಲಿ ರಾಜ್ಯ ಉಪಾಧ್ಯಕ್ಷರಾದ ಬಸವರಾಜ್ ನಾಯ್ಕಲ್ ರವರು, ಮಲ್ಲಿಕಾರ್ಜುನ ಕಾಳಗಿ, ಮಾದಿಗ ದಂಡೋರಾ ಹೋರಾಟ ಸಮಿತಿಯ ಪ್ರಮುಖರು ಹಾಗೂ ಮಾಪಣ್ಣ ಹದನೂರ ರವರ ಒಡನಾಡಿಗಳಾದ ಸಿ.ವಿ.ಲಕ್ಷಣರಾಜು, ಮಲ್ಲಿಕಾರ್ಜುನ ಕುರಕುಂದಿ, ಚಂದ್ರಕಾಂತ ಸಗರಕರ್, ದೇವೆಂದ್ರಪ್ಪಾ ಹಾದಿಮನಿ, ಕಿರಣಬಾಬು ಕೋರೆ, ಮಲ್ಲೇಶಿ ಸೈದಾಪೂರ, ತಿಪ್ಪಣ್ಣಾ ಶೆಳ್ಳಗಿ, ಶಾಂತಕುಮಾರ್ ರೆಡ್ಡಿ ಸೇರಿದಂತೆ ಹಲವಾರು ಮಾದಿಗ ದಂಡೋರಾ ಮುಖಂಡರು ಭಾಗಿಯಾಗಿದ್ದರು.

ರಾಜ್ಯದದ್ಯಾಂತ ಮಾಪಣ್ಣ ಹದನೂರ ರವರ ಹೋರಾಟದ ರಥವನ್ನು ಮುಂದುವರೆಸಿಕೊಂಡು ಹೋಗಲು ತೀರ್ಮಾನಿಸಲಾಯಿತು ಎಂದು ಪತ್ರಿಕೆಗೆ ತಿಳಿಸಿದ್ದಾರೆ.

# ನರೇಗಾ ಕಾಮಗಾರಿ ವೀಕ್ಷಿಸಿದ ಜಿಪಂ ಉಪಕಾರ್ಯದರ್ಶಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.3–ಜಿಲ್ಲೆಯ ಹೂಲಗೇರಿ, ಅಗಸನಕೊಪ್ಪ, ಉಗಲವಾಟ,ಹಳಗೇರಿ,ಮಮಟಗೇರಿ ಸೇರಿದಂತೆ ಬಾದಾಮಿ ತಾಲೂಕಿನ ಹಳ್ಳಿಗಳಿಗೆ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಎನ್. ವಾಯ್.ಬಸರಿಗಿಡದ ಭೇಟಿ ನೀಡಿ ವಿವಿಧ ಕಾಮಗಾರಿಗಳ ಪರಿಶೀಲನೆ ನಡೆಸಿದರು.



ಹೂಲಗೇರಿಯ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಮಕ್ಕಳ ಸಂಖ್ಯೆ, ಪೌಷ್ಟಿಕ ಆಹಾರ ವಿತರಣೆ, ಆಹಾರ ಧಾನ್ಯಗಳನ್ನು ಪರಿಶೀಲಿಸಿ, ಗ್ರಾಮ ಪಂಚಾಯತ ಕಾರ್ಯಾಲಯಕ್ಕೆ ತೆರಳಿ ಅಧಿಕಾರಿ ಹಾಗೂ ಸಿಬ್ಬಂದಿ ಹಾಜರಾತಿ ಮತ್ತು ವಿವಿಧ ಯೋಜನೆಗಳ ಪ್ರಗತಿಯನ್ನು ಪರಿಶೀಲಿಸಿದರು. ಮಾಲಗಿ ಗ್ರಾಮದ ಅಂಗನವಾಡಿ ಕಟ್ಟಡ, ಶಾಲಾ ಶೌಚಾಲಯ ಕಾಮಗಾರಿಗಳನ್ನು ಪರಿಶೀಲಿಸಿ ಶಾಲೆಗೆ ಅಗತ್ಯವಾದ ಕೌಂಪೌಂಡ್ ಕಾಮಗಾರಿ ಕೈಗೊಳ್ಳುವಂತೆ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಶಾಲಾ ಅಡುಗೆ ಕೊಠಡಿಗೆ ತೆರಳಿ ಆಹಾರ ತಯಾರಿಸುವ ಕ್ರಮ ಹಾಗೂ ಆಹಾರ ಧಾನ್ಯಗಳ ಗುಣಮಟ್ಟ ವೀಕ್ಷಿಸಿದರು. ಅಗಸನಕೊಪ್ಪ ಗ್ರಾಮದ ಆಯುಷಮಾನ್ ಆರೋಗ್ಯ ಕೇಂದ್ರಕ್ಕೆ ತೆರಳಿ ಔಷಧಿಗಳ ದಾಸ್ತಾನು, ಚಿಕಿತ್ಸೆ ಪಡೆದವರ ವಿವರ, ಸಿಬ್ಬಂದಿ ಹಾಜರಾತಿ ಗಮನಿಸಿದರು. ಮಮಟಗೇರಿ ಗ್ರಾಮ ಪಂಚಾಯತ ವ್ಯಾಪ್ತಿಯ ಉಗಲವಾಟ ಗ್ರಾಮದ ಬದು ನಿರ್ವಹಣೆ ಕಾಮಗಾರಿ ಪರಿಶೀಲಿಸಿ ನಿಗದಿತ ಅವಧಿಯೊಳಗಾಗಿ ಕಾಮಗಾರಿ ಪೂರ್ಣಗೊಳಿಸಲು ಸೂಚಿಸಿದರು. ಮಮಟಗೇರಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಹಳಗೇರಿ ಗ್ರಾಮದ ಹಳ್ಳದ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕೂಲಿಕಾರರ ಜೊತೆ ಸಂವಾದ ಮಾಡಿ, ಎನ್.ಎನ್.ಎಂ.ಎಸ್ ಹಾಜರಿ ಪರಿಶೀಲಿಸಿದರು. ನಂತರ ಗ್ರಾಮ ಪಂಚಾಯತ ಕಾರ್ಯಾಲಯಕ್ಕೆ ತೆರಳಿ ವಿವಿಧ ಯೋಜನೆಗಳ ಅನುಷ್ಠಾನದ ಮಾಹಿತಿ ಪಡೆದುಕೊಂಡರು.

ಭೇಟಿ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷರಾದ ಶ್ರೀದೇವಿ ಲಮಾಣಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಸತೀಶ ಮಾಕೊಂಡ, ಪಂಚಾಯತ ಅಭಿವೃದ್ದಿ ಅಧಿಕಾರಿಗಳಾದ ಶಿವಲಿಂಗಯ್ಯ ಹಿರೇಮಠ, ಸವಿತಾ ನಂದೆಪ್ಪನವರ, ಡಿ.ಐ.ಇಸಿ ಅಜಯ ಸೂಳಿಕೇರಿ, ಸಿದ್ದಲಿಂಗಯ್ಯ ಹಿರೇಮಠ, ಟಿ.ಐ.ಇಸಿ ಸಮೀರ ಉಮರ್ಜಿ, ಬಿ.ಎಫ್.ಟಿ ಅನೀಲ ಮೇಟಿ, ಮಂಜುನಾಥ ಸಿದ್ದಾಪೂರ ಸೇರಿದಂತೆ ಇತರರು ಇದ್ದರು.

# ಕಡತ ವಿಲೇವಾರಿಯಲ್ಲಿ ವಿಳಂಬ : ಸಿಇಓ ಅಸಮಾಧಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.3–ನಿಗದಿತ ಅವಧಿಯಲ್ಲಿ ಕಡತಗಳನ್ನು ವಿಲೇವಾರಿ ಮಾಡದೇ ಬೇಜವಾಬ್ದಾರಿ ತೋರಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕ್ರಮಕ್ಕೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಅಸಮಾಧಾನ ವ್ಯಕ್ತಪಡಿಸಿದರು.



ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಗುರುವಾರ ಶಾಲಾ ಶಿಕ್ಷಣ ಇಲಾಖೆಯ ತಾಲೂಕಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತಮ್ಮ ಹಂತದಲ್ಲಿ ಬರುವ ಕಡಗಳ ವಿಲೇವಾರಿ ಸರಿಯಾಗಿ ಆಗುತ್ತಿಲ್ಲ. ಅಧಿಕಾರಿಗಳ ಹಾಗೂ ಸಿಬ್ಬಂದಿಗಳ ಬೇಜವಾಬ್ದಾರಿಯಿಂದ ಪ್ರಗತಿಯಲ್ಲಿ ಬಹಳ ಕಡಿಮೆಯಾಗಿದೆ. ರಜೆ ನಗದೀಕರಣ, ಕಾಲಮಿತಿ ಬಡ್ತಿ ಸೇರಿದಂತೆ ಇತರೆ ಕೆಲಸಗಳಲ್ಲಿ ವಿಳಂಬ ಧೋರಣೆ ಆಗುತ್ತಿದೆ. ಈ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಗಮನಹರಿಸಿ ಸೂಕ್ತ ಕ್ರಮಕೈಗೊಳ್ಳುವಂತೆ ಸೂಚನೆ ನೀಡಿದರು. ಕೊಠಡಿ ನಿರ್ಮಾಣ, ಶಾಲಾ ದುರಸ್ಥಿ, ಶೌಚಾಲಯ ನಿರ್ಮಾಣ ಸೇರಿದಂತೆ ಇತರೆ ಕಾಮಗಾರಿ ಕೈಗೊಳ್ಳಲು ವಿಶೇಷ ಅನುದಾನದಡಿ 4.80 ಕೋಟಿ ರೂ.ಗಳಷ್ಟು ಜಿಲ್ಲೆಗೆ ಬಿಡುಗಡೆಯಾಗಿದೆ. ಈ ಅನುದಾನದ ಖರ್ಚಾದ ಬಗ್ಗೆ ಮಾಹಿತಿ ಕೇಳಿದಾಗ ಯಾರಲ್ಲಿ ಸರಿಯಾದ ಉತ್ತರ ದೊರೆಯಲಿಲ್ಲ. ಅಧಿಕಾರಿಗಳ ನಿರ್ಲಕ್ಷತನ ಎದ್ದು ಕಾಣುತ್ತಿದೆ. ಈ ಅನುದಾನದ ಬಗ್ಗೆ ಸೂಕ್ತ ಮಾಹಿತಿ ನೀಡುವಂತೆ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸೂಚನೆ ನೀಡಿದರು. ಕಳೆದ ಸಾಲಿನಲ್ಲಿ ಕೈಗೊಂಡ ದುರಸ್ಥಿ ಕಾರ್ಯ ಪೂರ್ಣಗೊಂಡಿಲ್ಲ. ಶಾಲಾ ಮಕ್ಕಳಿಗೆ ಶೂ ಮತ್ತು ಸಾಕ್ಸ ಖರೀದಿ ಪ್ರಕ್ರಿಯೆ ನಡೆಸಬೇಕು. ಗುಣಮಟ್ಟದ ಶೂಗಳನ್ನು ಖರೀದಿಸಿ ವಿತರಣೆ ಮಾಡಿ. ಖರೀದಿಯಲ್ಲಿ ಯಾವುದೇ ರೀತಿ ಲೋಪ ಆಗದಂತೆ ಕ್ರಮವಹಿಸಲು ತಿಳಿಸಿದರು.

ಶಾಲೆಯಲ್ಲಿ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಹಾಜರಾತಿ ಇರಬೇಕು. ಹೆಚ್ಚಿನ ಗೈರುಹಾಜರಾತಿ ಮಕ್ಕಳು ಇದ್ದಲ್ಲಿ ಅವರನ್ನು ಮನವೊಲಿಸಿ ಮರಳಿ ಶಾಲೆಗೆ ಕರೆತರುವ ಕಾರ್ಯವಾಗಬೇಕು. ಪ್ರಾಥಮಿಕ ಹಂತದಲ್ಲಿಯೇ ಮಕ್ಕಳ ಕಲಿಕೆ ಸುಧಾರಣೆಗೆ ಶಿಕ್ಷಕರು ಶ್ರಮಿಸಬೇಕು ಎಂದರು ತಿಳಿಸಿದ ಅವರು, ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲೆಗಳಿಗೆ ಭೇಟಿ ನೀಡಿ ಕಲಿಕಾ ಸಾಮರ್ಥ್ಯದ ಬಗ್ಗೆ ಪರಿಶೀಲಿಸಿ ಶಿಕ್ಷಕರು ಸರಿಯಾಗಿ ಪಾಠ ಬೋಧನೆ ಮಾಡುತ್ತಿದ್ದಾರೆಯೇ ಎಂಬುದನ್ನು ಗಮನಹರಿಸಬೇಕು. ಕೆಲವೊಂದು ಶಿಕ್ಷಕರು ಗೈರಾದರೂ ಹಾಜರಾತಿಯಲ್ಲಿ ಸಹಿ ಮಾಡಿರುತ್ತಾರೆ. ಈ ರೀತಿಯ ಭೇಟಿ ಸಮಯದಲ್ಲಿ ಕಂಡು ಬಂದಲ್ಲಿ ಶಿಸ್ತುಕ್ರಮ ವಹಿಸಲಾಗುತ್ತದೆ ಎಂದು ತಿಳಿಸಿದರು. ಮಕ್ಕಳ ಕಲಿಕೆಯಲ್ಲಿ ಸುಧಾರಣೆ ಮಾಡುವ ಮನೋಭಾವನೆ ಶಿಕ್ಷಕರಲ್ಲಿ ಬಂದಾಗ ಮಾತ್ರ ಸುಧಾರಣೆಯಾಗಲು ಸಾಧ್ಯವಾಗುತ್ತದೆ. ಪ್ರಯತ್ನ ಇರಬೇಕು. ಏನು ಮಾಡದೇ ಪ್ರಗತಿ ಆಗಲು ಸಾದ್ಯವೇ ಎಂದು ಪ್ರಶ್ನಿಸಿದರು. ಶಿಕ್ಷಕರು ತಮ್ಮ ಮನೋವೃತ್ತಿ ಬದಲಾಯಿಸಿಕೊಳ್ಳಲು ಸೂಚನೆ ನೀಡಿದರು. ಮಳೆಗಾಲ ಪ್ರಾರಂಭವಾಗಿದ್ದು, ಶಿಥಿಲಾವಸ್ಥೆ ಕಟ್ಟಡವನ್ನು ಗುರುತಿಸಿ, ಶಾಲಾ ಮುಖ್ಯೋಧ್ಯಾಪಕರ ಮೂಲಕ ಮಾಹಿತಿ ಪಡೆದುಕೊಂಡು ಸುಸ್ಥಿತಿಯಲ್ಲಿ ಇದ್ದಲ್ಲಿ ಆ ಬಗ್ಗೆ ದೃಢೀಕರಣ ಸಲ್ಲಿಸುವಂತೆ ಸಿಇಓ ತಿಳಿಸಿದರು. ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಪ್ರಭಾರಿ ಉಪನಿರ್ದೇಶಕ ಎಚ್.ಜಿ.ಮಿರ್ಜಿ, ಇಲಕಲ್ಲ ಡಯಟ್ ಪ್ರಾಚಾರ್ಯ ಶೇಖರಪ್ಪ ಬಳಬಟ್ಟಿ, ಸರ್ವಶಿಕ್ಷಣ ಅಭಿಯಾನದ ಉಪಸಮನ್ವಯಾಧಿಕಾರಿ ಸಿ.ಆರ್.ಓಣಿ ಸೇರಿದಂತೆ ಆಯಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ರೋಟರಿ ಕ್ಲಬ್‌ಗೆ ಪೋಲಿಯೋ ನಿರ್ಮೂಲನೆಯ ಶ್ರೇಯಸ್ಸು




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.3–ಇಡೀ ವಿಶ್ವದಲ್ಲಿ ಪೋಲಿಯೋ ರೋಗ ನಿರ್ಮೂಲನೆ ಮಾಡಿದ ಖ್ಯಾತಿ ರೋಟರಿ ಕ್ಲಬ್‌ಗೆ ಸಲ್ಲುತ್ತದೆ ಎಂದು ಗೋವಾ ರೋಟರಿ ಸಂಸ್ಥೆಯ ನಿಯೋಜಿತ ಜಿಲ್ಲಾ ಗವರ್ನರ ಲೆನಿ ಡಿಕೋಸ್ಟ ಹೇಳಿದರು.

ವಿದ್ಯಾಗಿರಿಯ ಸಾಯಿ ಮಂದಿರದಲ್ಲಿ ನಡೆದ ರೋಟರಿ ಕ್ಲಬ್‌ನ 2025–26ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ, ಮಾರಕವಾಗಿ ವಿಶ್ವವನ್ನೇ ಕಾಡಿದ ಪೋಲಿಯೋ ರೋಗವನ್ನು ನಿರ್ಮೂಲನೆ ಮಾಡಿದ ಶ್ರೇಯಸ್ಸು ರೋಟರಿ ಕ್ಲಬ್‌ದ್ದಾಗಿದ್ದು, ಸಧ್ಯಕ್ಕೆ ಎಲ್ಲಿಯೂ ಪೋಲಿಯೋ ಸಮಸ್ಯೆ ಇಲ್ಲ ಎಂದರು.

ರೋಟರಿ ಕ್ಲಬ್ ಕಳೆದ 103 ವರ್ಷಗಳಿಂದ ವಿಶ್ವದಾದ್ಯಂತ ಸೇವೆ ಸಲ್ಲಿಸುತ್ತಿದೆ. ಸರ್ಕಾರಿ ಶಾಲೆಗಳ ಅಭಿವೃದ್ಧಿ, ಮಕ್ಕಳ ಕಲಿಕೆಗೆ ಪ್ರೇರಣೆ ಹಾಗೂ ಸಮುದಾಯದ ಬಡ ಜನರು ಅತ್ಯುತ್ತಮ ಬದುಕು ರೂಪಿಸಿಕೊಂಡು ಅವರೂ ಸಮಾಜದಲ್ಲಿ ಮುಂದೆ ಸೇವೆ ಮಾಡುವ ವ್ಯಕ್ತಿತ್ವ ರೂಪಿಸುವುದು ನಮ್ಮ ಉದ್ದೇಶ. ಈ ಕಾರ್ಯದಲ್ಲಿ ಲಕ್ಷಾಂತರ ಜನರು ಕೈಜೋಡಿಸುತ್ತಾರೆ ಎಂದು ಡಿಕೋಸ್ಟ್ ಹೇಳಿದರು.

ಬಾಗಲಕೋಟೆಯ ರೋಟರಿ ಕ್ಲಬ್ ಹಲವು ಸಮಾಜಮುಖಿ ಕಾರ್ಯ ಕೈಗೊಂಡಿರುವುದು ಶ್ಲಾಘನೀಯ. ಪದಗ್ರಹಣ ದಿನವೇ ಬಡ ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನು ನೀಡಿದೆ. ಸರ್ಕಾರಿ ಶಾಲೆ ಮಕ್ಕಳಿಗೆ ವರ್ಷವಿಡೀ ಬೇಕಾಗುವ ಕಲಿಕಾ ಸಾಮಗ್ರಿ ಕೊಟ್ಟಿದ್ದು, ಮಕ್ಕಳ ಶೈಕ್ಷಣಿಕ ಭವಿಷ್ಯಕ್ಕೆ ನೆರವಾಗಲಿದೆ ಎಂದರು.

ರೋಟರಿ ಕ್ಲಬ್‌ನ ಡಾ.ಗಿರೀಶ ಮಸೂರಕರ ಮಾತನಾಡಿ, ಬಾಗಲಕೋಟೆಯಲ್ಲಿ ಕಳೆದ 65 ವರ್ಷಗಳಿಂದ ರೋಟರಿ ಕ್ಲಬ್ ಸಮುದಾಯದಲ್ಲಿ ವಿವಿಧ ಕಾರ್ಯಕ್ರಮ ನಡೆಸುತ್ತ ಬಂದಿದೆ. ಕ್ಲಬ್‌ಗೆ ಸೇವೆಯ ಮೂಲಕ ವಿಶೇಷತೆ ಪಡೆದುಕೊಂಡಿದೆ ಎಂದರು.

ನಿಕಟಪೂರ್ವ ಅಧ್ಯಕ್ಷ ಸಂತೋಷ ನಾವಲಗಿ ಮಾತನಾಡಿ, ವರ್ಷವಿಡೀ ಸಾಮಾಜಿಕ ಕಾರ್ಯ ಕೈಗೊಳ್ಳಲು ನೆರವಾದ ಪ್ರತಿಯೊಬ್ಬ ರೋಟರಿ ಸದಸ್ಯರ ಸಹಕಾರ ಸ್ಮರಿಸಿದರು. ಕಾರ್ಯದರ್ಶಿ ಮಲ್ಲಿನಾಥ ಹಿರೇಮಠ, ಖಜಾಂಚಿ ಮಹಾದೇವ ದಂದರಗಿ ಹಾಗೂ ನೂತನ ಪದಾಧಿಕಾರಿಗಳು, ನೂತನ ಸದಸ್ಯರನ್ನು ಗೌರವಿಸಲಾಯಿತು.

ಸಂತೋಷ ನಾವಲಗಿ ಸ್ವಾಗತಿಸಿದರು. ಪ್ರಲ್ಹಾದರಾವ್ ಹುಯಿಲಗೋಳ ಮತ್ತು ವೀರಣ್ಣ ಕಿರಗಿ ಕಾರ್ಯಕ್ರಮ ನಿರೂಪಿಸಿದರು. ಡಾ.ಪರಾಂಡೆ, ಬಸವರಾಜ ಪರ್ವತಿಮಠ, ಜಯಪ್ರಕಾಶ ಬನ್ನಿ, ಶಿವಕುಮಾರ ನಂದಿಕೋಲಮಠ ನೂತನ ಪದಾಧಿಕಾರಿಗಳು ಮತ್ತು ಸದಸ್ಯರನ್ನು ಪರಿಚಯಿಸಿದರು.

ರೋಟರಿ ಕ್ಲಬ್‌ನ ನೂತನ ಅಧ್ಯಕ್ಷರಾಗಿ ಮಲ್ಲಿಕಾರ್ಜುನ ಹದ್ಲಿ, ಕಾರ್ಯದರ್ಶಿಯಾಗಿ ಸಂತೋಷ ಪಾಟೀಲ, ಖಜಾಂಚಿಯಾಗಿ ಪ್ರಕಾಶ ಭೂತಲ್ ಅಧಿಕಾರ ವಹಿಸಿಕೊಂಡರು.

ಡಾ.ನಾರಾಯಣ ಹೆರಕಲ್ ಸೇರಿದಂತೆ ರೋಟರಿ ಕ್ಲಬ್‌ನ ಸದಸ್ಯರು ಪಾಲ್ಗೊಂಡಿದ್ದರು.

# ಔಷಧ ಶಾಸ್ತ್ರದಲ್ಲಿ ಸಂಶೋಧನೆ ಮಾಡಿ–ಡಾ.ಪ್ರಮೋದಕುಮಾರ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.3–ಹಾನಗಲ್ ಕುಮಾರೇಶ್ವರ ಫಾರ್ಮಸಿ ಕಾಲೇಜಿನಲ್ಲಿ ವೈಜ್ಞಾನಿಕ ಸಂಶೋಧನೆಗಾಗಿ ಅಂತರಾಷ್ಟ್ರೀಯ ಮಟ್ಟದ ಎಲ್ಲ ಮೂಲಭೂತ ಸೌಲಭ್ಯಗಳಿದ್ದು ವಿದ್ಯಾರ್ಥಿಗಳು ಔಷಧ ಶಾಸ್ತ್ರದಲ್ಲಿ ಸಂಶೋಧನೆ ಮಾಡಿ ಜನಸಾಮಾನ್ಯರ ಆರೋಗ್ಯ ರಕ್ಷಣೆಯಲ್ಲಿ ಪ್ರಮುಖ ಪಾತ್ರ ವಹಿಸಬೇಕು ಎಂದು ಮೈಸೂರಿನ ಜೆಎಸ್‌ಎಸ್ ಫಾರ್ಮಸಿ ಕಾಲೇಜಿನ ಡೀನ್ ಹಾಗೂ ಪ್ರಾಚಾರ್ಯ ಡಾ.ಪ್ರಮೋದಕುಮಾರ ಟಿ.ಎಸ್ ಹೇಳಿದರು.

ನಗರದ ಬಿ.ವಿ.ವಿ.ಸಂಘದ ಹಾನಗಲ್ ಕುಮಾರೇಶ್ವರ ಕಾಲೇಜ್ ಆಫ್ ಫಾರ್ಮಸಿ ಕಾಲೇಜಿನಲ್ಲಿ ಗುರುವಾರ ಸ್ಟಾರ್ಟ ಆಪ್ ಸೆಲ್‌ನ್ನು ಉದ್ಘಾಟಿಸಿ ಮಾತನಾಡಿದ ಅವರು, ಇನ್ಸಿಟ್ಯೂಟ್ ಇನ್ನೊವೇಶನ್ ಅಂಡ್ ಎಂಟರ್‌ಪ್ರೆನ್ಯೂರ್‌ಶಿಪ್ ಸೆಲ್ ಎಂಬುದು ಶೈಕ್ಷಣಿಕ ಸಂಸ್ಥೆಯೊಳಗಿನ ಒಂದು ಮೀಸಲಾದ ಸಂಸ್ಥೆಯಾಗಿದೆ ಎಂದರು.

ಈ ಸಂಸ್ಥೆ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರಲ್ಲಿ ನಾವಿನ್ಯತೆ ಮತ್ತು ಉದ್ಯಮಶೀಲತೆಯ ಸಂಸ್ಕೃತಿಯನ್ನು ಬೆಳೆಸುತ್ತದೆ. ಈ ಕೋಶಗಳು ಸೃಜನಶೀಲ ವಿಚಾರಗಳನ್ನು ಪೋಷಿಸುವುದು. ಅವುಗಳನ್ನು ಕಾರ್ಯಸಾಧ್ಯವಾದ ಉದ್ಯಮಗಳಾಗಿ ಅಭಿವೃದ್ಧಿಪಡಿಸಲು ಬೆಂಬಲವನ್ನು ಒದಗಿಸುವುದು ಮತ್ತು ಮಹತ್ವಾಕಾಂಕ್ಷಿ ಉದ್ಯಮಿಗಳನ್ನು ಸಂಪನ್ಮೂಲಗಳು ಮತ್ತು ನೆಟ್‌ವರ್ಕ್‌ಗಳೊಂದಿಗೆ ಸಂಪರ್ಕಿಸುವ ಗುರಿಯನ್ನು ಹೊಂದಿವೆ ಎಂದು ಡಾ.ಪ್ರಮೋದಕುಮಾರ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಮಾತನಾಡಿ, ಆರೋಗ್ಯ ವಿಜ್ಞಾನದಲ್ಲಿ ಔಷಧ ವಿಜ್ಞಾನ ಪ್ರಮುಖ ಪಾತ್ರ ವಹಿಸುತ್ತದೆ. ಹೊಸ ಹೊಸ ಔಷಧಿಗಳ ಉತ್ಪನ್ನಗಳನ್ನು ಕಂಡು ಹಿಡಿದು ಅವಿಷ್ಕಾರ ಮಾಡಿ, ಮಾರುಕಟ್ಟೆಗೆ ತಂದು ಜನರಿಗೆ ಒದಗಿಸುವಂತದ್ದು, ಜನರ ಆರೋಗ್ಯವನ್ನು ಕಾಪಾಡುವಲ್ಲಿ ನಿಮ್ಮ ಪಾತ್ರವೂ ಮುಖ್ಯವಾಗಿದೆ, ಔಷದ ವಿಜ್ಞಾನ ವಿದ್ಯಾರ್ಥಿಗಳಲ್ಲಿ ಉದ್ಯಮಶೀಲತಾ ಚಿಂತನೆ ಮತ್ತು ನಾಯಕತ್ವವನ್ನು ಬೆಳೆಸುತ್ತದೆ ಎಂದರು.

ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಕಾಲೇಜು ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ, ಪ್ರಾಚಾರ್ಯ ವಾಯ್.ಶ್ರೀನಿವಾಸ್, ಟೆಕ್ ಸಲ್ಯೂಷನ್ ಪೌಂಡರ ಹಾಗೂ ಸಿಇಓ ಅಶೀಕ ಕುಲಕರ್ಣಿ ಅವರು ಉದ್ಯಮಶೀಲತಾ ಮನಸ್ಥಿತಿಯನ್ನು ಅನ್ವೇಷಿಸುವ ಬಗ್ಗೆ ಹಾಗೂ ಇನ್ನೋವೇಶನ್ ಎಲ್.ಎಲ್.ಪಿ ಕೋ.ಪೌಂಡರ ಹಾಗೂ ಮ್ಯಾನೆಜಿಂಗ್ ಪಾಟ್ನರ ರೋಹಿತ ಆರ್.ವಿ ಅವರು ಉದ್ಯಮಶೀಲತೆಗೆ ಲಭ್ಯವಿರುವ ವ್ಯಾಪ್ತಿ ಮತ್ತು ಬೆಂಬಲ ವ್ಯವಸ್ಥೆ ಕುರಿತು ಉಪನ್ಯಾಸ ನೀಡಿದರು.

# ಉದ್ಯೋಗ ಉತ್ತಮ ಬದುಕು ಡಾ.ಅರುಣಕುಮಾರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.3–ವಿದ್ಯಾರ್ಥಿಗಳ ಶೈಕ್ಷಣಿಕ ಅರ್ಹತೆಗೆ ತಕ್ಕಂತೆ ರಾಜ್ಯ, ರಾಷ್ಟ್ರ ಮಟ್ಟದ ಕಂಪನಿಗಳಲ್ಲಿ ಉತ್ತಮ ಉದ್ಯೋಗಾವಕಾಶಗಳಿದ್ದು ಉದ್ಯೋಗ ಪಡೆದು ವಿದ್ಯಾರ್ಥಿಗಳು ಸಮಾಜದಲ್ಲಿ ಉತ್ತಮ ಬದುಕು ರೂಪಿಸಿಕೊಳ್ಳಬಹುದಾಗಿದೆ ಎಂದು ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಹೇಳಿದರು.

ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉದ್ಯೋಗ ಮೇಳದಲ್ಲಿ ಆಯ್ಕೆಯಾದ 70 ಜನ ವಿದ್ಯಾರ್ಥಿಗಳನ್ನು ಬೆಂಗಳೂರಿನ ಸ್ಪೆಕ್ಟ್ರಂ ಟ್ಯಾಲೆಂಟ್ ಮ್ಯಾನೇಜಮೆಂಟ್ ಕಂಪನಿಗೆ ಬಿಳ್ಕೊಟ್ಟು ಮಾತನಾಡಿದ ಅವರು, ನಮ್ಮ ಸರಕಾರಿ ಪ್ರಥಮ ದರ್ಜೆ ಕಾಲೇಜಿನ 200 ವಿದ್ಯಾರ್ಥಿಗಳು ನೇಮಕಾತಿ ಆದೇಶ ಪಡೆದಿದ್ದು, ಅದರಲ್ಲಿ ಪ್ರಥಮ ಹಂತದಲ್ಲಿ 70 ವಿದ್ಯಾರ್ಥಿಗಳು ಉದ್ಯೋಗ ಮಾಡಲು ಬೆಂಗಳೂರಿಗೆ ಹೋಗುತ್ತಿರುವುದು ಕಾಲೇಜಿಗೆ ಸಂತಸ ತಂದಿದೆ ಎಂದರು.

ಬೆಂಗಳೂರಿನ ಸ್ಪೆಕ್ಟ್ರಂ ಟ್ಯಾಲೆಂಟ್ ಮ್ಯಾನೇಜಮೆಂಟ್ ಕಂಪನಿಯ ಮಾನವ ಸಂಪನ್ಮೂಲ ಅಧಿಕಾರಿ ಪ್ರಭು ಮಾತನಾಡಿ, ಉದ್ಯೋಗ ಮೇಳದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳು ತಮಗೆ ನೀಡಿರುವ ಉದ್ಯೋಗದಲ್ಲಿ ಪರಿಶ್ರಮ, ದಕ್ಷತೆ ಮತ್ತು ಆಸಕ್ತಿಯಿಂದ ಕಾರ್ಯ ನಿರ್ವಹಿಸಬೇಕು. ಉದ್ಯೋಗಕ್ಕೆ ಹಾಜರಾಗುವ ವಿದ್ಯಾರ್ಥಿಗಳಿಗೆ ಉದ್ಯೋಗದ ನಿಯಮಾವಳಿಗಳನ್ನು ತಿಳಿಸಿದರು. ಕಾಲೇಜಿನ ಬೋಧಕ, ಬೋಧಕೇತರ ಸಿಬ್ಬಂದಿಗಳು, ಪೋಷಕರು ವಿದ್ಯಾರ್ಥಿಗಳನ್ನು ಅಭಿನಂದಿಸಿ ಬಿಳ್ಕೊಟ್ಟರು.

# "ನೇರ ಫೋನ್ ಇನ್" ಕಾರ್ಯಕ್ರಮ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ


ಯಾದಗಿರಿ : ಜುಲೈ 03, : 2025ರ ಜುಲೈ 7ರ ಸೋಮವಾರ ರಂದು "ನೇರ ಫೋನ್ ಇನ್" ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಯಾದಗಿರಿ ವಿಭಾಗ ವಿಭಾಗೀಯ ನಿಯಂತ್ರಣಾಧಿಕಾರಿ ಸುನೀಲಕುಮಾರ.ಹ.ಚಂದರಗಿ ಅವರು ತಿಳಿಸಿದ್ದಾರೆ.

ಜಿಲ್ಲೆಯ ಸಾರ್ವಜನಿಕರಿಗೆ ಹಾಗೂ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಉಂಟಾಗುವ ಸಾರಿಗೆ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವನಿಟ್ಟಿನಲ್ಲಿ ಪ್ರತಿ ತಿಂಗಳು ಮೊದಲನೇ ಸೋಮವಾರ "ನೇರ ಫೋನ್ ಇನ್" ಕಾರ್ಯಕ್ರಮವನ್ನ ಆಯೋಜಿಸಲು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು ಕಕರಸಾ ನಿಗಮ ಕೇಂದ್ರ ಕೇಂದ್ರ ಕಛೇರಿ ಕಲಬುರಗಿ ಅವರು ಸೂಚನೆ ಅನ್ವಯ ಯಾದಗಿರಿ ಜಿಲ್ಲೆಯ ಸಾರ್ವಜನಿಕರಿಗೆ ಮತ್ತು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಇರುವ ಸಾರಿಗೆ ಸಮಸ್ಯೆಗಳ ಕುರಿತು ಕಕರಸಾ ನಿಗಮ ಯಾದಗಿರಿ ವಿಭಾಗದಿಂದ 2025ರ ಜುಲೈ 7ರ ಸೋಮವಾರ ಮದ್ಯಾಹ್ನ ಸಮಯ 15.30 ರಿಂದ 5.30 ಗಂಟೆಯ "ನೇರ ಫೋನ್ ಇನ್" ಕಾರ್ಯಕ್ರಮವನ್ನು ಯಾದಗಿರಿ ಜಿಲ್ಲೆಯ ಸಾರ್ವಜನಿಕರು ಮತ್ತು ಶಾಲಾ ಕಾಲೇಜು ವಿದ್ಯಾರ್ಥಿಗಳು ಈ "ನೇರ ಫೋನ್ ಇನ್" ಕಾರ್ಯಕ್ರಮದಲ್ಲಿ ಈ ಕೆಳಕಂಡ ದೂರವಾಣಿ ಸಂಖ್ಯೆಗಳಿಗೆ ಕರೆ ಮಾಡಿ ತಮ್ಮ ಸಾರಿಗೆ ವ್ಯವಸ್ಥೆ ಕುರಿತು ಇರುವ ಸಮಸ್ಯೆಗಳನ್ನು ತಿಳಿಸಿ ಪರಿಹಾರ ಕಂಡುಕೊಳ್ಳಲು ದೂ.ಸಂ.6366423882ಗೆ ಅಂದು "ನೇರ ಫೋನ್ ಇನ್" ಕಾರ್ಯಕ್ರಮದಲ್ಲಿ ವಿಭಾಗೀಯ ನಿಯಂತ್ರಣಾಧಿಕಾರಿಗಳು ಕಕರಸಾ ನಿಗಮ ಯಾದಗಿರಿ ವಿಭಾಗದಿಂದ ಜಿಲ್ಲೆಯ ಸಾರಿಗೆ ಸಮಸ್ಯೆಗಳ ಕುರಿತು ಸಾರ್ವಜನಿಕರೊಂದಿಗೆ ನೇರವಾಗಿ ಮಾತನಾಡಲಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳ ಉತ್ತಮ ಭವಿಷ್ಯಕ್ಕೆ ಗುಣಮಟ್ಟದ ಶಿಕ್ಷಣ ಅವಶ್ಯ–ಶಾಸಕ ಮೇಟಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.3–ಮಕ್ಕಳ ಉತ್ತಮ ಭವಿಷ್ಯಕ್ಕೆ ಶಿಕ್ಷಕರು ಗುಣಮಟ್ಟದ ಶಿಕ್ಷಣ ನೀಡುವುದಕ್ಕೆ ಪ್ರಾಮಾಣಿಕವಾಗಿ ಶ್ರಮಿಸಬೇಕು ಎಂದು ಶಾಸಕ ಎಚ್.ವಾಯ್. ಮೇಟಿ ಹೇಳಿದರು.



ತಾಲೂಕಿನ ಬೊಮ್ಮಣಗಿಯಲ್ಲಿ ಪ್ರಾರಂಭವಾಗಿರುವ ಕರ್ನಾಟಕ ಪಬ್ಲಿಕ್ ಶಾಲೆಯನ್ನು ಈಚೆಗೆ ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಣದಿಂದಲೇ ಮಕ್ಕಳ ಭವಿಷ್ಯ ಉಜ್ವಲವಾಗುತ್ತದೆ. ಈ ದಿಸೆಯಲ್ಲಿ ಅವರಿಗೆ ಗುಣಮಟ್ಟದ ಶಿಕ್ಷಣದ ಅವಶ್ಯಕತೆಯಿದೆ. ಶಿಕ್ಷಕರು ಒಳ್ಳೆಯ ಶಿಕ್ಷಣ ನೀಡಿ ಅವರ ಬದುಕಿಗೆ ಬೆಳಕಾಗಬೇಕು ಎಂದರು.

ಮುಳುಗಡೆಗೊಳಗಾದ ಬೊಮ್ಮಣಗಿ ಗ್ರಾಮದ ಸಂಪೂರ್ಣ ಸ್ಥಳಾಂತರ ಮಾಡುವಲ್ಲಿ ನಾನು ಪ್ರಾಮಾಣಿಕ ಪ್ರಯತ್ನ ಮಾಡಿದ್ದೇನೆ. ಗ್ರಾಮದ ಯಾವುದೇ ಅಭಿವೃದ್ಧಿ ಕಾರ್ಯಕ್ಕೆ ಹಿಂದೇಟು ಹಾಕಿಲ್ಲ. ಸಮಗ್ರ ಅಭಿವೃದ್ಧಿಗೆ ಇನ್ನಷ್ಟು ಕಾರ್ಯಕ್ರಮ ರೂಪಿಸಿ ಅನುಷ್ಠಾನಗೊಳಿಸುವುದಾಗಿ ಶಾಸಕ ಮೇಟಿ ಭರವಸೆ ನೀಡಿದರು.

ಜಿಲ್ಲಾ ಪಂಚಾಯತಿ ಮಾಜಿ ಅಧ್ಯಕ್ಷ ಬಸವಂತಪ್ಪ ಮೇಟಿ ಮಾತನಾಡಿ, ಗ್ರಾಮಸ್ಥರ ಮನವಿಗೆ ಸ್ಪಂದಿಸಿ ಶಾಸಕ ಮೇಟಿ ಅವರು ಗ್ರಾಮಕ್ಕೆ ಕರ್ನಾಟಕ ಪಬ್ಲಿಕ್ ಶಾಲೆಯನ್ನು ತಂದಿದ್ದಾರೆ. ಈ ಭಾಗದ ಮಕ್ಕಳು ಶಾಲೆಯ ಪ್ರಯೋಜನ ಪಡೆದು ಶಿಕ್ಷಣವಂತರಾಗಬೇಕು ಎಂದರು.

ಅತಿಥಿಗಳಾಗಿದ್ದ ಶಾಲಾ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ ಮಾತನಾಡಿ, ಗ್ರಾಮೀಣ ಭಾಗದ ಮಕ್ಕಳಿಗೂ ಉತ್ತಮ ಶಿಕ್ಷಣ ದೊರೆಯಲಿ ಎಂಬ ಉದ್ದೇಶದಿಂದ ಹಲವಾರು ಕಾರ್ಯಕ್ರಮಗಳನ್ನು ರೂಪಿಸುತ್ತಿದ್ದು, ಈ ಭಾಗದ ಮಕ್ಕಳಿಗೆ ಒಂದೇ ಸಂಸ್ಥೆಯಡಿ ಶಿಕ್ಷಣ ದೊರೆಯುವುದಕ್ಕೆ ಈ ಶಾಲೆ ಸಹಕಾರಿಯಾಗುತ್ತದೆ ಎಂದು ಹೇಳಿದರು.

ಬಿಲ್ ಕೆರೂರಿನ ಬಿಲ್ವಾಶ್ರಮ ಹಿರೇಮಠದ ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಗ್ರಾಪಂ ಅಧ್ಯಕ್ಷೆ ಶಾಂತವ್ವ ಗೌಡರ, ರಮೇಶ ಕೊಳ್ಳಾರ, ಶ್ರೀಕರ ದೇಸಾಯಿ, ಶರಣಪ್ಪ ಮಾಗನೂರ, ಹನಮಂತ ಪೂಜಾರಿ, ತಾಲ್ಲೂಕು ಅಕ್ಷರ ದಾಸೋಹ ಯೋಜನಾಧಿಕಾರಿ ನಾಗರಾಜ ದೇಶಪಾಂಡೆ, ಎಚ್.ಕೆ.ಗುಡೂರ, ಚಂದ್ರಶೇಖರ ನುಗ್ಲಿ, ಎಸ್.ಎಸ್.ಬೆಣ್ಣೂರ, ಪರಸಪ್ಪ ಅಬ್ಬಿಹಾಳ, ಹುಲ್ಲನಗೌಡ ಗೌಡರ ಮತ್ತಿತರರು ಇದ್ದರು.

# ಸರಕಾರಿ ಶಾಲೆಯ ಮಕ್ಕಳಿಗೆ ಬಿಳಿ ಸಮವಸ್ತ್ರವನ್ನು ಭುವನೇಶ್ವರಿ ಅವರಿಂದ ವಿತರಣೆ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಸರ್ಕಾರಿ ಶಾಲೆಯೆಡೆಗೆ ತಾತ್ಸಾರ ಇರಬಾರದು. ಖಾಸಗಿ ಶಾಲೆಗಳಿಗಿಂತ ಸಕಾರಿ ಶಾಲೆಗಳನ್ನು ಚೆನ್ನಾಗಿ ಅಭಿವೃದ್ಧಿ ಮಾಡುವ ಕೆಲಸವನ್ನು ಎಲ್ಲರೂ ಒಗ್ಗೂಡಿ ಮಾಡಬೇಕು.

ಸರ್ಕಾರ ನೀಡುವ ಸವಲತ್ತುಗಳ ಜೊತೆಯಲ್ಲಿ ಗ್ರಾಮಸ್ಥರು, ಹಳೆಯ ವಿದ್ಯಾರ್ಥಿಗಳು, ಪೋಷಕರು, ಸಮಾಜ ಸೇವಕರು, ದಾನಿಗಳು ಜೊತೆಗೂಡಿದಾಗ ಸರ್ಕಾರಿ ಶಾಲೆಗಳು ಉತ್ತಮವಾಗಿ ಮಕ್ಕಳ ಭವಿಷ್ಯ ಉಜ್ವಲವಾಗುತ್ತದೆ ಎಂದು ತಾಲ್ಲೂಕಿನ ಹಳ್ಳಿಖೇಡ (ಕೆ) ಸರಕಾರಿ ಹಿರಿಯ ಪ್ರಾಥಮಿಕ ಕನ್ನಡ ಮತ್ತು ಆಗ್ಲ ಮಾಧ್ಯಮ ಶಾಲೆಯ ಮಕ್ಕಳಿಗೆ ಪ್ರಭಾರಿ ಮುಖ್ಯ ಗುರುಗಳಾದ ಭುವನೇಶ್ವರಿ ಸ್ವತಃ ಖರ್ಚಿನಿಂದ ಬಿಳಿ ಸಮವಸ್ತ್ರವನ್ನು ವಿತರಣೆ ಮಾಡುವ ಮೂಲಕ ಮಾತನಾಡುತ್ತಾ ತಿಳಿಸಿದರು.

ಸರ್ಕಾರಿ ಶಾಲೆಯನ್ನು ಮತ್ತು ಮಕ್ಕಳ ಪ್ರಗತಿಯನ್ನು ಪ್ರಶಂಸಿಸಿದ್ದರು. ಮಕ್ಕಳಿಗೆ ಶಿಕ್ಷಣದ ಜೊತೆಯಲ್ಲಿ ದೇಶಪ್ರೇಮ, ತಂದೆ ತಾಯಿಯೆಡೆಗೆ ಗೌರವ, ಹಂಚಿ ತಿನ್ನುವ ಗುಣ ರೂಢಿಸಬೇಕು. ಮಕ್ಕಳು ಚೆನ್ನಾಗಿ ಓದಿ, ಗುರುಗಳು, ಪೋಷಕರು, ಗ್ರಾಮ ಹಾಗೂ ತಾಲ್ಲೂಕು ಹೆಮ್ಮೆ ಪಡುವಂತ ಸಾಧನೆ ಮಾಡಬೇಕು ಎಂದರು.

**ಸರ್ಕಾರಿ ಬಡವರ ಬ್ರಾಂಡ್ ಆಗುತ್ತಿದೆ:** ಸರ್ಕಾರಿ ಶಾಲೆಗೆ ಹೋಗುವ ಮಕ್ಕಳೆಂದರೆ ಬಡವರ ಮಕ್ಕಳೆಂಬ ಬ್ರಾಂಡ್ ಆಗಿ ಹೋಗಿದೆ, ಇಲ್ಲಿ ಸಿಗುವ ಯಾವುದೇ ಸೌಲಭ್ಯವನ್ನು ಖಾಸಗಿ ಶಾಲೆಗಳಲ್ಲಿ ಉಚಿತವಾಗಿ ಕೊಡಲು ಯಾರಿಂದಲೂ ಸಾಧ್ಯವಿಲ್ಲ, ಸರ್ಕಾರಿ ಶಾಲೆಗಳ ಬಗ್ಗೆ ಮಕ್ಕಳಲ್ಲಿ ಇನ್ನಿಲ್ಲದ ಭಾವನೆಯನ್ನು ತುಂಬುವಂತಹ ಕೆಲಸ ಪಾಲಕರಿಂದಾಗುತ್ತಿದೆ ಮೊದಲು ಶಾಲೆಗಳ ಬಗ್ಗೆ ಮೂಗು ಮುರಿಯುವುದನ್ನು ನಿಲ್ಲಿಸಬೇಕು ಎಂದರು. ಇದೆ ಸಂದರ್ಭದಲ್ಲಿ ಶಾಲೆಯ ಸಿಬ್ಬಂದಿ ವರ್ಗದವರಾದ ಲತಾ, ರತ್ನಮ್ಮ, ಶ್ರೀದೇವಿ, ವಿಶಾಲಾಕ್ಷಿ ಸಹ ಶಿಕ್ಷಕರು ಉಪಸ್ಥಿತರಿದ್ದರು.

# ಆದರ್ಶ ವಿದ್ಯಾಲಯಗಳಲ್ಲಿ ಖಾಲಿಯಿರುವ ಸೀಟುಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.03–ಪ್ರಸಕ್ತ 2025–26ನೇ ಸಾಲಿನಲ್ಲಿ ಆದರ್ಶ ವಿದ್ಯಾಲಯಗಳಲ್ಲಿ 7, 8, 9ನೇ ತರಗತಿಗಳಲ್ಲಿ ಖಾಲಿ ಇರುವ ಸೀಟುಗಳನ್ನು ಪ್ರವೇಶ ಪರೀಕ್ಷೆಯ ಮೂಲಕ ಪ್ರವೇಶ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಪ್ರಾಂಶುಪಾಲರು/ಉಪನಿರ್ದೇಶಕರು (ಆ) ಅವರು ತಿಳಿಸಿದ್ದಾರೆ.

ಈ ಪ್ರವೇಶ ಪರೀಕ್ಷೆಯು 2025ರ ಜುಲೈ 18 ರಂದು ನಿಗದಿಪಡಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು 2025ರ ಜುಲೈ 15 ರೊಳಗಾಗಿ ಆಯಾ ಆದರ್ಶ ವಿದ್ಯಾಲಯ ಮುಖ್ಯೋಪಾದ್ಯಾಯರಿಗೆ ಅರ್ಜಿ ಸಲ್ಲಿಸಬೇಕೆಂದು ಅವರು ತಿಳಿಸಿದ್ದಾರೆ.

# ಪಕ್ಷದ್ರೋಹ ಮಾಡುವುದು ಕಾಂಗ್ರೆಸ್ ಸಂಸ್ಕೃತಿಯಾಗಿದೆ: ಸೋಮನಾಥ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 03 : ಕಾಂಗ್ರೆಸ್ ಪಕ್ಷ ದೇಶದಲ್ಲಿ ಮುಳುಗುತ್ತಿರುವ ಹಡಗು. ಅದೊಂದು ಸುಡುವ ಮತ್ತು ವಿಭಜನೆಯ ಮನೆಯಾಗಿದೆ. ಪಕ್ಷದ್ರೋಹ ಮಾಡುವುದು ಕಾಂಗ್ರೆಸ್ ಸಂಸ್ಕೃತಿಯಾಗಿದೆಯೇ ವಿನಃ ಬಿಜೆಪಿ ಸಂಸ್ಕೃತಿಯಲ್ಲಿ ಇಲ್ಲ ಎಂದು ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ಹುಡಗಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬಿಜೆಪಿ ವತಿಯಿಂದ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಈ ಹಿಂದೆ ಜೆಡಿಎಸ್‌ನ ಬಾಬುರಾವ ಗುದಗೆ ಅವರಿಗೆ ಕಾಂಗ್ರೆಸ್‌ನ ಈಶ್ವರ ಖಂಡ್ರೆ ಬೆಂಬಲ ಸೂಚಿಸಿದ್ದರು. ದಿ. ಬಸವರಾಜ ಪಾಟೀಲ ಅವರು ಹುಮನಾಬಾದನಲ್ಲಿ ಬಿಜೆಪಿ ಅಭ್ಯರ್ಥಿಯಾಗಿದ್ದಾಗ ಕಾಂಗ್ರೆಸ್‌ನ ರಾಜಶೇಖರ ಪಾಟೀಲ ಅವರು ಬಿಜೆಪಿಗೆ ಬೆಂಬಲ ಸೂಚಿಸಿದ್ದರು. ಜಿಲ್ಲಾ ಪಂಚಾಯತ್ ಚುನಾವಣೆಯಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿದ್ದ ರಾಜಶೇಖರ ಪಾಟೀಲರ ಚಿಕ್ಕಪ್ಪ ವೀರಣ್ಣ ಪಾಟೀಲರಿಗೆ ಬೆಂಬಲ ಸೂಚಿಸಿ ಅಲ್ಲಿಯೂ ರಾಜಶೇಖರ ಪಾಟೀಲರು ಪಕ್ಷದ್ರೋಹ ಮಾಡಿದ್ದರು. ಹೀಗೆ ಪಕ್ಷದ್ರೋಹದ ಎಂಬುದು ಕಾಂಗ್ರೆಸ್ ಸಂಸ್ಕೃತಿಯಲ್ಲಿದೆಯೇ ವಿನಃ ಬಿಜೆಪಿ ಪಕ್ಷದಲ್ಲಿಲ್ಲ. ಇಂದು ಕಾಂಗ್ರೆಸ್‌ನವರು ಬಿಜೆಪಿ ಶಾಸಕರ ಮೇಲೆ ಮಾಡುತ್ತಿರುವ ಆರೋಪ ಸತ್ಯಕ್ಕೆ ದೂರವಾದುದು ಎಂದರು.

ಜಿಲ್ಲಾಡಳಿತ ನೆಲಕಚ್ಚಿಹೋಗಿದೆ. ಹಾಡುಹಗಲೇ ದರೋಡೆ ನಡೆಯುತ್ತಿವೆ. ಉಸ್ತುವಾರಿ ಸಚಿವರ ಕ್ಷೇತ್ರದಲ್ಲಿಯೇ ಮರಳು ಮಾಫಿಯಾ ನಡೆಯುತ್ತಿದೆ. ಎಲ್ಲಾ ರಂಗದಲ್ಲಿಯೇ ಭಾಲ್ಕಿ ಕ್ಷೇತ್ರದವರನ್ನೇ ನೇಮಕ ಮಾಡಿಕೊಳ್ಳುತ್ತಿರುವ ವಿಷಯ ನಾವು ಕಳೆದ ಒಂದೂವರೆ ವರ್ಷದಿಂದ ಹೇಳಿಕೊಂಡು ಬರುತ್ತಿದ್ದೇವೆ. ಆದರೆ ಕಾಂಗ್ರೆಸ್ ಪಕ್ಷದವರು ಇಂದು ಹೇಳುತ್ತಿದ್ದಾರೆ ಎಂದರು.

ಬಿಜೆಪಿಯವರು ಈಶ್ವರ ಖಂಡ್ರೆ ಮನೆಗೆ ಹೋಗಿದ್ದು ವಯೋವೃದ್ಧ ಭೀಮಣ್ಣ ಖಂಡ್ರೆಯವರ ಮನೆಗೆ ಆರೋಗ್ಯ ವಿಚಾರಿಸಲು ಹೋಗಿದ್ದಾರೆ. ಅದನ್ನೇ ನೆಪ ಮಾಡಿಕೊಂಡು ಕಾಂಗ್ರೆಸ್ ಮುಖಂಡರು ಆರೋಪ ಮಾಡುತ್ತಿರುವುದನ್ನು ನೋಡಿದರೆ ಅವರು ಮಾನವೀಯತೆಯನ್ನೇ ಕಳೆದುಕೊಂಡಿದ್ದಾರೆ ಎನಿಸುತ್ತಿದೆ ಎಂದು ಪಾಟೀಲ ಗುಡುಗಿದರು.

ಔರಾದ ಶಾಸಕ ಪ್ರಭು ಚವ್ಹಾಣ ಮಾತನಾಡಿ ಮಾಜಿ ಶಾಸಕ ರಾಜಶೇಖರ ಪಾಟೀಲ ಅವರು 2023ರ ಚುನಾವಣೆಯಲ್ಲಿ ಸೋಲು ಅನುಭವಿಸಿದ್ದಾರೆ. ಈಗ ಮಾಡಲು ಅವರಿಗೆ ಕೆಲಸ ಏನೂ ಇಲ್ಲ. ಹೀಗಾಗಿ ಬಿಜೆಪಿ ಮುಖಂಡರ ಮೇಲೆ ಆರೋಪ ಮಾಡುತ್ತ ಕುಳಿತಿದ್ದಾರೆ ಎಂದು ಪಾಟೀಲ ಅವರ ಕಾಲೆಳೆದರು.

ಬೀದರ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಮಾತನಾಡಿ ಕಾಂಗ್ರೆಸ್ ಪಕ್ಷದ ಒಳಜಗಳ ತಂದು ಬಿಜೆಪಿ ಮೇಲೆ ಹಾಕುತ್ತಿದ್ದಾರೆ. ಸಚಿವ ಈಶ್ವರ ಖಂಡ್ರೆಯವರಿಗೆ ನೇರವಾಗಿ ಮಾತನಾಡಲು ಆಗದ ಕಾಂಗ್ರೆಸ್‌ನ ರಾಜಶೇಖರ ಪಾಟೀಲ ಹಾಗೂ ಅರವಿಂದ ಅರಳಿಯವರು ಬಿಜೆಪಿ ಶಾಸಕರ ಹೆಗಲ ಮೇಲೆ ಬಂದೂಕು ಇಟ್ಟಿ ಈಶ್ವರ ಖಂಡ್ರೆಯವರಿಗೆ ಹೊಡೆಯುತ್ತಿದ್ದಾರೆ. ನಿಮ್ಮ ಜಗಳ ನೀವು ಸರಿಪಡಿಸಿಕೊಳ್ಳಿ ಎಂದರು.

ಶಾಸಕ ಶರಣ ಸಲಗರ ಮಾತನಾಡಿ ಜಿಲ್ಲೆಯ ಕಾಂಗ್ರೆಸ್ ಪಕ್ಷದಲ್ಲೇ ಒಬ್ಬರ ನಡುವೆ ಒಬ್ಬರಿಗೆ ಹೊಂದಾಣಿಕೆ ಇಲ್ಲ. ಹೀಗಾಗಿ ಮತ್ತೆ 2028ರಲ್ಲಿ ಕಾರ್ಯಕರ್ತರ ಶಕ್ತಿಯೊಂದಿಗೆ ಬಿಜೆಪಿ ಆರಕ್ಕೆ ಆರೂ ಕ್ಷೇತ್ರದಲ್ಲಿ ಗೆಲ್ಲಲಿದೆ ಎಂದು ಭರವಸೆ ವ್ಯಕ್ತಪಡಿಸಿದರು. ಇದೇ ವೇಳೆ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ, ಮಾಧ್ಯಮ ಪ್ರತಿನಿಧಿ ಶ್ರೀನಿವಾಸ ಚೌಧರಿ, ಬಸವರಾಜ ಪವಾರ್, ನಗರ ಘಟಕದ ಅಧ್ಯಕ್ಷ ಶಶಿ ಹೊಸಳ್ಳಿ ಸೇರಿದಂತೆ ಹಲವರಿದ್ದರು.

# ಸಿದ್ದರಾಮಯ್ಯ ದೇಶ ಕಂಡ ಅತ್ಯಂತ ಶ್ರಮಜೀವಿ ಮುಖ್ಯಮಂತ್ರಿ: ರಾಮಲಿಂಗಾರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜು.3:ಸಿದ್ದರಾಮಯ್ಯ ಅತ್ಯಂತ ಶ್ರಮಶೀಲ ಮುಖ್ಯಮಂತ್ರಿ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಅನುಷ್ಠಾನಗೊಳಿಸುವಲ್ಲಿ ಉತ್ಸುಕರಾಗಿರುವ ದೇಶದ ಅತ್ಯಂತ ಜನಪ್ರಿಯ ಮುಖ್ಯಮಂತ್ರಿಗಳಲ್ಲಿ ಒಬ್ಬರು ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಹೇಳಿದ್ದಾರೆ.

ನಂದಿ ಬೆಟ್ಟದಲ್ಲಿ ಸಂಪುಟ ಸಭೆ ನಡೆಸಲು ಸರ್ಕಾರ ನಿರ್ಧರಿಸಿರುವುದು ಮುಖ್ಯಮಂತ್ರಿ ರಾಜ್ಯದ ಎಲ್ಲಾ ಪ್ರದೇಶಗಳ ಅಭಿವೃದ್ಧಿಗೆ ಬದ್ಧವಾಗಿದ್ದಾರೆಂಬುದನ್ನು ತೋರಿಸುತ್ತದೆ ಎಂದು ರೆಡ್ಡಿ ಹೇಳಿದರು.

ಎಐಸಿಸಿ ಪ್ರಧಾನ ಕಾರ್ಯದರ್ಶಿ ಮತ್ತು ಕರ್ನಾಟಕದ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಪಕ್ಷದ ಶಾಸಕರೊಂದಿಗೆ ಪ್ರತ್ಯೇಕವಾಗಿ ಸಭೆ ನಡೆಸಿದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಯಾವುದೇ ಸಚಿವರನ್ನು ಸಭೆಗೆ ಕರೆದಿಲ್ಲ ಎಂದ ಅವರು, ಅವಕಾಶ ನೀಡಿದರೆ, ಉನ್ನತ ನಾಯಕರನ್ನು ಭೇಟಿಯಾಗುವುದಾಗಿ ಹೇಳಿದರು.

ಕೆಲವು ಕಾಂಗ್ರೆಸ್ ಶಾಸಕರು ತಮ್ಮ ಅಸಮಾಧಾನವನ್ನು ಬಹಿರಂಗವಾಗಿ ವ್ಯಕ್ತಪಡಿಸಿದ ಬಗ್ಗೆ, ಪಕ್ಷದ ವ್ಯವಹಾರಗಳನ್ನು ಪಕ್ಷದ ನಾಲ್ಕು ಗೋಡೆಗಳ ಒಳಗೆ ಚರ್ಚಿಸಬೇಕು ಎಂದ ಸಚಿವರು ರಾಜ್ಯ ಕಾಂಗ್ರೆಸ್‌ನಲ್ಲಿ ಎಲ್ಲವೂ ಚೆನ್ನಾಗಿದೆ ಮತ್ತು ಹೈಕಮಾಂಡ್ ನಿರ್ಧಾರವು ಅಂತಿಮವಾಗಿದೆ ಎಂದು ಅವರು ಹೇಳಿದರು.

# ಅಪಘಾತ ಸ್ಥಳಕ್ಕೆ ಶಾಸಕ ಬೆಲ್ದಾಳೆ ಭೇಟಿ ಪರಿಶೀಲನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಜು.3:ಘೋಡಂಪಳ್ಳಿ ರಸ್ತೆ ಅಪಘಾತ ಸ್ಥಳಕ್ಕೆ ಶಾಸಕ ಡಾ.ಶೈಲೇಂದ್ರ ಬೆಲ್ದಾಳೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ರಸ್ತೆ ಬದಿಯಲ್ಲಿ ಸಾರ್ವಜನಿಕರ ಸುಗಮ ಸಂಚಾರ ಹಾಗೂ ಪ್ರಾಣಕ್ಕೆ ಅಪಾಯವಾಗುವಂತಹ ತೆರೆದ ಬಾವಿಗಳು ಕ್ಷೇತ್ರದಲ್ಲಿ ಎಲ್ಲಿಯೂ ಇರಕೂಡದು. ಈ ಬಗ್ಗೆ ಸಮೀಕ್ಷೆ ನಡೆಸಿ ಅಂತಹ ಬಾವಿಗಳನ್ನು ಮುಚ್ಚಲು ಅಥವಾ ಬೇಲಿ ಅಳವಡಿಸಿ ಸುರಕ್ಷತಾ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಇಲ್ಲಿ ದುರಂತಕ್ಕೆ ಕಾರಣವಾದ ತೆರೆದ ಬಾವಿ ತಕ್ಷಣವೇ ಮುಚ್ಚುವಂತೆ ಸೂಚನೆ ನೀಡಿದರು.

ಸಾಂತ್ವನ: ದುರಂತದಲ್ಲಿ ಅಸುನೀಗಿದ ಘೋಡಂಪಳ್ಳಿ ಗ್ರಾಮದ ಲಕ್ಷ್ಮೀಕಾಂತ ಜೋಶಿ, ರವೀಂದ್ರ ಮೋನಪ್ಪ ಅವರ ಮನೆಗೆ ಭೇಟಿ ನೀಡಿದ ಶಾಸಕರು, ಕುಟುಂಬದವರಿಗೆ ಸಾಂತ್ವನ ಹೇಳಿದರು. ಅಪಘಾತದಲ್ಲಿ ಲಕ್ಷ್ಮೀಕಾಂತ ಜೋಶಿ ಮೃತಪಟ್ಟ ಸುದ್ದಿ ತಿಳಿದು ಅವರ ತಾಯಿ ಶಾರದಾಬಾಯಿ ಅವರು ಆಘಾತಕ್ಕೊಳಗಾಗಿ ಕೊನೆಯುಸಿರೆಳೆದಿರುವುದಕ್ಕೆ ಶಾಸಕರು ದಿಗ್ಭ್ರಮೆ ವ್ಯಕ್ತಪಡಿಸಿ, ಸಂತಾಪ ಸೂಚಿಸಿದ್ದಾರೆ. ಬಳಿಕ ಎಲ್ಲರ ಅಂತ್ಯಕ್ರಿಯೆಯಲ್ಲಿ ಪಾಲ್ಗೊಂಡು ಶ್ರದ್ಧಾಂಜಲಿ ಸಲ್ಲಿಸಿದರು. ಘಟನೆಯಲ್ಲಿ ಗಾಯಗೊಂಡು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರ ಆರೋಗ್ಯ ಕುರಿತು ವೈದ್ಯರೊಂದಿಗೆ ದೂರವಾಣಿ ಮೂಲಕ ವಿಚಾರಿಸಿದರು.

# ಅಪರಿಚಿತರು ಕೊಡುವಂತಹ ತಿನ್ನುವ ಪದಾರ್ಥಗಳ ಬಗ್ಗೆ ಜಾಗೃತರಾಗಿರಿ:ರವಿಶಂಕರ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.03 : ಹಲವಾರು ಯುವಕರು ಡ್ರಗ್ಸ್‌ಗೆ ಒಳಗಾಗುತ್ತಿರುವುದು ಆಕಸ್ಮಿಕವಾಗಿ ಅಪರಿಚಿತರು ಕೊಟ್ಟಿರುವಂತಹ ತಿನ್ನುವ ಹಾಗೂ ಪಾನೀಯ ಪದಾರ್ಥಗಳ ಸೇವನೆಯಿಂದ ದುಶ್ಚಟಗಳ ವ್ಯಸನಿಯಾಗುತ್ತಿದ್ದಾರೆ. ಆದ್ದರಿಂದ ಯುವಕರು ಬಹಳ ಜಾಗರೂಕರಾಗಿದ್ದು, ಇಂತಹ ಮಾದಕ ವಸ್ತುಗಳಿಂದ ದೂರವಿರಬೇಕೆಂದು ಅಬಕಾರಿ ಉಪ ಆಯುಕ್ತರಾದ ರವಿಶಂಕರ ತಿಳಿಸಿದರು.

ಅವರು ಗುರುವಾರ ತೋಟಗಾರಿಕೆ ಮಹಾವಿದ್ಯಾಲಯ ಬೀದರ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಸಂಯುಕ್ತಾಶ್ರಯದಲ್ಲಿ ಬೀದರ ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಹಾಗೂ ಕಳ್ಳಸಾಗಾಣಿಕೆ ವಿರೋಧಿ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಬೀದರ ಮನೋವೈದ್ಯ ಡಾ.ಅಮಲಾ ಷರೀಫ ಮಾತನಾಡಿ, ಡ್ರಗ್ಸ್ ಸೇವನೆಯಿಂದ ಕ್ಯಾನ್ಸರ್, ಸ್ಟ್ರೋಕ್, ಹೃದಯಘಾತ ಸೇರಿದಂತೆ ಇನ್ನಿತರೆ ಆರೋಗ್ಯ ಸಮಸ್ಯೆ ಹೆಚ್ಚಾಗುತ್ತಿವೆ. ಡ್ರಗ್ಸ್ ವ್ಯಸನದಿಂದ ಹೊರ ಬರುವ ಮಾರ್ಗ ಅತ್ಯಂತ ಕಠಿಣ. ಅಪರಿಚಿತರು ವಿತರಿಸುವ ಯಾವುದೇ ರೀತಿಯ ಖಾದ್ಯ ಪದಾರ್ಥಗಳನ್ನು ನೇರವಾಗಿ ನಿರಾಕರಿಸಿ, ದುಶ್ಚಟಗಳಿಂದ ದೂರವಿರಬೇಕು ಹಾಗೂ ಪರಿಸ್ಥಿತಿ ಕೈ ಮೀರುವ ಮೊದಲು ಈ ಸಮಸ್ಯೆಯಿಂದ ಹೊರಬರುವ ಮನಸ್ಸು ಮಾಡಿದರೆ ಖಂಡಿತ ಡ್ರಗ್ಸ್ ವ್ಯಸನದಿಂದ ಮುಕ್ತವಾಗಬಹುದೆಂದು ವಿದ್ಯಾರ್ಥಿಗಳಿಗೆ ಕಿವಿಮಾತನ್ನು ಹೇಳಿದರು.

ತೋಟಗಾರಿಕಾ ಮಹಾವಿದ್ಯಾಲಯದ ಡೀನ್ ಡಾ.ಎಸ್.ವಿ. ಪಾಟೀಲ್ ಮಾತನಾಡಿ, ಸಾಕಷ್ಟು ಯುವಕರು ಡ್ರಗ್ಸ್ ಎಂಬ ವ್ಯಸನಕ್ಕೆ ದಾಸರಾಗುತ್ತಿದ್ದಾರೆ. ಇದರಿಂದಾಗಿ ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಆರೋಗ್ಯವೂ ಹಾಳಾಗುತ್ತಿದೆ. ಕ್ರಮೇಣ ಮಾನಸಿಕ ಖಿನ್ನತೆಗೂ ಒಳಗಾಗುತ್ತಿದ್ದಾರೆ. ಕೆಲವೊಮ್ಮೆ ಡ್ರಗ್ಸ್ ಸೇವನೆಯಿಂದ ಹಲವಾರು ಸಾಮಾಜಿಕ ಅಪರಾಧಗಳು ಹೆಚ್ಚುತ್ತಿವೆ. ಆದ್ದರಿಂದ ಯುವಕರು ಮಾದಕ ದುಶ್ಚಟಗಳಿಗೆ ಒಳಗಾಗದೆ ವೈಜ್ಞಾನಿಕ ಜೀವನ ನಡೆಸಲು ಕರೆ ನೀಡಿದರು. ತೋಟಗಾರಿಕಾ ಮಹಾವಿದ್ಯಾಲಯ, ಬೀದರನ ರಾಷ್ಟ್ರೀಯ ಸೇವಾ ಯೋಜನಾ ಘಟಕದ ಕಾರ್ಯಕ್ರಮದ ಅಧಿಕಾರಿಗಳಾದ ಡಾ. ವಿಜಯಮಹಾಂತೇಶ, ಡಾ.ರಮೇಶ ನಾಯಕ ಹಾಗೂ

ರೆಡ್‌ಕ್ರಾಸ್‌ನ ಸಂಯೋಜಕರಾದ ಡಾ.ಕವಿತಾ ರಾಠೋಡ ಕಾರ್ಯಕ್ರಮವನ್ನು ಆಯೋಜಿಸಿದರು.

ಈ ಕಾರ್ಯಕ್ರಮದಲ್ಲಿ ಅಬಕಾರಿ ಉಪ ಅಧೀಕ್ಷಕ ಆನಂದ ಉಕ್ಕಲಿ, ಮನೋಶಾಸ್ತ್ರಜ್ಞ ಡಾ.ಮಲ್ಲಿಕಾರ್ಜುನ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೀರಶೇಟ್ಟಿ ಚನ್ನಶೆಟ್ಟಿ, ತೋಟಗಾರಿಕಾ ಮಹಾವಿದ್ಯಾಲಯದ ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿಗಳು ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಾನಿಸಾಹೇಬ್ ಜಾತ್ರೆ ನಿಮಿತ್ತ ಸಂದಲ್ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಜು.3:ತಾಲ್ಲೂಕಿನ ಕೋನಮೇಳಕುಂದಾ ಗ್ರಾಮದಲ್ಲಿ ಹಜರತ್ ಸಾನಿಸಾಹೇಬ್(ಮಡ್ಡಿಪೀರ್) ದೇವರ ಜಾತ್ರೆ ಗುರುವಾರ ಒಂಟೆ ಮೇಲೆ ಗಂಧ(ಸಂದಲ್) ಲೇಪಿಸಿ ಮೆರವಣಿಗೆ ನಡೆಸುವ ಮೂಲಕ ಜಾತ್ರೆಗೆ ಚಾಲನೆ ನೀಡಲಾಯಿತು.

ಗ್ರಾಮದ ಬಸವೇಶ್ವರ ಮಂದಿರ ಸಮೀಪದ ಪೀರ್ ಕೂಡಿಸುವ ಸ್ಥಳದಿಂದ ಆರಂಭವಾದ ಗಂಧ (ಸಂದಲ್) ಮೆರವಣಿಗೆ ಗಣೇಶ ಮಂದಿರ, ಹನುಮಾನ ಮಂದಿರ ಮಾರ್ಗದ ಮೂಲಕ ಸಾಗಿ ಹಜರತ್ ಸಾನಿಸಾಹೇಬ್(ಮಡ್ಡಿ ಪೀರ್) ದರ್ಗಾದವರೆಗೆ ನಡೆಯಿತು. ಗ್ರಾಮದ ರಸ್ತೆಯಲ್ಲಿ ಸಂದಲ್ ಮೆರವಣಿಗೆ ನಡೆದಾಗ ಗ್ರಾಮದ ಕುಂಭ ಕಳಸ ಹೊತ್ತ ಮಹಿಳೆಯರು ನೀರು ಸುರಿಸಿ, ನಮಿಸಿ ಭಕ್ತಿ ಸಮರ್ಪಿಸಿದರು. ಸಾದಿಕ್ ಮುಜಾವರ್, ಗೌಸೋದ್ದಿನ್ ಮುಜಾವರ್, ಚಂದ್ರಕಾಂತ ಪಾಟೀಲ, ನಾಗೇಶ ಮೊರಷಾದ ಸೇರಿದಂತೆ ಇತರರು ಇದ್ದರು.

# ಟೆಸ್ಟ್ ಕ್ರಿಕೆಟ್‌ನಲ್ಲಿ ಕ್ಯಾಪ್ಟನ್ ಗಿಲ್ ಚೊಚ್ಚಲ ದ್ವಿಶತಕ




ಎಡ್ಜ್‌ಬಾಸ್ಟನ್:ಜು.3: ಇಂಗ್ಲೆಂಡ್ ವಿರುದ್ಧ ನಡೆಯುವ 2ನೇ ಟೆಸ್ಟ್ ಪಂದ್ಯದಲ್ಲಿ ಟೀಂ ಇಂಡಿಯಾ ಯುವನಾಯಕ ಶುಭಮನ್ ಗಿಲ್ ಸ್ಮರಣೀಯ ದ್ವಿಶತಕ ಸಿಡಿಸಿದ್ದಾರೆ. ಈ ಮೂಲಕ ಹಲವು ದಿಗ್ಗಜರ ದಾಖಲೆಗಳನ್ನ ನುಚ್ಚುನೂರು ಮಾಡಿದ್ದಾರೆ. ಸದ್ಯ ಆಂಗ್ಲರ ಬೆವರಿಳಿಸುತ್ತಿರುವ ಕ್ಯಾಪ್ಟನ್ ಗಿಲ್ 136 ಓವರ್‌ಗಳ ಅಂತ್ಯದ ವೇಳೆಗೆ 362 ಎಸೆತಗಳಲ್ಲಿ 256 ರನ್ ಬಾರಿಸಿ ಅಜೇಯರಾಗುಳಿದಿದ್ದಾರೆ.

ನಾಯಕನಾದ ಚೊಚ್ಚಲ ಟೆಸ್ಟ್ ಸರಣಿಯಲ್ಲೇ ಚೊಚ್ಚಲ ದ್ವಿಶತಕ ಬಾರಿಸಿದ್ದಾರೆ. ಇದರೊಂದಿಗೆ ಟೀಂ ಇಂಡಿಯಾವನ್ನ ಬೃಹತ್ ಮೊತ್ತದತ್ತ ಕೊಂಡೊಯ್ದಿದ್ದಾರೆ. ಶುಭಮನ್ ಗಿಲ್ ನಾಯಕತ್ವದಲ್ಲಿ ಮುನ್ನಡೆಯುತ್ತಿರುವ ಟೀಂ ಇಂಡಿಯಾ ಕಳೆದ 18 ವರ್ಷಗಳಲ್ಲಿ ಇದೇ ಮೊದಲಬಾರಿಗೆ ಇಂಗ್ಲೆಂಡ್ ನೆಲದಲ್ಲಿ 500+ ರನ್ (ಇನ್ನಿಂಗ್ಸ್‌ವೊಂದರಲ್ಲಿ) ಗಳಿಸಿದೆ. ನಾಯಕ ಶುಭಮನ್ ಗಿಲ್ ಕೇವಲ ಮೂರೇ ಇನ್ನಿಂಗ್ಸ್‌ನಲ್ಲಿ 400ಕ್ಕೂ ಅಧಿಕ ರನ್ ಪೂರೈಸಿದ್ದಾರೆ. ಇದರಿಂದಾಗಿ ಗಿಲ್, ಸುನಿಲ್ ಗವಾಸ್ಕರ್, ವಿರಾಟ್ ಕೊಹ್ಲಿ ಅವರಂತಹ ದಿಗ್ಗಜರ ದಾಖಲೆಗಳನ್ನ ನುಚ್ಚುನೂರು ಮಾಡಿದ್ದಾರೆ.

ಎಡ್ಜ್‌ಬಾಸ್ಟನ್?ನಲ್ಲಿ ನಡೆಯುತ್ತಿರುವ ಆತಿಥೇಯ ಇಂಗ್ಲೆಂಡ್ ವಿರುದ್ಧದ 2ನೇ ಟೆಸ್ಟ್ ಪಂದ್ಯದಲ್ಲಿ ಚೊಚ್ಚಲ ದ್ವಿಶತಕ ಬಾರಿಸಿದ ಟೀಂ ಇಂಡಿಯಾ ನಾಯಕ ಶುಭ್?ಮನ್ ಗಿಲ್ ಇದೀಗ ಈ ದ್ವಿಶತಕದ ಜೊತೆಗೆ ಇಂಗ್ಲೆಂಡ್ ನೆಲದಲ್ಲಿ ಅದರಲ್ಲೂ ಟೆಸ್ಟ್ ಪಂದ್ಯದ ಇನ್ನಿಂಗ್ಸ್?ವೊಂದರಲ್ಲಿ ಅತ್ಯಧಿಕ ರನ್ ಕಲೆಹಾಕಿದ ಭಾರತದ ಆಟಗಾರನೆಂಬ ದಾಖಲೆ ಕೂಡ ನಿರ್ಮಿಸಿದ್ದಾರೆ.

ಇಂಗ್ಲೆಂಡ್ ವಿರುದ್ಧದ ಈ ಪಂದ್ಯದ ಮೊದಲ ಇನ್ನಿಂಗ್ಸ್?ನಲ್ಲಿ 222 ರನ್ ಬಾರಿಸಿದ ಕೂಡಲೇ ಗಿಲ್, ಟೀಂ ಇಂಡಿಯಾದ ಮಾಜಿ ನಾಯಕ ಸುನಿಲ್ ಗವಾಸ್ಕರ್ ಅವರ ದಾಖಲೆಯನ್ನು ಮುರಿದಿದ್ದಾರೆ. ಈ ಮೊದಲು ಗವಾಸ್ಕರ್ ಇನ್ನಿಂಗ್ಸ್?ವೊಂದರಲ್ಲಿ 221 ರನ್? ಬಾರಿಸುವ ಮೂಲಕ ಈ ದಾಖಲೆಯನ್ನು ತಮ್ಮ ಖಾತೆಗೆ ಹಾಕಿಕೊಂಡಿದ್ದರು. ಇದೀಗ ಆ ದಾಖಲೆ ಶುಭ್?ಮನ್ ಗಿಲ್ ಪಾಲಾಗಿದೆ.

ಮೊದಲ ಭಾರತೀಯ ಶುಭ್?ಮನ್ ಗಿಲ್

1979 ರಲ್ಲಿ ದಿ ಓವಲ್?ನಲ್ಲಿ ನಡೆದಿದ್ದ ಟೆಸ್ಟ್ ಪಂದ್ಯದಲ್ಲಿ ಇನ್ನಿಂಗ್ಸ್‌ವೊಂದರಲ್ಲೇ ಗವಾಸ್ಕರ್ 221 ರನ್? ಕಲೆಹಾಕಿದ್ದರು. ಅದು ಈವರೆಗಿನ ದಾಖಲೆಯಾಗಿತ್ತು. ಇದೀಗ ಇಂಗ್ಲೆಂಡ್ ವಿರುದ್ಧದ ಪಂದ್ಯದಲ್ಲಿ 222 ರನ್?ಗಳ ಗಡಿ ದಾಟಿರುವ ಗಿಲ್, ಗವಾಸ್ಕರ್ ಅವರ 46 ವರ್ಷಗಳ ಹಿಂದಿನ ದಾಖಲೆಯನ್ನು ಮುರಿಯುವಲ್ಲಿ ಯಶಸ್ವಿಯಾಗಿದ್ದಾರೆ. ಈ ಪಟ್ಟಿಯಲ್ಲಿ ಇವರಿಬ್ಬರನ್ನು ಬಿಟ್ಟರೆ, ಮೂರನೇ ಸ್ಥಾನದಲ್ಲಿರುವ ಕನ್ನಡಿಗ ರಾಹುಲ್ ದ್ರಾವಿಡ್, 2002ರಲ್ಲಿ ದಿ ಓವಲ್?ನಲ್ಲಿ ನಡೆದಿದ್ದ ಟೆಸ್ಟ್ ಪಂದ್ಯದಲ್ಲಿ 217 ರನ್ ಬಾರಿಸಿದ್ದರು. ಹಾಗೆಯೇ ಅದೇ ವರ್ಷ ಸಚಿನ್ ತೆಂಡೂಲ್ಕರ್ ಲೀಡ್ಸ್ ಟೆಸ್ಟ್ ಪಂದ್ಯದಲ್ಲಿ 193 ರನ್ ಬಾರಿಸಿದ್ದರು.

ಕೊಹ್ಲಿ ದಾಖಲೆ ಪುಡಿಪುಡಿ

ಇದು ಮಾತ್ರವಲ್ಲದೇ ತಮ್ಮ ಇನ್ನಿಂಗ್ಸ್‌ನಲ್ಲಿ 150 ರನ್ ಪೂರ್ಣಗೊಳಿಸಿದ ಕೂಡಲೇ ಬರ್ಮಿಂಗ್ಹ್ಯಾಮ್ ಮೈದಾನದಲ್ಲಿ ಅತಿದೊಡ್ಡ ಟೆಸ್ಟ್ ಇನ್ನಿಂಗ್ಸ್ ಆಡಿದ ಭಾರತೀಯ ಆಟಗಾರ ಎನಿಸಿಕೊಂಡರು. ಈ ಮೂಲಕ ವಿರಾಟ್ ಕೊಹ್ಲಿ ದಾಖಲೆ ಸಹ ಮುರಿದರು. 2018ರಲ್ಲಿ ರನ್ ಮಿಷಿನ್ ಕೊಹ್ಲಿ ಬರ್ಮಿಂಗ್ಹ್ಯಾಮ್ ಮೈದಾನದಲ್ಲೇ ಇನ್ನಿಂಗ್ಸ್‌ವೊಂದರಲ್ಲಿ 149 ರನ್ ಬಾರಿಸಿದ್ದರು. ಇದೀಗ ಈ ಎಲ್ಲ ದಾಖಲೆಗಳನ್ನ ನುಚ್ಚುನೂರು ಮಾಡಿದ್ದಾರೆ.

ದಿಗ್ಗಜರ ಎಲೈಟ್ ಪಟ್ಟಿಗೆ ಗಿಲ್

250+ ರನ್ ಬಾರಿಸಿ ಆಂಗ್ಲರ ಬೆವರಿಳಿಸುತ್ತಿರುವ ಕ್ಯಾಪ್ಟನ್ ಗಿಲ್ ಸದ್ಯ 136 ಓವರ್‌ಗಳ ಅಂತ್ಯದ ವೇಳೆಗೆ 362 ಎಸೆತಗಳಲ್ಲಿ 256 ರನ್ ಬಾರಿಸಿ ಅಜೇಯರಾಗುಳಿದಿದ್ದಾರೆ. ಇದರೊಂದಿಗೆ ಸಚಿನ್ ತೆಂಡೂಲ್ಕರ್, ವೀರೇಂದ್ರ ಸೆಹ್ವಾಗ್, ರೋಹಿತ್ ಶರ್ಮಾ ಬಳಿಕ ಟೆಸ್ಟ್ ಮತ್ತು ಏಕದಿನ ಕ್ರಿಕೆಟ್‌ನಲ್ಲಿ ದ್ವಿಶತಕ ಬಾರಿಸಿದ ಭಾರತೀಯ ಆಟಗಾರ ಎಂಬ ಹೆಗ್ಗಳಿಕೆಗೂ ಗಿಲ್ ಪಾತ್ರರಾಗಿದ್ದಾರೆ.

# ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಎಲ್ಲರ ಸಹಕಾರ ಅಗತ್ಯ : ಡಾ. ಬಿರಾದರ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :ಜು.3: ಸ್ಪರ್ಧಾತ್ಮಕ ಯುಗದಲ್ಲಿ ನಾವೂ ಹಲವಾರು ಕ್ಷೇತ್ರಗಳಲ್ಲಿ ಸಾಕಷ್ಟು ಪ್ರಗತಿ ಸಾಧಿಸಿದ್ದೇವೆ, ಇಲ್ಲಿ ಸಂಪನ್ಮೂಲಕ್ಕೆ ಯಾವುದೇ ಕೊರತೆಯಿಲ್ಲ, ಆದರೂ ಜನರು ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ, ಎಲ್ಲಾ ಭಾಗದಲ್ಲಿ ಆರೋಗ್ಯಕರ ಸಮಾಜ ನಿರ್ಮಾಣವಾದಾಗ ಮಾತ್ರ ಬದಲಾವಣೆ ಕಾಣಲೂ ಸಾಧ್ಯ, ಈ ನಿಟ್ಟಿನಲ್ಲಿ ಇಲಾಖೆಯ ಚಟುವಟಿಕೆಗಳಿಗೆ ಎಲ್ಲರೂ ಜಾಗೃತರಾಗಿ ಅಗತ್ಯ ಸಹಕಾರ ನೀಡಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ ಬಿರಾದಾರ ಮನವಿ ಮಾಡಿದರು.

ತಾಲ್ಲೂಕಿನ ಹತ್ತಿಕುಣಿ ಗ್ರಾಮದ ಆಂಜನೇಯ ದೇವಸ್ಥಾನ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪ್ರಾಥಮಿಕ ಆರೋಗ್ಯ ಕೇಂದ್ರ ಹತ್ತಿಕುಣಿ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಜನರಲ್ಲಿ ಆರೋಗ್ಯ ಅರಿವು ಮತ್ತು ಯೋಗ ಶಿಬಿರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಸಕ್ತ ದಿನಗಳಲ್ಲಿ ನಾಡಿನ ಶಕ್ತಿಯಾಗಿರುವ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಹೃದಯ ಸಮಸ್ಯೆಯಿಂದ ಸಾವನ್ನಪ್ಪುತ್ತಿರುವ ಘಟನೆ ದುಃಖಕರ, ಈ ಹಿಂದೆ ದೇಶದ ಇತಿಹಾಸವನ್ನು ಗಮನಿಸಿದಾಗ ಹಿರಿಯರನ್ನು ಆರೋಗ್ಯ ತಪಾಸಣೆಗಾಗಿ ತಮ್ಮ ಮಕ್ಕಳು ಆಸ್ಪತ್ರೆಗಳಿಗೆ ಕರೆದುಕೊಂಡು ಹೋಗುತ್ತಿರುವುದನ್ನು ಗಮನಿಸಿದ್ದೇವೆ, ಆದರೆ ಇಂದು ಸಣ್ಣ-ಪುಟ್ಟ ಮಕ್ಕಳು, ಯುವಕರನ್ನು ತಂದೆ-ತಾಯಂದಿರು ಚಿಕಿತ್ಸೆಗಾಗಿ ಆಸ್ಪತ್ರೆಗೆ ನಾನಾ ಕಾರಣಗಳಿಂದ ಕರೆದುಕೊಂಡು ಹೋಗುತ್ತಿದ್ದಾರೆ, ನಾವೆಲ್ಲರೂ ಆರೋಗ್ಯದ ಬಗ್ಗೆ ಸಕಾಲಕ್ಕೆ ಎಚ್ಚರಿಕೆ ಹಾಗೂ ಚಿಕಿತ್ಸೆ ಪಡೆಯುದು ಅವಶ್ಯಕವಾಗಿದೆ ಎಂದು ತಿಳಿಸಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.